ಬೀದರ * ಕಲಬುರಗಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕ ಪ್ರಸಾರ
Postal Registration No. BDR/054/2024-2026 • EMAIL ID:mallammanudi@gmail.com

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

Mallammanudi Regional NewsPaper ಸಂಪಾದಕರು: ರಮೇಶರೆಡ್ಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

| VOLUME-ಸಂಪುಟ:12 | ISSUE- ಸಂಚಿಕೆ: 325 | PAGE- ಪುಟ 8 | ಬುಧವಾರ – 25-12-2024, ಬೀದರ | RNI NO:KARKAN/2011/48371 | RS.ಬೆಲೆ 2/– |
|---|---|---|---|---|---|

# ಹುಮನಾಬಾದ ಸಂಪೂರ್ಣ ಸ್ತಬ್ಧ

## ಕೇಂದ್ರ ಗೃಹ ಸಚಿವ ಅಮಿತ್ ಶಾ ರವರನ್ನು ವಜಾಗೊಳಿಸುವಂತೆ ಆಗ್ರಹಿಸಿ ಬೃಹತ್ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವಂತೆ ಆಗ್ರಹಿಸಿ ಜನಪರ ಸಂಘಟನೆಗಳ ಒಕ್ಕೂಟ ಹಾಗೂ ವಿವಿಧ ಸಂಘಟನೆಯವರು ಪಟ್ಟಣದ ಅಂಬೇಡ್ಕರ್ ವೃತ್ತದ ಹತ್ತಿರ ಬೃಹತ್ ಪ್ರತಿಭಟನೆ ನಡೆಸಿದರು. ಬೃಹತ್ ಪ್ರತಿಭಟನೆ ಉದ್ದೇಶಿಸಿ ರಮೇಶ ಡಾಕುಳಗಿ, ಲಕ್ಷ್ಮೀ ಪುತ್ರ ಮಾಳಗೆ, ಅಂಕುಶ ಖೋಖಲೆ, ಶೇಖ್ ಮಕ್ಸದ್, ಪ್ರಭುರಾವ ತಾಳಮಡಗಿ, ಗಜೇಂದ್ರ ಕನಕಟಕರ್, ಗೌತಮ್ಮ ಸಾಗರ, ಗೌತಮ್ಮ ಚವ್ಹಾಣ, ಸುರೇಶ ಘಾಂಗ್ರೆ, ಮಲ್ಲಿಕಾರ್ಜುನ ಮಹೇಂದ್ರಕರ್ ಸೇರಿದಂತೆ ಇತರರು ಮಾತನಾಡಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಘೋಷಣೆಗಳನ್ನು ಕೂಗಿ, ಆಕ್ರೋಶ ವ್ಯಕ್ತಪಡಿಸಿದರು. ಅಮಿತ್ ಶಾ ಅವರು ರಾಜ್ಯಸಭೆಯಲ್ಲಿ ಅಂಬೇಡ್ಕರ್ ಬಗ್ಗೆ ನೀಡಿರುವ ಹೇಳಿಕೆ ದೇಶದ್ರೋಹ ಹೇಳಿಕೆಯಾಗಿದೆ. ರಾಷ್ಟ್ರಪತಿಗಳು ಕೂಡಲೇ ಗೃಹ ಸಚಿವರನ್ನು ಮಂತ್ರಿಸ್ಥಾನದಿಂದ ವಜಾ ಮಾಡಿ, ಬಂಧನಕ್ಕೊಳಪಡಿಸಬೇಕೆಂದು ಒತ್ತಾಯಿಸಿದರು. ಹಾಗೂ ಭಾಲ್ಕಿ ಡಿವೈಎಸ್‌ಪಿ ಶಿವಾನಂದ ಪವಾಡ್‌ಶೆಟ್ಟಿ ಇವರು ದಲಿತ ವಿರೋಧಿ ಹಾಗೂ ಸಚಿವರ ಕೈಗೊಂಬೆಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಿ ಇವರ ಮೇಲೆ ಕ್ರಮಕೈಗೊಳ್ಳಬೇಕೆಂದು ತಹಸೀಲ್ದಾರ್ ಮುಖಾಂತರ ರಾಷ್ಟ್ರಪತಿರವರಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ. ಪ್ರತಿಭಟನೆಯಲ್ಲಿ ಲಕ್ಷ್ಮಣರಾವ ಬುಳ್ಳಾ, ಪ್ರಭುರಾವ ಚಿತ್ತ–ಕೋಟಾ, ಜೈರಾಜ್ ವೈದ್ಯ, ಸತೀಷ ರತ್ನಕರ್, ಅನೀಲ್ ದೊಡ್ಡಿ, ಲೋಕೇಶ್ ಮೇತ್ರೆ, ಗೌತಮ್ಮ ಪ್ರಸಾದ್, ಅವಿನಾಶ ಪೋಲ್‌ದಾಸ್, ಶಿವಾನಂದ ಕಟ್ಟಿಮನಿ, ನಿಯಾಜೋದ್ದಿನ್ ಯಾಸೀರ್, ಸಚೀನ್ ದಾಡಗಿ ಕಲ್ಲೂರ, ಗಣಪತಿ ಅಷ್ಟೂರೆ, ರಾಹುಲ್ ಉದ್ದಾ, ಈಶ್ವರ ಕ್ರಾಂತಿ, ಶರಣಪ್ಪಾ ಮೇತ್ರೆ, ಬಸವರಾಜ್ ಮಾಳಗೆ, ವೀರಪ್ಪಾ ಧುಮ್ಮನಸೂರ ಸೇರಿದಂತೆ ಸಾವಿರಾರು ದಲಿತ ಮುಖಂಡರು ಪಾಲ್ಗೊಂಡಿದ್ದರು.



" ಕೇಂದ್ರ ಗೃಹ ಸಚಿವ ಅಮಿತ್ ಶಾ ರವರ ಹೇಳಿಕೆಗೆ ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ತೀವ್ರವಾಗಿ ಖಂಡಿಸಿದ್ದಾರೆ. ಅಮಿತ್‌ಶಾ ರವರನ್ನು ಗಡಿಪಾರು ಮಾಡಲು ಆಗ್ರಹಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ರವರ ಹೇಳಿಕೆಗೆ ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ತೀವ್ರವಾಗಿ ಖಂಡಿಸಿದ್ದಾರೆ. ಅಮಿತ್‌ಶಾ ರವರನ್ನು ಗಡಿಪಾರು ಮಾಡಲು ಆಗ್ರಹಿಸಿದ್ದಾರೆ. ನಾಲಿಗೆ ಹಾಗೂ ಮಿದುಳಿಗೆ ಲಿಂಕ್ ಇಲ್ಲದ ರೀತಿ ಅವರು ಮಾತನಾಡಿದ್ದು, ಸರಿಯಾದ ಕ್ರಮವಲ್ಲ ಈ ಕೂಡಲೇ ಅವರು ತಮ್ಮ ಸ್ಥಾನಕ್ಕೆ ರಾಜಿನಾಮೆ ಸಲ್ಲಿಸಬೇಕೆಂದು ಡಾ.ಚಂದ್ರಶೇಖರ ಪಾಟೀಲ ಪ್ರತಿಭನೆಯನ್ನದ್ದೇಶಿಸಿ ಮಾತನಾಡುತ್ತಾ ಒತ್ತಾಯಿಸಿದ್ದಾರೆ.

## ಸೋಮನಾಥ ಪಾಟೀಲ ಬಡವರ ಪರ ಇರುವ ನಾಯಕರಿದ್ದಾರೆ.




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದಬಡವರಬಂಧು ಯುವಕರ ಆಶಾಕಿರಣ ಜನ ಮೆಚ್ಚಿದ ನಾಯಕರು, ದಲಿತರ ಕಣ್ಣಮಣಿ, ಕಾರ್ಯಕರ್ತರ ಧ್ವನಿ, ಬೀದರ ಬಿ.ಜೆ.ಪಿ. ಜಿಲ್ಲಾ ಅಧ್ಯಕ್ಷರು ಸೋಮನಾಥ ಪಾಟೀಲ್ ಅಣ್ಣಾಜಿ ರವರಿಗೆ ಜನ್ಮದಿನದ ಹಾರ್ದಿಕ ಶುಭಾಶಯಗಳು ತಾಯಿ ಭಾರತಾಂಬೆ ದಿವ್ಯತ್ರೆಯರ ಆಶೀರ್ವಾದ ನಿಮ್ಮ ಮೇಲಿರಲಿ ಆ ಭಗವಂತ ನಿಮಗೆ ಸಕಲ ಸಂಪತ್ತು ಅಷ್ಟ ಐಶ್ವರ್ಯ ಆರೋಗ್ಯ ಆಯುಸ್ಸು ಯಶಸ್ಸು ಕೀರ್ತಿ ಸುಖ ಶಾಂತಿ ನೆಮ್ಮದಿ ಸಮೃದ್ಧಿ ಕೊಟ್ಟು ಕಾಪಾಡಲಿ ಎಂದು ಬಿಜೆಪಿ ಓಬಿಸಿ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿ ಹಾರೈಸಿದ್ದಾರೆ.



ಶರಣ ಸಂಗಮದಲ್ಲಿ ಚಿಂತಕ ಡಾ. ಬಸವರಾಜ ಮಠಪತಿ ಹೇಳಿಕೆ

# ಕಾಯಕ- ದಾಸೋಹದಿಂದ ಸಂಪದ್ಭರಿತ ರಾಷ್ಟ್ರ ನಿರ್ಮಾಣ ಸಾಧ್ಯ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಡಿ.24:-ಬಸವಣ್ಣನವರು ಪ್ರತಿಪಾದಿಸಿದಕಾಯಕ-ದಾಸೋಹ ಸಿದ್ಧಾಂತದ ಅನುಕರಣೆಯಿಂದ ಸುಭದ್ರ ಹಾಗೂ ಸಂಪದ್ಭರಿತ ರಾಷ್ಟ್ರ ನಿರ್ಮಾಣ ಸಾಧ್ಯವಿದೆ ಎಂದು ಕಲಬುರಗಿಯ ಚಿಂತಕ ಡಾ. ಬಸವರಾಜ ಮಠಪತಿ ಅಭಿಪ್ರಾಯಪಟ್ಟರು.

ನಗರದ ಬಸವಗಿರಿಯಲ್ಲಿ ಲಿಂಗಾಯತ ಮಹಾಮಠದ ವತಿಯಿಂದ ಸೋಮವಾರ ನಡೆದ 258ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಶರಣರ ಆರ್ಥಿಕ ನಿಲುವು ಕುರಿತು ಅವರು ಮಾತನಾಡಿದರು.

ಕಾಯಕ ಒಂದು ದೇಶದ ಆರ್ಥಿಕ ಸಿದ್ಧಾಂತದ ಬೆನ್ನೆಲುಬು. ಸಮಾಜದ ಪ್ರತಿಯೊಬ್ಬರೂ ದುಡಿದು ಉಣ್ಣಬೇಕು. ಕುಳಿತು ಉಣ್ಣುವುದು ಪಾಪ ಎಂದು ಹೇಳಿದರು.

ಕಾಯಕದಲ್ಲಿ ಮೇಲು-ಕೀಳು ಇಲ್ಲ. ಕಾಯಕದಲ್ಲಿ ನಿಷ್ಠೆ, ಪ್ರಾಮಾಣಿಕತೆ ಹಾಗೂ ಉತ್ಸಾಹ ಇರಬೇಕು. ಆದರೆ, ಯುವ ಸಮೂಹ ಕಡಿಮೆ ದುಡಿದು ಹೆಚ್ಚು ಗಳಿಸುವ ಮತ್ತು ಶ್ರಮಪಡದೆ ಗಳಿಸುವ ಕಡೆಗೆ ವಾಲುತ್ತಿರುವುದು ಕಳವಳಕಾರಿ. ಸಂಪತ್ತು ಸಂಗ್ರಹಣೆಯ ಹಪಾಹಪಿತನ ಒಳ್ಳೆಯದಲ್ಲ ಎಂದು ಹೇಳಿದರು.

ಸಮಾಜ ಶೋಷಣೆ ಮುಕ್ತವಾಗಬೇಕಾದರೆ ಪ್ರತಿಯೊಬ್ಬರೂ ದುಡಿಯಲೇಬೇಕು. ದುಡಿದದ್ದನ್ನು ತಾನೊಬ್ಬನೇ ಉಣ್ಣದೆ ಸ್ವಲ್ಪ ಭಾಗ ದಾಸೋಹ ಮಾಡಬೇಕು. ಕಾಯಕ ಮತ್ತು ದಾಸೋಹಗಳು ಸಮಾಜದ ಎರಡು ಕಣ್ಣುಗಳಾದಾಗ ಸುಂದರ ವಿಶ್ವ ನಿರ್ಮಾಣವಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಬಸವಕಲ್ಯಾಣದ ಬಸವಪ್ರಭು ಸ್ವಾಮಿಜಿ ಮಾತನಾಡಿ, ಆಧುನಿಕ ಯುಗದಲ್ಲಿ ಭೌತಿಕ ಸಂಪತ್ತು ಹೆಚ್ಚಾಗುತ್ತಿದ್ದರೂ ಜನರು ಮಾನಸಿಕ ದಾರಿದ್ರ್ಯಕ್ಕೆ ಒಳಗಾಗುತ್ತಿದ್ದಾರೆ. ಕೀಳು ಅಭಿರುಚಿ, ಕೀಳು ಕಾರ್ಯಗಳತ್ತ ಹರಿಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಮನದಲ್ಲಿಯ ಕ್ರೋಧ, ಕುಭಾಷೆ, ಕುತಂತ್ರತನಗಳನ್ನು ತೆಗೆಯಲು ಶರಣ ಸಂಗಮದಂತಹ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಹೇಳಿದರು.

ಕಲುಷಿತ ವಾತಾವರಣ ತಿಳಿಗೊಳಿಸಲು ಶರಣರ ವಚನಗಳನ್ನು ಓದಬೇಕು. ಭಾವನೆ ಶುದ್ಧವಾಗಲು ಇಷ್ಟಲಿಂಗ ಉಪಾಸನೆ ಮಾಡಬೇಕು ಎಂದು ಸಲಹೆ ಮಾಡಿದರು.


ಸಾನಿಧ್ಯ ವಹಿಸಿದ್ದ ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮಿಜಿ ಮಾತನಾಡಿ, ಸತ್ಯದ ದಾರಿಯಲ್ಲಿ ನಡೆದು, ಸತ್ಯ ಶುದ್ಧ ಕಾಯಕ, ದಾಸೋಹ ಮಾಡಿ, ಸಂತೃಪ್ತಿಯಿಂದ ಬದುಕುವುದೇ ಶರಣ ಜೀವನ ಎಂದು ನುಡಿದರು.

ವಚನ ವಿಜಯೋತ್ಸವ ಅಕ್ಕ ಅನ್ನಪೂರ್ಣ ತಾಯಿಯವರ ಪ್ರಾಣವಾಗಿತ್ತು. ಅವರ ಕೊನೆಯ ದಿನಗಳಲ್ಲಿ ವಚನ ವಿಜಯೋತ್ಸವದ ವೈಭವ ಮರುಕಳಿಸಬೇಕೆಂದು ಹಂಬಲಿಸಿದ್ದರು. ಲಿಂಗಾಯತ ಮಹಾಮಠದಿಂದ ಅರ್ಥಪೂರ್ಣ ವಚನ ವಿಜಯೋತ್ಸವ ಆಚರಿಸೋಣ ಎಂದರು.

ರಮೇಶ ಚಿಕ್ಕಲಿಂಗೆ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ, ರಾಜ್ಯ ಪರಿಷತ್ ಸದಸ್ಯ ರಾಜಕುಮಾರ ಮಾಳಗೆ, ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಪ್ರಭುಲಿಂಗ ತೂಗಾವೆ, ಖಜಾಂಚಿ ದೇವಪ್ಪ ಚಾಂಬೋಳೆ, ಸಾಹಿತಿ ರಮೇಶ ಮಠಪತಿ ಉಪಸ್ಥಿತರಿದ್ದರು.

ಉಷಾ ರಮೇಶ ಬೆಳಕೋಟೆ ಗುರುಪೂಜೆ ನೆರವೇರಿಸಿದರು. ನೀಲಮ್ಮನ ಬಳಗದ ಸದಸ್ಯೆಯರು ಪ್ರಾರ್ಥನೆಗೈದರು. ಶ್ಯಾಮಲಾ ಅಶೋಕ ಎಲಿ ದಂಪತಿ ಭಕ್ತಿ ದಾಸೋಹಗೈದರು. ರಾಜಕುಮಾರ ಪಾಟೀಲ ಸ್ವಾಗತಿಸಿದರು. ಪ್ರವೀಣ್ ಬಿರಾದಾರ ವಂದಿಸಿದರು.

# ಅಯ್ಯಪ್ಪ ಸ್ವಾಮಿ ದೇವಸ್ಥಾನ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 24 :- ನಗರದ ನೌಬಾದ್‌ನಲ್ಲಿ ಅಯ್ಯಪ್ಪ ಸ್ವಾಮಿ ನೂತನ ದೇವಸ್ಥಾನವನ್ನು ಭಾನುವಾರ ಉದ್ಘಾಟಿಸಲಾಯಿತು.

ಅಯ್ಯಪ್ಪ ಸ್ವಾಮಿ ಅವರ ಮೂರ್ತಿ ಸ್ಥಾಪನೆ ಹಾಗೂ ಕಳಸಾರೋಹಣ ಶ್ರದ್ಧೆ, ಭಕ್ತಿಯಿಂದ ನೆರವೇರಿದವು.

ನೌಬಾ ದ್‌ನ ಅಯ್ಯಪ್ಪ ಸ್ವಾಮಿ ಸೇವಾ ಸನ್ನಿಧಾನ ಟ್ರಸ್ಟ್‌ನ ಶ್ರೀನಿವಾಸ್ ಗುರುಸ್ವಾಮಿ ಹಾಗೂ ಅವರ ಶಿಷ್ಯ ಮಾಲಾಧಾರಿಗಳ ಸಂಕಲ್ಪದ ಫಲವಾಗಿ ಸುಂದರ ದೇಗುಲ ನಿರ್ಮಾಣಗೊಂಡಿದೆ.

ಉದ್ಘಾಟನಾ ಸಮಾರಂಭದಲ್ಲಿ ಹವಾ ಮಲ್ಲಿನಾಥ ಮಹಾರಾಜ, ಸೊಂತದ ಶಂಕರಲಿಂಗ ಮಹಾರಾಜ, ರಾಜಶೇಖರ ಶಿವಾಚಾರ್ಯ ಗೋರಟಾ, ಶಿವಾಜಿ ಮಹಾರಾಜ ಹೈದರಾಬಾದ್, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಟ್ರಸ್ಟ್ ಅಧ್ಯಕ್ಷ ಶ್ರೀನಿವಾಸ್ ಗುರುಸ್ವಾಮಿ, ಪ್ರಮುಖರಾದ ಓಂಕಾರ ಪೂಜಾ ಬೇಕರಿ, ರವಿ ರೆಡ್ಡಿ, ನಾಗನಾಥ ಮಡಿವಾಳ, ನಾಗನಾಥ ತಾದಲಾಪುರ, ಸತೀಶ ಮೂಲಗೆ ಮತ್ತಿತರರು ಇದ್ದರು. ಮಾಲಾಧಾರಿಗಳು ಹಾಗೂ ಭಕ್ತರು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಕೃಷಿಕ ಸಮಾಜ ಚುನಾವಣೆ: 15 ಪದಾಧಿಕಾರಿಗಳ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24-ತಾಲ್ಲೂಕಿನ ಕೃಷಿಕ ಸಮಾಜಜ ಚುನಾವಣೆಗೆ 2025-26 ರಿಂದ 2029-30 ನೇ ಸಾಲಿನವರೆಗೆ ನಡೆಯುವ ಕಾರ್ಯಗಾರಿ ಸಮಿತಿ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಬಳ್ಳಾರಿ ನಗರದ ಪಿ.ಗಾದೆಪ್ಪ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಪರಮದೇವನಹಳ್ಳಿ ಗ್ರಾಮದ ಜಿ.ಸತ್ಯನಾರಾಯಣರೆಡ್ಡಿ ಉಪಾಧ್ಯಕ್ಷರಾಗಿ, ಕೊರ್ಲ್ಲಗುಂದಿ ಗ್ರಾಮದ ವೈ.ಲಿಂಗರಾಜು ಖಜಾಂಚಿಯಾಗಿ, ಬಳ್ಳಾರಿ ನಗರದ ಎನ್.ಸುರೇಶ್ ನಂದಿ ಜಿಲ್ಲಾ ಪ್ರತಿನಿಧಿಯಾಗಿ ಮತ್ತು ಸಿರಿವಾರ ಗ್ರಾಮದ ಕೆ.ಚಂದ್ರಪ್ಪ ಪ್ರಧಾನ ಕಾರ್ಯದರ್ಶಿಯಾಗಿ ಅವಿರೋಧ ಆಯ್ಕೆಯಾಗಿದ್ದಾ-ರೆ. ತಾಲ್ಲೂಕಿನ ಕೃಷಿಕ ಸಮಾಜಕ್ಕೆ ಒಟ್ಟು 15 ಜನ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಹಾಗೂ ಸಹಾಯಕ ಕೃಷಿ ನಿರ್ದೇಶಕ ಎಂ.ದಯಾನಂದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

--------

**PAPER PROCLAMATION.**

**IN THE COURT OF THE SENIOR CIVIL JUDGE & JMFC AT BASAVAKALYAN**

**M.V.C. NO. 280/ 2023**

Claimant Petitioner:

1) Smt. Kaveri W/o Late Chandrakanth Sheelvanth, age 42 years, occupation:Household

2) Swati D/o Late Chandrakanth Sheelvanth age 24 years, occ:Student

3) Sourabh S/o Late Chandrakanth Sheelvanth, age: 20 years, occ: Student All R/o

Village Dhannura-(K) Tq: Basavakalyan, Dist. Bidar.

//V/S//

Respondents:

1) Md. Pasha S/o Abdul Razak miya Age: Major occu: Owner of Lorry R/o 27/3 Shivaji Nagar, Basavakalyan. Dist. Bidar.

2) IFFCO-TOKIO General Insurance Company Ltd., Havappa Complex No. 200-201 & 202 Udgir Road, Shivanagar South Bidar- 585401.

Sub: Petition Under Section 166 of MV Act.

To,

The Respondent No. 1

Md. Pasha S/o Abdul Razak miya Age: Major occu: Owner of Lorry R/o 27/3 Shivaji Nagar, Basavakalyan, Dist. Bidar

Whereas the claimant has filed a claim petition before the Hon'ble Senior Civil Judge at Basavakalyan, Dist. Bidar, Karnataka State, Petition U/S 166 of M.V. Act, wherein the Respondent No.1 by name Mohammed Pasha S/o Abdul Razak Miyan, Age: about 54 years, occu Lorry Business, R/o Kali Galli, Basavakalyan, as such you are hereby required to show cause within thirty day of the service of the summons through paper proclamation on or before 31.08 2024 at 11.00 am in person or by a pleader/ Advocate duly instructed as to why the relief prayed for should not be granted. Take notice that in the event of default claim will be heard and determined in your absence.

Given under my hand and seal of the court, this the 11st day of July-2024

// By order of the Court//
Chief Ministerial Officer
Senior Civil Judge & JMFC Court,
Basavakalyan.

# ಗಾಂಧಿ ಗಂಜ್ ಬ್ಯಾಂಕಿಗೆ ಅವಿರೋಧ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 24 :- ದಿ ಗಾಂಧಿ ಗಂಜ ಕೋ-ಆಪರೇಟಿವ್ ಬ್ಯಾಂಕ ಲಿ, ಬೀದರ ಇದರ ಐದು ವರ್ಷದ ಆಡಳಿತ ಮಂಡಳಿಯ 15 ಜನ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ನಾಗರಾಜ ಅವರು ತಿಳಿಸಿದ್ದಾರೆ.

ಡಿ.23ರಂದು ನಡೆದ ಚುನಾವಣೆಯಲ್ಲಿ 15 ಜನ ಆಡಳಿತ ಮಂಡಳಿಯ ನಿರ್ದೇಶಕರಾಗಿ ವಿಜಯಕುಮಾರ ಪಾಟೀಲ, ಕಾಶಿನಾಥ ಶೆಟಕಾರ್, ದತ್ತಾತ್ರೇಯ ಸಿಂದೋಲ, ಸೂರ್ಯಕಾಂತ ಶೆಟಕಾರ್, ಸುನೀಲಕುಮಾರ ಬಿರಾದರ, ಮಡಿವಾಳಪ್ಪ ಗಂಗಶೆಟ್ಟಿ, ವಿಶ್ವನಾಥ ಕಾಜಿ, ಭರತ ಶೆಟಕಾರ್, ಉಮೇಶಕುಮಾರ್ ಮೂಲಿಮನಿ, ಜೈಕುಮಾರ ಕಾಂಗೆ, ಅಮರನಾಥ ಫೂಲೆಕರ, ಅಶೋಕ ಲಾಚೂರಿಯ, ಶಿವನಾಥ ಪಾಟೀಲ, ಜ್ಯೋತಿ ಗೌರಶೆಟ್ಟಿ, ಪ್ರವೀಣಾ ರಾಜೇಂದ್ರ ರೆಡ್ಡಿ ಅವರನ್ನು ಮುಂದಿನ ಐದು ವರ್ಷದ ಅವಧಿಗೆ ಆಡಳಿತ ಮಂಡಳಿಯ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತರಾಷ್ಟ್ರೀಯ ಕ್ಲೌಡ್ ಕಂಪ್ಯೂಟಿಂಗ್ ಮತ್ತು ಆರ್ಟಿಫಿಸಿಯಲ್ ಇಂಟಲಿಜೆನ್ಸ್ ಕಾರ್ಯಾಗಾರ

# ಆರೋಗ್ಯದ ಏರಿಳಿತ ಕಂಡುಹಿಡಿಯುವಲ್ಲಿ ಎಐ ಸಹಕಾರಿ: ಪ್ರೊ. ರಾಜಕುಮಾರ ಬುಯ್ಯಾ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 24 :- ವ್ಯಕ್ತಿಯ ಶರೀರದಲ್ಲಾಗುವ ಹಲವಾರು ಬದಲಾವಣೆಗಳು, ಏರಿಳಿತಗಳನ್ನು ತಿಳಿಯಲು ಎಐ ಸಾಕಷ್ಟು ಸಹಕಾರಿಯಾಗಿದೆ. ಬಿಪಿ, ಶುಗರ್, ಹೃದಯ ಬಡಿತ, ಪಚನ ಕ್ರಿಯೆ ಹಾಗೂ ಇನ್ನಿತರ ಏರಿಳಿತಗಳ ಬಗ್ಗೆ ಮುನ್ಸೂಚನೆ ನೀಡಲು ಕ್ಲೌಡ್ ಕಂಪ್ಯೂಟಿಂಗ್ ಮತ್ತು ಆರ್ಟಿಫಿಸಿಯಲ್ ಇಂಟಲಿಜೆನ್ಸ್ ಅತ್ಯವಶ್ಯಕವಾಗಿದೆ ಎಂದು ಆಸ್ಟ್ರೇಲಿಯಾದ ಮೆಲ್ಬೋರ್ನ್ ವಿಶ್ವವಿದ್ಯಾಲಯದ ಕ್ಲೌಡ್ ಕಂಪ್ಯೂಟಿಂಗ್ ಮತ್ತು ಆರ್ಟಿಫಿಸಿಯಲ್ ಇಂಟಲಿಜೆನ್ಸ್ ಸಂಶೋಧಕ ಪ್ರೊ. ರಾಜಕುಮಾರ ಬುಯ್ಯಾ ತಿಳಿಸಿದರು.

ಕರ್ನಾಟಕ ಕಾಲೇಜಿನ ವತಿಯಿಂದ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ ನ್ಯೂ ಟ್ರೆಂಡ್ಸ್ ಇನ್ ಕ್ಲೌಡ್ ಕಂಪ್ಯೂಟಂಗ್ ಆಂಡ್ ಆರ್ಟಿಫಿಸಿಯಲ್ ಇಂಟಲ್ಲಿಜೆನ್ಸ್ ಅಂತರಾಷ್ಟ್ರೀಯ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿದರು.

ಕ್ಲೌಡ್ ಕಂಪ್ಯೂಟಿಗ್ ಮತ್ತು ಆರ್ಟಿಫಿಸಿಯಲ್ ಇಂಟಲಿಜೆನ್ಸ್ ಬಳಸಿಕೊಂಡು ಯಶಸ್ವಿಯಾಗಿ ಕೃಷಿ ಮಾಡಬಹುದು. ಈ ನಿಟ್ಟಿನಲ್ಲಿ ಇದು ಅತ್ಯಂತ ಸಹಕಾರಿಯಾಗಿದೆ. ಮಕ್ಕಳು ಜಗತ್ತಿನಲ್ಲಿ ಆಗುವ ಬೆಳವಣಿಗೆಗಳನ್ನು ಎಐ ನಿಂದಲೇ ಕಂಡುಹಿಡಿಯಬಹುದು ಎಂದರಲ್ಲದೆ ಮುಂದಿನ ಬಾರಿ ನಾನು ಮತ್ತೆ ನಿಮ್ಮ ಕಾಲೇಜಿಗೆ ಬರುವ ಮೊದಲು ನಿಮ್ಮ ಕಾಲೇಜಿನ ವಿವಿಧ ತರಗತಿಗಳಲ್ಲಾಗುವ ಘಟನೆಗಳನ್ನು ಸಿಸಿ ಕ್ಯಾಮರಾ ಜೊತೆಗೆ ಪ್ರಾಂಶುಪಾಲರು ಎಲ್ಲೇ ಇದ್ದರೂ ಅವರಿಗೆ ಮುನ್ಸೂಚನೆ ನೀಡಬೇಕು. ಆ ರೀತಿಯಾಗಿ ಎಐ ಬಳಸಿಕೊಂಡು ಹೊಸ ತಂತ್ರಜ್ಞಾನ ಕಂಡುಹಿಡಿಯಿರಿ ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಕ.ರಾ.ಶಿ. ಸಂಸ್ಥೆಯ ಉಪಾಧ್ಯಕ್ಷ ಬಿ.ಜಿ.ಶೆಟಕಾರ ಮಾತನಾಡಿ, ಪ್ರೊ. ರಾಜಕುಮಾರ ಬುಯ್ಯಾ ಅವರು ಕರ್ನಾಟಕ ಕಾಲೇಜಿನಲ್ಲಿಯೇ ಅಧ್ಯಯನ ಮಾಡಿ, ಆಸ್ಟ್ರೇಲಿಯಾದ ಮೆಲ್ಬೋರ್ನ್ ವಿಶ್ವವಿದ್ಯಾಲಯದಲ್ಲಿ ಸಂಶೋಧಕರಾಗಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಅವರು ದೂರದಿಂದ ಆಗಮಿಸಿ ನಮ್ಮ ಮಕ್ಕಳಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ. ಅದನ್ನು ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ಮಾತನಾಡಿ ಪ್ರೊ. ರಾಜಕುಮಾರ ಬುಯ್ಯಾ ಅವರು ತಮ್ಮ ಜ್ಞಾನವನ್ನು ನಮ್ಮ ಕಾಲೇಜಿನ ಮಕ್ಕಳಿಗೂ ಧಾರೆ ಎರೆಯುತ್ತಿರುವುದು ಹೆಮ್ಮೆ ಎನಿಸಿದೆ. ನಮ್ಮ ಕಾಲೇಜಿನ ವಿದ್ಯಾರ್ಥಿಯೊಬ್ಬರು ಆಸ್ಟ್ರೇಲಿಯಾದಲ್ಲಿ ಕ್ಲೌಡ್ ಕಂಪ್ಯೂಟಿಂಗ್ ಮತ್ತು ಆರ್ಟಿಫಿಸಿಯಲ್ ಇಂಟಲಿಜೆನ್ಸ್ ಸಂಶೋಧಕರಾಗಿ ಸೇವೆ ಸಲ್ಲಿಸುತ್ತಿರುವುದು ಖುಷಿ ಎನಿಸಿದೆ ಎಂದರು.

ವೇದಿಕೆ ಮೇಲೆ ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ ವಿಭಾಗದ ಹಿಂದಿನ ಡೀನ್ ಆದ ಪ್ರೊ. ಸಿ. ಕೃಷ್ಣಮೋಹನ್, ತಾತು ಇಸ್ಟೋನಿಯಾ ವಿಶ್ವವಿದ್ಯಾಲಯದ ಮೊಬೈಲ್ ಮತ್ತು ಕ್ಲೌಡ್ ಕಂಪ್ಯೂಟಿಂಗ್ ಸಂಶೋಧಕ ಡಾ. ಶಿವಾನಂದ ಪೂಜಾರ್, ಹೈದರಾಬಾದನ ವರ್ಧಮಾನ್ ಇಂಜಿನಿಯರಿಂಗ್ ಕಾಲೇಜಿನ ಎಐ ಮತ್ತು ಎಂಐ ವಿಭಾಗದ ಮುಖ್ಯಸ್ಥರಾದ ಡಾ.ಎಂ.ಎ.ಜಬ್ಬಾರ್ ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಚಾರ್ಯರಾದ ಡಾ. ಮಲ್ಲಿಕಾರ್ಜುನ ಹಂಗರಗಿ ಸ್ವಾಗತಿಸಿದರು. ಡಾ. ರವಿಚಂದ್ರ ನಿರೂಪಿಸಿದರು. ಉಪಪ್ರಾಚಾರ್ಯರಾದ ಪ್ರೊ. ಅನೀಲಕುಮಾರ ಚಿಕ್ಕಮಣೂರ ವಂದಿಸಿದರು.

# ಕೇಂದ್ರದ ಅಮಿತ್ ಶಾ ಗೃಹ ಸಚಿವ ಸ್ಥಾನದಿಂದ ವಜಾಗೊಳಿಸಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ
(ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಕೀಳು ಮಟ್ಟದಲ್ಲಿ ಮಾತನಾಡಿರುವ ಕೇಂದ್ರದ ಗೃಹ ಸಚಿವ ಅಮಿತ್ ಶಾ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ತಾಲೂಕು ಕಾಂಗ್ರೆಸ್ ಪಕ್ಷದ ಮುಖಂಡರು ಒತ್ತಾಯಿಸಿದ್ದಾರೆ. ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಭಾವಚಿತ್ರ ಹಿಡಿದು ಪ್ರತಿಭಟನೆ ನಡೆಸಿದ ಮುಖಂಡರು ದೇಶಕ್ಕೆ ಸಂವಿಧಾನ ನೀಡಿ ಸಾಮಾಜಿಕ ನ್ಯಾಯ ಕಲ್ಪಿಸಿದ ಅಂಬೇಡ್ಕರ್ ಅವರನ್ನು ಕೇಂದ್ರದ ಸಚಿವ ಅಮಿತ್ ಶಾ ಅವಮಾನಿಸಿರುವುದು ಸರಿಯಲ್ಲ.

ಶತ ಶತಮಾನಗಳಿಂದ ಅಸ್ಪೃಶ್ಯತೆಯ ನೋವುಂಡು, ಸಾಮಾಜಿಕ ನ್ಯಾಯ, ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತಿತರೆ ಸೌಲಭ್ಯಗಳಿಂದ ವಂಚಿತರಾಗಿ, ಶೋಷಿತರಾಗಿ ದೌರ್ಜನ್ಯಕ್ಕೆ ಒಳಗಾಗಿ ಚಾತುರ್ವರ್ಣಾಶ್ರಮ ವ್ಯವಸ್ಥೆಯಲ್ಲಿ ನೊಂದು ಬೆಂದವರಿಗೆ ಸಾಮಾಜಿಕ ನ್ಯಾಯ ಕೊಟ್ಟ ಪುಣ್ಯ ಪುರುಷನಿಗೆ ಅವಮಾನ ಮಾಡಿರುವ ಅಮಿತ್ ಶಾ ಅವರಿಗೆ ಕೇಂದ್ರ ಸಚಿವ ಸಂಪುಟದಲ್ಲಿ ಒಂದು ಕ್ಷಣವೂ ಸಚಿವರಾಗಿ ಮುಂದುವರಿಯುವ ನೈತಿಕತೆ ಇಲ್ಲ. ಸಂವಿಧಾನಶಿಲ್ಪಿಗೆ ಘೋರ ಅವಮಾನ ಮಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಸಚಿವ ಸ್ಥಾನದಿಂದ ಕೂಡಲೇ ವಜಾ ಮಾಡಬೇಕು ಎಂದು ತಹಸೀಲ್ದಾರ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಕಾಶ ಮಾಶೆಟ್ಟೆ, ದಲಿತ ಸಂಘಟನೆಯ ಹಿರಿಯ ಮುಖಂಡ ವಿಲಾಸ ಮೋರೆ, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂಧನಕೇರೆ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಪ್ರಮುಖರಾದ ಅಶೋಕ ಗಾಯಕವಾಡ, ಅಶೋಕ ಬಾವುಗೆ, ಮಾಣಿಕಪ್ಪ ರೇಷ್ಮೆ, ಚಂದು ಸಂಪಂಗೆ, ಜೈಪಾಲ ಬೋರಾಳೆ, ಸಂತೋಷ ನಾಟೇಕರ್ ಸೇರಿದಂತೆ ಮುಂತಾದವರು ಇದ್ದರು.

# ಎಲ್ಲೆಡೆ ಕ್ರಿಸ್‌ಮಸ್ ಹಬ್ಬದ ಸಂಭ್ರಮ; ಕ್ರೈಸ್ತರಲ್ಲಿ ಮನೆ ಮಾಡಿದ ಸಡಗರ





ಮಲ್ಲಮ್ಮ ನುಡಿ ವಾರ್ತೆ

ಬೀದರ.ಡಿ.24:-ವರ್ಷಾಂತ್ಯದ ದೊಡ್ಡ ಹಬ್ಬ ಕ್ರಿಸ್‌ಮಸ್ ಸಂಭ್ರಮ ಎಲ್ಲೆಡೆ ಮನೆ ಮಾಡಿದೆ. ಕ್ರೈಸ್ತರಲ್ಲಿ ಸಡಗರ, ಸಂಭ್ರಮ ಇಮ್ಮಡಿಯಾಗಿದೆ. ಚರ್ಚ್‌ಗಳೆಲ್ಲ ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿವೆ. ಕ್ರೈಸ್ತರ ಮನೆಗಳು 'ಕ್ರಿಸ್‌ಮಸ್ ಟ್ರೀ' ಹಾಗೂ ಆಕಾಶಬುಟ್ಟಿಗಳಿಂದ ಕಂಗೊಳಿಸುತ್ತಿವೆ. ಕ್ರೈಸ್ತರ ಸ್ನೇಹಮಿಲನ, ಸ್ನೇಹ ಕೂಟಗಳು ಹಬ್ಬದ ಸಂಭ್ರಮವನ್ನು ಹೆಚ್ಚಿಸಿವೆ. ಏಸು ಸ್ವಾಮಿಯ ಗುಣಗಾನ, ಪ್ರಾರ್ಥನಾ ಮಂದಿರಗಳಲ್ಲಿ ವಿಶೇಷ ಪ್ರಾರ್ಥನೆ, ಗೋದಲಿ ನಿರ್ಮಾಣ, ಕ್ರೈಸ್ತರಿರುವ ಬಡಾವಣೆಗಳೆಲ್ಲ ಬೆಳಕಿನಿಂದ ಝುಗಮಗಿಸುತ್ತಿವೆ. ಇಡೀ ವರ್ಷದಲ್ಲಿ ಕ್ರೈಸ್ತರು ಆಚರಿಸುವ ದೊಡ್ಡ ಹಬ್ಬ ಕ್ರಿಸ್‌ಮಸ್. ಈ ಕಾರಣಕ್ಕಾಗಿಯೇ ಕ್ರಿಸ್‌ಮಸ್‌ಗೆ ಎಲ್ಲಿಲ್ಲದ ಮಹತ್ವ. ಸಾಗರದಾಚೆಯಿದ್ದವರೂ ಕೂಡ ಹಬ್ಬಕ್ಕೆಂದೇ ಊರಿಗೆ ಬಂದು ಕುಟುಂಬ ಸದಸ್ಯರೊಂದಿಗೆ ಸೇರಿಕೊಂಡು ಹಬ್ಬ ಆಚರಿಸುತ್ತಾರೆ. ಅಂದಹಾಗೆ, ಈ ಸಡಗರ ಕ್ರಿಸ್‌ಮಸ್‌ಗಷ್ಟೇ ಸೀಮಿತವಾಗಿರುವುದಿಲ್ಲ. ಹೊಸ ವರ್ಷಾಚರಣೆ ವರೆಗೆ ಇರುತ್ತದೆ. ಸಿಹಿ ತಿನಿಸು, ಕೇಕ್ ಸೇರಿದಂತೆ ಬಗೆಬಗೆಯ ಖಾದ್ಯಗಳನ್ನು ಮಾಡಿ, ಬಂಧುಗಳು, ಸ್ನೇಹಿತರನ್ನು ಆಹ್ವಾನಿಸಿ ಊಣ ಬಡಿಸಿ ಸೌಹಾರ್ದತೆಯ ಸಂದೇಶ ಸಾರುತ್ತಾರೆ. ಪ್ರತಿವರ್ಷದಂತೆ ಈ ವರ್ಷವೂ ನಗರದ ಮಂಗಲಪೇಟ್ ಸಮೀಪದ ಸೇಂಟ್ ಮೆಥೋಡಿಸ್ಟ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಪ್ರಧಾನ ಕಾರ್ಯಕ್ರಮ ಜರುಗುತ್ತದೆ. ಈಗಾಗಲೇ ಹಬ್ಬಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮಂಗಳವಾರ (ಡಿ.24) ಸಂಜೆಯಿಂದಲೇ ವಿಶೇಷ ಪ್ರಾರ್ಥನೆಗಳು ನಡೆಯುತ್ತವೆ. ಬುಧವಾರ (ಡಿ.25) ಬೆಳಿಗ್ಗೆ 10ಕ್ಕೆ ಸಾಮೂಹಿಕ ಪ್ರಾರ್ಥನೆ, ಏಸು ಕ್ರಿಸ್ತನ ಆರಾಧನೆ ಹಾಗೂ ಧರ್ಮಗುರುಗಳು ಸಂದೇಶ ನೀಡುತ್ತಾರೆ. ಇದಕ್ಕೆ ಜಿಲ್ಲೆಯ ಮೂಲೆಮೂಲೆಗಳಿಂದ ಕ್ರೈಸ್ತರು ಬರುತ್ತಾರೆ. ಇಡೀ ದಿನ ಹಬ್ಬದ ವಾತಾವರಣ ಇರುತ್ತದೆ. ಚರ್ಚ್‌ನಲ್ಲಿ ಬೆಳಿಗ್ಗೆ ಪ್ರಾರ್ಥನೆ ಸಲ್ಲಿಸಿದ ನಂತರವೇ ಅಧಿಕೃತವಾಗಿ ಹಬ್ಬದ ಆಚರಣೆ ಆರಂಭವಾಗುತ್ತದೆ. ಇದನ್ನು ಕ್ರೈಸ್ತರು ಚಾಚೂತಪ್ಪದೇ ಮಾಡುತ್ತಾರೆ. ಏಸು ಕ್ರಿಸ್ತ್ ಹುಟ್ಟಿದ ದಿನ ಆಕಾಶದಲ್ಲಿ ದೊಡ್ಡ ನಕ್ಷತ್ರವೊಂದು ಮಿನುಗಿ ಮರೆಯಾಗಿತಂತೆ. ಅದರ ಪ್ರತೀಕವಾಗಿ ಕ್ರೈಸ್ತಧರ್ಮೀಯರು ಅವರ ಮನೆ ಮೇಲೆ, ಮುಂದೆ ಸಾಂಕೇತಿಕವಾಗಿ ನಕ್ಷತ್ರ ಮಾದರಿಯ ಆಕಾಶಬುಟ್ಟಿಗಳನ್ನು ಹಾಕುತ್ತಾರೆ. ಮನೆ ಮುಂದೆ ವಿದ್ಯುತ್ ದೀಪಗಳಿಂದ ಕ್ರಿಸ್ಮಸ್ ಟ್ರೀ ಕೂಡ ಅಲಂಕರಿಸುತ್ತಾರೆ. ಈ ದೃಶ್ಯ ನೋಡಬೇಕಾದರೆ ಮಂಗಲಪೇಟ್, ನಾವದಗೇರಿಗೆ ಹೋಗಬೇಕು. ಅಲ್ಲಿ ಒಮ್ಮೆ ಸುತ್ತಾಡಿದರೆ ಸಂಭ್ರಮ ಕಣ್ಣಿಗೆ ರಾಚುತ್ತದೆ.

ಶಹಾಪುರ ಗೇಟ್ ಸಮೀಪದ ಕೆಥೋಲಿಕ್ ಚರ್ಚ್, ಗುಂಪಾ, ನಾವದಗೇರಿ ಸಮೀಪದ ಇಮ್ಯಾನುವೆಲ್ ಚರ್ಚ್ ಸೇರಿದಂತೆ ಜಿಲ್ಲೆಯಾದ್ಯಂತ ಇರುವ ಚರ್ಚ್‌ಗಳು ವಿದ್ಯುತ್ ದೀಪಗಳಿಂದ ಝುಗಮಗಿಸುತ್ತಿವೆ. ಏಸು ಕ್ರಿಸ್ತನ ಪ್ರಾರ್ಥನೆ, ಗುಣಗಾನ ಎಲ್ಲೆಡೆ ಅನುರಣಿಸುತ್ತಿದೆ.

ಬೀದರ್‌ನ ಮಳಿಗೆಯೊಂದರಲ್ಲಿ ಸೋಮವಾರ ವ್ಯಕ್ತಿಯೊಬ್ಬರು ಗೋದಲಿ ಪ್ರತಿಕೃತಿ ಖರೀದಿಸಿದರು'ಹಬ್ಬಕ್ಕೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ವರ್ಷಕ್ಕೆ ಒಂದು ಸಲ ದೊಡ್ಡ ಪ್ರಮಾಣದಲ್ಲಿ ಹಬ್ಬ ಆಚರಿಸಲಾಗುತ್ತಿದೆ. ಪ್ರತಿಯೊಬ್ಬರಿಗೂ ಶಾಂತಿ ನೆಮ್ಮದಿ ಕೊಡಲೆಂದು ಪ್ರಾರ್ಥನೆ ಮಾಡುತ್ತೇವೆ. ಏಸು ಕ್ರಿಸ್ತ ಅವರು ಈ ಲೋಕಕ್ಕೆ ಶಾಂತಿದೂತರಾಗಿ ಬಂದಿದ್ದರು. ಏನೂ ಇಲ್ಲದವರಿಗೆ ಏಸು ಕ್ರಿಸ್ತ ಅವರು ಅಸ್ಮಿತೆ ಕೊಟ್ಟಿದ್ದಾರೆ. ಅವರ ತ್ಯಾಗ ಬಲಿದಾನವನ್ನು ಕೊಡುಗೆ ಕೊಡುವುದರ ಮೂಲಕ ಸ್ಮರಿಸುತ್ತೇವೆ. ಡಿ. 24 ರಾತ್ರಿಯಿಂದಲೇ ಧಾರ್ಮಿಕ ವಿಧಿ ವಿಧಾನಗಳು ಆರಂಭವಾಗುತ್ತದೆ. ಪ್ರಾರ್ಥನೆ ಪ್ರಾರಂಭಗೊಳ್ಳುತ್ತದೆ. ಡಿ. 25ರಂದು ಬೆಳಿಗ್ಗೆ 10ಕ್ಕೆ ನಗರದ ಮಂಗಲಪೇಟ್ ಸಮೀಪದ ಮೆಥೋಡಿಸ್ಟ್ ಚರ್ಚ್‌ನಲ್ಲಿ ಆರಾಧನಾ ಕಾರ್ಯಕ್ರಮ ನಡೆಯುತ್ತದೆ' ಎಂದು ಸೇಂಟ್ ಪಾಲ್ ಮೆಥೋಡಿಸ್ಟ್ ಚರ್ಚ್‌ನ ಸೂಪರಿಟೆಂಡೆಂಟ್ ರೆವರೆಂಡ್ ನೆಲ್ಸನ್ ಸುಮಿತ್ರ ತಿಳಿಸಿದ್ದಾರೆ.ಶಾಂತಿ ನೆಮ್ಮದಿಗೆ ಪ್ರಾರ್ಥನೆ

# ಕಾಂಗ್ರೆಸ್ ಅಧಿವೇಶನಕ್ಕೆ ಸಕಲ ಸಿದ್ಧತೆ: ಡಿಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಡಿ.24–ಬೆಳಗಾವಿಯಲ್ಲಿ ಕಾಂಗ್ರೆಸ್ ಅಧೀವೇಶನ ಉದ್ದೇಶಿಸಿ ಮಹಾತ್ಮ ಗಾಂಧಿ ಭಾಷಣ ಮಾಡಿದ್ದ ಶತಮಾನೋತ್ಸವ ಆಚರಣೆ ಇದೇ 26 ಮತ್ತು 27 ರಂದು ಎರಡು ದಿನ ನಡೆಯಲಿದ್ದು ಅಂತಿಮ ಸಿದ್ಧತೆ ನಡೆಯುತ್ತಿದೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ

ಗಾಂಧೀಜಿಯವರ ಅಪ್ರತಿಮ ಕೊಡುಗೆಯನ್ನು ಸ್ಮರಿಸಲಾಗುವುದು ಮತ್ತು ಭವಿಷ್ಯದ ಕಾರ್ಯತಂತ್ರಗಳನ್ನು ಚರ್ಚಿಸಲಾಗುವುದು .ಜೊತೆಗೆ ವಿಕಾಸಸೌಧದ ಮುಂಭಾಗದಲ್ಲಿ ಅಧಿವೇಶನದ ನೆನಪಿಗಾಗಿ ಗಾಂಧಿ ಪ್ರತಿಮೆ ಅನಾವರಣ ಮಾಡಲಾಗುವುದು ಎಂದು ತಿಳಿಸಿದ್ದಾರೆ

ಕಿತ್ತೂರು ಕರ್ನಾಟಕದ ಜನತೆ ಬೆಳಗಾವಿಗೆ ಬರಬೇಕು.ಶತಮಾನೋತ್ಸವ ಪ್ರಯುಕ್ತ ಮಾಡಿರುವ ಲೈಟಿಂಗ್ ಅಲಂಕಾರ ಬಂದು ನೋಡಬೇಕು ಈ ಹಿಂದೆ ಮಹಾತ್ಮಾ ಗಾಂಧಿ ಅಧ್ಯಕ್ಷರಾಗಿದ್ದ ಅಧಿವೇಶನದ ಎಲ್ಲಾ ಮಾಹಿತಿ ಸಂಗ್ರಹಿಸಿದ್ದೇವೆ. ಅಂತಹ ಇತಿಹಾಸ ಪುಟಕ್ಕೆ ಮತ್ತೆ ತೆಗೆದುಕೊಂಡು ಹೋಗಲು ಪ್ರಯತ್ನ ಮಾಡಿದ್ದೇವೆ ಎಂದರು



ಜನರು ಇಲ್ಲಿಗೆ ಬರಬೇಕು. ಪಾರ್ಟಿ, ಪಕ್ಷ ಎಂದು ಯೋಚನೆ ಮಾಡಬೇಡಿ. ಪಕ್ಷ ದೇಶವನ್ನು ಯಾವ ದಿಕ್ಕಿನಲ್ಲಿ ತೆಗೆದುಕೊಂಡು ಹೋಗಬೇಕು ಎಂಬುದನ್ನು ನಿರ್ಧಾರ ಮಾಡುತ್ತದೆ. ಪ್ರಜಾಪ್ರಭುತ್ವ ನಿಮಗೆ ಸಿಕ್ಕಿದೆ, ಲೀಡರ್ ಆಗಬೇಕು ಎಂದುಕೊಂಡಿರುವವರು ಬನ್ನಿ ಎಂದು ಮನವಿ ಮಾಡಿದರು

ಡಿಸೆಂಬರ್ 26 ರಿಂದ ಅಧಿಕೃತ ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ ಕಾರ್ಯಕ್ರಮ ಆರಂಭವಾಗಲಿದೆ. ಡಿಸೆಂಬರ್ 26 ರಂದು ಮಧ್ಯಾಹ್ನ 3 ಗಂಟೆ ಎಐಸಿಸಿ ಕಾರ್ಯಕಾರಣಿ ಸಮಿತಿ ಸಭೆ ನಡೆಯಲಿದೆ. 1924 ರ ಡಿಸೆಂಬರ್ 26 ರ ಮಧ್ಯಾಹ್ನ 3 ಗಂಟೆ ಮಹಾತ್ಮಾ ಗಾಂಧಿ ಅಧ್ಯಕ್ಷತೆಯಲ್ಲಿ ಕಾರ್ಯಕಾರಣಿ ಸಭೆ ನಡೆದಿತ್ತು. ಅದೇ ಸಮಯದಲ್ಲಿ ಈಗಲೂ ಸಭೆ ನಡೆಯಲಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಡಿಸೆಂಬರ್ 27 ರಂದು ಬೆಳಗ್ಗೆ 10.30ಕ್ಕೆ ಮಹಾತ್ಮಾ ಗಾಂಧಿ ಮೂರ್ತಿ ಅನಾವರಣ ಆಗಲಿದೆ. ಎಐಸಿಸಿ ಅಧ್ಯಕ್ಷರು ಡಿನ್ನರ್ ಕೊಡಿಸುತ್ತಿದ್ದಾರೆ. ಸುವರ್ಣ ವಿಧಾನಸೌಧದಲ್ಲಿ ಪೊ?ಟೋ ಸೆಷನ್ ಇದೆ. 27ರ ಮಧ್ಯಾಹ್ನ 12 ಗಂಟೆಗೆ ಶತಮಾನೋತ್ಸವ ಸಮಾವೇಶ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಡಿಸೆಂಬರ್ 26 ರಂದು ಬೆಳಗ್ಗೆ ಗಾಂಧಿ ಪರಿವಾರ ಬೆಳಗಾವಿಗೆ ಬರಲಿದೆ. ಗಾಂಧಿ ಪರಿವಾರದ ವಾಸ್ತವ್ಯಕ್ಕೆ ಸರ್ಕ್ಯೂಟ್ ಹೌಸ್ ಮತ್ತು ಖಾಸಗಿ ಹೋಟೆಲ್‌ನಲ್ಲಿ ವ್ಯವಸ್ಥೆ ಮಾಡಿದ್ದೇವೆ. ಅಂತಿಮವಾಗಿ ಗಾಂಧಿ ಪರಿವಾರದ ಭದ್ರತಾ ಸಿಬ್ಬಂದಿ ನಿರ್ಧಾರ ಮಾಡಲಿದ್ದಾರೆ ಎಂದು ಅವರು ಹೇಳಿದರು.

ಏತನ್ಮಧ್ಯೆ,ಬೆಳಗಾವಿ ಅಧಿವೇಶನದ ಶತಮಾನೋತ್ಸವ ಸಂದರ್ಭದಲ್ಲಿ ಬಿಜೆಪಿ 'ಬೆಳಗಾವಿ ಚಲೋ' ಅಭಿಯಾನ ಹಮ್ಮಿಕೊಂಡಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಈಗ ಯಾಕೆ ಆ ಬಗ್ಗೆ ಮಾತು ಯಾರನ್ನಾದರೂ ಕಳುಹಿಸಲಿ,ಏನಾದರೂ ಮಾಡಲಿ. ಕಾಂಗ್ರೆಸ್ ಪಾರ್ಟಿ ಶಕ್ತಿ ಅವರಿಗೂ ಗೊತ್ತಿದೆ, ನಮಗೂ ಗೊತ್ತಿದೆ. ಈಗ ಅದರ ಬಗ್ಗೆ ನಾನು ಮಾತನಾಡಲ್ಲ ಎಂದರು.

# ನಿಗದಿತ ಅವಧಿಯೊಳಗೆ ಸಾರ್ವಜನಿಕರ ಅರ್ಜಿಗಳನ್ನು ವಿಲೇವಾರಿಗೊಳಿಸಿ–ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಡಿಸೆಂಬರ್.24– ಡಿಸೆಂಬರ್.19 ರಿಂದ 24 ರವರೆಗೆ ದೇಶಾದ್ಯಂತ ಗುಡ್ ಗವರ್ನನ್ಸ್ ಉತ್ತಮ ಆಡಳಿತ ಆಚರಣೆ ಮಾಡಲಾಗುತ್ತಿದ್ದು, ಅಧಿಕಾರಿಗಳು ತಮ್ಮ ಹಂತದಲ್ಲಿಯೇ ನಿಗದಿತ ಅವಧಿ ಒಳಗಾಗಿ ಸಾರ್ವಜನಿಕರ ಅಹವಾಲುಗಳನ್ನು ವಿಲೇವಾರಿಗೊಳಿಸುವಂಎ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಹಮ್ಮಿಕೊಂಡ ಉತ್ಮತ ಆಡಳಿತ ಗುಡ್ ಗವರ್ನನ್ಸ್ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಈಲ್ಲಾಡಳಿತದ ಜಿಲ್ಲಾ ಪಂಚಾಯತನ ವಿವಿಧ ಇಲಾಖೆಗಳು ತಳಮಟ್ಟದಲ್ಲಿಯೇ ಅರ್ಜಿಗಳನ್ನು ವಿಲೇವಾರಿ ಮಾಡದಲ್ಲಿ ತಾಲ್ಲೂಕು ಅಥವಾ ಜಿಲ್ಲಾ ಮಟ್ಟಕ್ಕೆ ಯಾವುದೇ ಸಮಸ್ಯೆ ಇರುವುದಿಲ್ಲ. ಸಾರ್ವಜನಿಕರಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಸದಾ ಕ್ರೀಯಾಶೀಲರಾಗಿರಬೇಕು. ಅರ್ಜಿಗಳು ಸಲ್ಲಿಯಾದ ತಕ್ಷಣವೇ ತಮ್ಮ ಮಟ್ಟದಲ್ಲಿ ಪರಿಶೀಲಿಸಿ ಪರಿಹರಿಸಬೇಕು. ಜಿಲ್ಲಾ ಮಟ್ಟದ ಅಧಿಕಾರಿಗಳು ಎಲ್ಲ ಸಹಾಯ ಸೌಲಭ್ಯಗಳನ್ನು ನಿಗದಿತ ಸಮಯದೊಳಗೆ ಒದಗಿಸಬೇಕೆಂದು ತಿಳಿಸಿದರು.


ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಮಾತನಾಡಿ,ಅಧಿಕಾರಿಗಳು ಸಕಾಲ ಹಾಗೂ ಐಪಿಜಿಆರ್‌ಎಸ್ ತಂತ್ರಾಂಶದಲ್ಲಿ ಬಾಕಿಯಿರುವ ಅರ್ಜಿಗಳನ್ನು ತಕ್ಷಣವೇ ವಿಲೇವಾರಿ ಮಾಡುವಂತೆ ತಿಳಿಸಿದರು.

ಬೀದರ ನಗರಸಭೆ 43 ಪ್ರಕರಣಗಳು ಬಾಕಿ ಇವೆ. ಸೇವಾ ಸಿಂಧು (ಎಸ್.ಸಿ./ಎಸ್.ಟಿ/ಓಬಿಸಿ) ಅಡಿ 181 ಪ್ರಕರಣಗಳು, ಸಹಕಾರ ಇಲಾಖೆಯ 25, ಕಾರ್ಮಿಕ ಇಲಾಖೆಯ 43, ಜಿಲ್ಲಾ ನೋಂದಣಿ 213, ಗ್ರಾಮಿಣ ಅಭಿವೃದ್ಧಿ ಪಂಚಾಯತರಾಜ್ 2, ಆರ್‌ಟಿಓ 15 ಸೇರಿದಂತೆ ಒಟ್ಟು 899 ವಿವಿಧ ಪ್ರಕರಣಗಳು ಬಾಕಿಯಿದ್ದು,ಅವುಗಳನ್ನು ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಮೊಹಮ್ಮದ ಶಕೀಲ, ಬೀದರ ವಿಶ್ವವಿದ್ಯಾಲಯದ ರಜಿಸ್ಟಾರ್ ಸುರೇಖಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜನವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಕಲಬುರಗಿ,ಡಿ.24–ಕಲಬುರಗಿ ಜಿಲ್ಲಾಡಳಿತ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಜನವರಿ 1 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.



ವಿಶ್ವಕರ್ಮ ಸಮಾಜದ ಮಠಗಳ ಮಠಾಧೀಶರು ದಿವ್ಯ ಸಾನಿಧ್ಯವಹಿಸುವರು.ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಮುಖ್ಯಮಂತ್ರಿಯವರ ಸಲಹೆಗಾರ (ನೀತಿ ಮತ್ತು ಕಾರ್ಯಕ್ರಮ) ರಾದ ಬಿ.ಆರ್. ಪಾಟೀಲ ಅವರು ಗೌರವ ಉಪಸ್ಥಿತಿವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಹಾಗೂ ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್, ಕಲಬುರಗಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಉತ್ಸವ ಸಮಿತಿಯ ಅಧ್ಯಕ್ಷ ದೇವೀಂದ್ರ ದೇಸಾಯಿ ಕಲ್ಲೂರ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿ ಹಿನ್ನೆಲೆ:

# ಜನವರಿ 4 ರಂದು ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.24:ಕಲಬುರಗಿ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿಯಿರುವ 67 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:3 ಅನುಪಾತದಂತೆ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯು 2025ರ ಜನವರಿ 4 ರಂದು ಬೆಳಿಗ್ಗೆ 10 ರಿಂದ ಸಂಜೆ 5.30 ಗಂಟೆ ವರೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ. ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ 1:3 ಪಟ್ಟಿಯನ್ನು ಕಲಬುರಗಿ ಜಿಲ್ಲಾಧಿಕಾರಿ ಕಚೇರಿಯ ಸೂಚನಾ ಫಲಕ



ಮತ್ತು ಎನ್.ಐ.ಸಿ. ವೆಬ್ ಸೈಟ್ https://kalaburagi.nic.in/vao ರಲ್ಲಿ ಪ್ರಕಟಿಸಿದೆ. ಇತ್ತೀಚೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೇಮಕಾತಿ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ಮೆರಿಟ್ ಪಟ್ಟಿ ಪ್ರಕಟಿಸಿತ್ತು.

# ಮುಲ್ಲಾಮಾರಿ–ಗಂಡೋರಿನಾಲಾ ಯೋಜನೆ: ಆಧುನೀಕರಣಕ್ಕೆ ಟೆಂಡರ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.24–ಕಮಲಾಪೂರ ತಾಲೂಕಿನ ಗಂಡೋರಿನಾಲಾ ಮತ್ತು ಮುಲ್ಲಾಮಾರಿ ಯೋಜನೆಯ ಕಾಲುವೆಗಳ ಆಧುನೀಕರಣಕ್ಕೆ ಒಟ್ಟಾರೆ 176.39 ಕೋಟಿ ರೂ.ಗಳ ಟೆಂಡರ್‌ಗೆ ಆಸ್ತು ನೀಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು, ವಿಧಾನ ಪರಿಷತ್ ಸದಸ್ಯ ಡಾ.ಬಿ.ಜಿ.ಪಾಟೀಲ ಅವರ ಪ್ರಶ್ನೆಗೆ ಉತ್ತರ ನೀಡಿದ್ದಾರೆ.

ಬೆಳಗಾವಿಯಲ್ಲಿ ನಡೆದ ವಿಧಾನ ಮಂಡಲ ಅಧಿವೇಶನದಲ್ಲಿ ಎಂ.ಎಲ್.ಸಿ ಪಾಟೀಲರು ಕೇಳಿದ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಡಿಕೆಶಿ ಅವರು, ಈ ಕಾಲುವೆಯ ದುರಸ್ತಿಗಾಗಿ ಬಿಡುಗಡೆಯಾದ ಅನುದಾನದಲ್ಲಿ ಆಗಿರುವ ಅಕ್ರಮದ ಆರೋಪದ ಕುರಿತು ಲೋಕಾಯುಕ್ತ ಸಂಸ್ಥೆಯಿಂದ ಪ್ರಕರಣದ ತನಿಖೆಯ ವರದಿ ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದ್ದಾರೆ.



ಬೀದರನ ಮಸ್ತಿಫ್ಲ್ ಹೋಟೆಲನಲ್ಲಿ ಆಯೋಜಿಸಿದ ಲೀನ್ ಯೋಜನೆ ಮತ್ತು ಝೆಡ್.ಇ.ಡಿ.ಹಾಗೂ ರಫ್ತು ಕುರಿತು ಒಂದು ದಿನ ಅರಿವು ಕಾರ್ಯಾಗಾರವನ್ನು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಉದ್ಘಾಟಿಸಿದರು. (ಮಲ್ಲಮ್ಮ ನುಡಿ ಚಿತ್ರ)

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಗೌರವ ಸೇವೆ ಹುದ್ದೆ:

# ಅಪೂರ್ಣ ಅರ್ಜಿಗಳನ್ನು ಪೂರ್ಣಗೊಳಿಸಲು ಜನವರಿ 5 ರವರೆಗೆ ಕಾಲಾವಕಾಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.24–ಕಲಬುರಗಿ ಜಿಲ್ಲೆಯ ಅಫಜಲಪೂರ, ಆಳಂದ, ಚಿಂಚೋಳಿ, ಚಿತ್ತಾಪೂರ, ಕಲಬುರಗಿ (ಗ್ರಾ), ಕಲಬುರಗಿ (ನ),ಜೇವರ್ಗಿ,ಸೇಡಂ ಹಾಗೂ ಶಹಾಬಾದ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ,ಪುರಸಭೆ,ನಗರಸಭೆ ವ್ಯಾಪ್ತಿಯಲ್ಲಿ ಖಾಲಿಯಿರುವ ಒಟ್ಟು 61 ಅಂಗನವಾಡಿ ಕಾರ್ಯಕರ್ತೆ ಹಾಗೂ 238 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ವೆಬ್‌ಸೈಟ್‌ದಲ್ಲಿ ಒಟ್ಟು 04 ವಿವಿಧ ಹಂತಗಳಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಆದರೆ ಇದರಲ್ಲಿ ಕೆಲವರಿಗೆ 01ನೇ ಹಂತದಲ್ಲಿಯೇ "Application SuccessfullyUploaded" ಎಂಬ ಮೇಸೆಜ್ ಅವರ ಮೊಬೈಲ್‌ಗೆ ಸ್ವೀಕೃತವಾಗಿರುವುದರಿಂದ ಅರ್ಜಿಗಳನ್ನು ಪೂರ್ಣಗೊಳಿಸಿರುವುದಿಲ್ಲ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ನಾಲ್ಕು ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣವಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ವೆಬ್‌ಸೈಟ್‌ದಲ್ಲಿ ತಮ್ಮ ಅರ್ಜಿಗಳನ್ನು ಪೂರ್ಣಗೊಳಿಸಲು ಇಲಾಖೆಯ ವತಿಯಿಂದಲೇ 2024ರ ಡಿಸೆಂಬರ್ 26 ರಿಂದ 2025ರ ಜನವರಿ 5 ರ ಸಂಜೆ 5.30 ಗಂಟೆಯವರೆಗೆ ಅವಕಾಶ ನೀಡಲಾಗಿದೆ.

ಅಭ್ಯರ್ಥಿಗಳು ಒಂದನೇ ಹಂತದಲ್ಲಿ ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬಬೇಕು. ಎರಡನೇ ಹಂತದಲ್ಲಿ ತಮ್ಮ ಭಾವಚಿತ್ರ, ಸಹಿಯನ್ನು ಅಪ್ಲೋಡ್ ಮಾಡಬೇಕು. ಮೂರನೇ ಹಂತ ತಮ್ಮ ದಾಖಲಾತಿಗಳನ್ನು ಅಪ್ಲೋಡ್ ಮಾಡಬೇಕು. ನಾಲ್ಕನೇ ಹಂತದಲ್ಲಿ ತಮ್ಮ ಆಧಾರ ಸಂಖ್ಯೆ ನಮೂದಿಸಿ, ಇ–ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ 2342 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 3442 ಸಹಾಯಕಿಯರ ಹುದ್ದೆಗಳಿಗೆ ಅಪೂರ್ಣ ಅರ್ಜಿಗಳು ಸ್ವೀಕೃತವಾಗಿರುತ್ತವೆ.

ಮೇಲ್ಕಂಡ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಅಂಗನವಾಡಿ ಸಹಾಯಕಿಯರ ಗೌರವಧನ ಹುದ್ದೆಗಳಿಗೆ ಸಂಬಂಧಿಸಿದಂತೆ ಈ ಹಿಂದೆ ದಿನಾಂಕ:05–07–2024 ರಂದು ಅಧಿಸೂಚನೆ ಹೊರಡಿಸಿ, ದಿನಾಂಕ:07–07–2024 ರಿಂದ ದಿನಾಂಕ:07–08–2024ರ ವರೆಗೆ ಹಾಗೂ ದಿನಾಂಕ: 14–08–2024ರ ವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ವಿಸ್ತರಿಸಲಾಗಿತ್ತು. ಪ್ರಸ್ತುತ ಅರ್ಜಿ ಸಲ್ಲಿಸುವ ಕಾಲಾವಧಿ ಮುಗಿದಿರುತ್ತದೆ.

ಅಪೂರ್ಣವಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮೇಲ್ಕಂಡ ನಿಗದಿಪಡಿಸಿರುವ ದಿನಾಂಕದೊಳಗಾಗಿ ಅರ್ಜಿಗಳನ್ನು ಪೂರ್ಣಗೊಳಿಸದಿದ್ದಲ್ಲಿ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ.

ಜಾಹೀರಾತಿಗಾಗಿ ಇಂದೆ ಸಂಪರ್ಕಿಸಿ:9449732000

# ವೇತನ ಪರಿಷ್ಕರಣೆಗೆ ಆಗ್ರಹಿಸಿ ರಾಜ್ಯವ್ಯಾಪಿ ಸಾರಿಗೆ ನೌಕರರಿಂದ ಡಿ. 31ರಂದು ಅನಿರ್ಧಿಷ್ಟ ಧರಣ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.23: ನಾಲ್ಕು ಸಾರಿಗೆ ನಿಗಮಗಳಿಗೆ ಶಕ್ತಿ ಯೋಜನೆಯಡಿ ಸಂಪೂರ್ಣ ಅನುದಾನ ಬಿಡುಗಡೆ ಮಾಡುವಂತೆ, ವೇತನ ಪರಿಷ್ಕರಿಸುವುದೂ ಸೇರಿದಂತೆ ಸುಮಾರು 8 ಬೇಡಿಕೆಗಳನ್ನು ಮುಂದಿಟ್ಟುಕೊಂಡು ರಾಜ್ಯಾದ್ಯಂತ ಡಿಸೆಂಬರ್ 31ರಂದು ಮಂಗಳವಾರ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿ ಕಲ್ಯಾಣ ಕರ್ನಾಟಕ ಸಮಿತಿ ಅಧ್ಯಕ್ಷ ಚಂದ್ರಕಾಂತ್ ಗದ್ದಗಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರ ಡಿಸೆಂಬರ್ 31ರ ಮೂಲ ವೇತನ ಶೇಕಡಾ 25ರಷ್ಟು ಹೆಚ್ಚಳ ಮಾಡಿ 2024ರ ಜನವರಿ 1ರಿಂದ ವೇತನ ಶ್ರೇಣಿಗಳನ್ನು ಸಿದ್ಧಪಡಿಸತಕ್ಕದ್ದು. (ಇನ್ಕ್ರಿಮೆಂಟ್‌ದರ ಎಲ್ಲ ಹಂತಗಳಲ್ಲೂ ಮೂಲ ವೇತನದ ಶೇಕಡಾ 4ರಷ್ಟು ಇರತಕ್ಕದ್ದು) 2020ರ ಜನವರಿ 1ರಿಂದ ಆಗಿರುವ ಶೇಕಡಾ 15ರಷ್ಟು ವೇತನ ಹೆಚ್ಚಳದ 38 ತಿಂಗಳೀನ ಬಾಕಿ ಹಣ ವಿಳಂಬವಿಲ್ಲದೇ ಪಾವತಿಸಬೇಕು ಎಂದು ಒತ್ತಾಯಿಸಿದರು.

ಆಯ್ಕೆ ಶ್ರೇಣಿ ಹಾಗೂ ಉನ್ನತ ಶ್ರೇಣಿಗಳ ವೇತನ ಶ್ರೇಣಿಯನ್ನು ಸಹ ಈಗಾಗಲೇ ತಿಳಿಸಿರುವಂತೆ ಸಿದ್ಧಪಡಿಸಬೇಕು. ಆಯ್ಕೆ ಶ್ರೇಣಿಯ ವಾರ್ಷಿಕ ವೇತನ ಬಡ್ತಿ ಹಾಗೂ ಉನ್ನತ ಶ್ರೇಣಿಗಳ ವಾರ್ಷಿಕ ವೇತನ ಬಡ್ತಿಯೂ ಆಯಾಯ ವೇತನ ಶ್ರೇಣಿಯ ಮೂಲ ವೇತನದ ಶೇಕಡಾ 4ರಷ್ಟು ಇರತಕ್ಕದ್ದು. ಆಯ್ಕೆ ಶ್ರೇಣಿ ಬಡ್ತಿಯನ್ನು ಸೇವಾ ಅವಧಿಯ ಪ್ರತಿ ಹತ್ತು ವರ್ಷಗಳಿಗೊಮ್ಮೆ ನೀಡುವಂತೆ ಆಗ್ರಹಿಸಿದ ಅವರು, ಯಾವುದೇ ಸಂದರ್ಭದಲ್ಲಿಯೂ ಆಯ್ಕೆ ಶ್ರೇಣಿ/ ಉನ್ನತ ಶ್ರೇಣಿಯ ವಾರ್ಷಿಕ ವೇತನ ಬಡ್ತಿಯ ಸಾಮಾನ್ಯ ಶ್ರೇಣಿಯ ಕೊನೆಯ ಹಂತದ ವಾರ್ಷಿಕ ವೇತನ ಬಡ್ತಿಯ ಮೊತ್ತಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಇರಬೇಕು ಎಂದರು.

2023ರ ಆಗಸ್ಟ್ 8ರಂದು ಜಂಟಿ ಕ್ರಿಯಾ ಸಮಿತಿಯ ವತಿಯಿಂದ ಸಲ್ಲಿಸಿರುವ ಬೇಡಿಕೆಗಳು ಇತ್ಯರ್ಥವಾಗದೇ ಬಾಕಿ ಇರುವ ಎಲ್ಲ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿದ ಅವರು, ನೌಕರರು ಪ್ರಸಕ್ತ ಪಡಯುತ್ತಿರುವ ವಿವಿಧ ಭತ್ಯೆಗಳನ್ನು ಐದು ಪಟ್ಟು ಹೆಚ್ಚಳ ಮಾಡುವಂತೆ, ಎಲ್ಲ ನೌಕರರಿಗೂ ಪ್ರತಿ ತಿಂಗಳು ಹೊರ ರೋಗಿ ಚಿಕಿತ್ಸೆ ವೆಚ್ಚಕ್ಕಾಗಿ 2000ರೂ.ಗಳನ್ನು ನೀಡುವಂತೆ, ಎಲ್ಲ ನೌಕರರಿಗೂ ಉಚಿತ ಔಷಧಿಗಳನ್ನು ಪೂರೈಸುವಂತೆ, ಇಎಸ್‌ಐ ಮಾದರಿಯಲ್ಲಿ ಆಡಳಿತ ವರ್ಗದವರಿಂದ ನೌಕರರ ಮೂಲ ವೇತನದ ಶೇಕಡಾ 4.5ರಷ್ಟು ಹಾಗೂ ನೌಕರರಿಂದ ಶೇಕಡಾ 0.5 ವಂತಿಗೆ ಸಂಗ್ರಹಿಸಿ ಟ್ರಸ್ಟ್ ರಚಿಸಿ ಆ ಮೂಲಕ ಸಾರಿಗೆ ನೌಕರರಿಗೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡುವಂತೆ ಯೋಜನೆ ರೂಪಿಸಬೇಕು. ಈ ಎಲ್ಲ ಸೌಲಭ್ಯಗಳನ್ನು ನಿವೃತ್ತ ಕಾರ್ಮಿಕರಿಗೆ ಮತ್ತು ಅವರ ಪತ್ನಿ/ ಪತಿ ಹಾಗೂ ಮಕ್ಕಳಿಗೆ ನೀಡುವಂತೆ ಅವರು ಆಗ್ರಹಿಸಿದರು.

ಸಾರಿಗೆ ನಿಗಮಗಳ ವಿದ್ಯುತ್ ಬಸ್‌ಗಳಲ್ಲಿ ಸಂಸ್ಥೆಯ ಚಾಲಕರನ್ನೇ ಚಾಲನಾ ಕೆಲಸಕ್ಕೆ ನಿಯೋಜಿಸುವಂತೆ, ಗುತ್ತಿಗೆ ಆಧಾರದಲ್ಲಿ ತಗದುಕೊಂಡಿರುವ ಚಾಲಕ/ತಾಂತ್ರಿಕ ಸಿಬ್ಬಂದಿಗಳನ್ನು ಸಂಸ್ಥೆಯ ನೌಕರರನ್ನಾಗಿ ನೇಮಿಸಿಕೊಳ್ಳುವಂತೆ, ಪ್ರಸ್ತುತ ವೇತನ ಪರಿಷ್ಕರಣೆಯು 2024ರ ಜನವರಿ 1ರಿಂದ 2027ರ ಡಿಸೆಂಬರ್ 31ರವರೆಗೆ ನಾಲ್ಕು ವರ್ಷಗಳ ಕಾಲ ಜಾರಿಯಲ್ಲಿರುವಂತೆ, ನಾಲ್ಕೂ ಸಾರಿಗೆ ನಿಗಮಗಳಲ್ಲಿ ಸಿಬ್ಬಂದಿಗಳ ನೇಮಕಾತಿಯನ್ನು ಬೇಗ ಮುಗಿಸಿ, ಎಲ್ಲ ನಿಗಮಗಳಲ್ಲಿಯೂ ನೌಕರರ ಮುಂಬಡ್ತಿಗೆ ಕ್ರಮ ಕೈಗೊಳ್ಳುವಂತೆ ಅವರು ಒತ್ತಾಯಿಸಿದರು.

ಶಕ್ತಿ ಯೋಜನೆಯಿಂದ ಚಾಲಕ, ನಿರ್ವಾಹಕರಿಗೆ ಆಗುತ್ತಿರುವ ಶಿಕ್ಷೆ ಮತ್ತು ಕಿರುಕುಳ ಕುರಿತು ಅಲಾಹಿತ ಟಿಪ್ಪಣೆ ಕೊಡುತ್ತಿದ್ದೇವ. ಅಲ್ಲದೇ ಆಡಳಿತ ವರ್ಗಕ್ಕೆ ಕೂಡಲೇ ಜಂಟಿ ಕ್ರಿಯಾ ಸಮಿತಿಯೊಂದಿಗೆ ಮಾತುಕತೆ ಮಾಡಿ ಈಡೇರಿಸಬೇಕು ಎಂದು ಅವರು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಸಿದ್ದಪ್ಪ ಪಾಲ್ಕಿ, ರಾಮಚಂದ್ರ ಹಯ್ಯಾಳಕರ್, ಕಲ್ಯಾಣರಾವ್ ಮುಂತಾದವರು ಉಪಸ್ಥಿತರಿದ್ದರು.

# ಬಂಜಾರಾ ಭವನದಲ್ಲಿ ವಿಶ್ವ ರೈತ ದಿನಾಚರಣೆ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.23: ನಗರದ ಬಂಜಾರಾ ಭವನದಲ್ಲಿ ಕಲ್ಯಾಣ ಕರ್ನಾಟಕ ರೈತಪರ ಸಂಘ, ಕಲಬುರಗಿ ಬಂಜಾರಾ ಸೇವಾ ಸಂಘ ಮತ್ತು ಕರ್ನಾಟಕ ಪ್ರದೇಶ ಬಂಜಾರ ಸಂಘ ಇವರ ಸಂಯುಕ್ತಾಶಯದಲ್ಲಿ ವಿಶ್ವ ರೈತ ದಿನಾಚರಣೆಯ ನಿಮಿತ್ಯ ವಿವಿಧ ರೈತರಿಗೆ ಸನ್ಮಾನಿಸಲಾಯಿತು.



ಕಲ್ಯಾಣ ಕರ್ನಾಟಕ ರೈತಪರ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ಕಲಬುರಗಿ ಬಂಜಾರಾ ಸೇವಾ ಸಂಘದ ಅಧ್ಯಕ್ಷ ಬಿ.ಬಿ. ನಾಯಕ್,ಬಂಜಾರವಿದ್ಯಾವರ್ಧಕರ್ ಸಂಘದ ಅಧ್ಯಕ್ಷ ರಾಮಚಂದ್ರ ಜಾಧವ,ಉಪಾಧ್ಯಕ್ಷರಾದ ಆನಂದ ಚವ್ಹಾಣ, ಲಕ್ಷ್ಮಣ ಚವ್ಹಾಣ, ಸುಜಾತಾ ಪಾಟೀಲ,ತುಕಾರಾಮ ರಾಠೋಡ, ವಿಠಲ್ ಜಾಧವ ನಂದೂರ, ಶಿರು ನಾಯಕ, ಬಲದೇವ ಸಿಂಗ್, ಚಂದ್ರಶಾ, ಕವಿತಾ ರಾಠೋಡ,ಶಾಮರಾಯ ಪಾಟೀಲ, ಗುಂಡಪ್ಪ ಪಟ್ಟಣ, ಶರಣಬಸಪ್ಪ,ಆದಿನಾಥ ಹೀರಾ ಸೇರಿದಂತೆ ಇತರರು ಇದ್ದರು.

ಚಿಂಚೋಳಿ: ಅಪೂರ್ಣವಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ

# ಅರ್ಜಿಯನ್ನು ಪೂರ್ಣಗೊಳಿಸಲು ಜನವರಿ 5 ರವರೆಗೆ ಕಾಲಾವಕಾಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.24.– ಚಿಂಚೋಳಿ ಶಿಶು ಅಭಿವೃದ್ಧಿ ಯೋಜನೆಯಡಿ 2024–25ನೇ ಸಾಲಿನಲ್ಲಿ 6 ಅಂಗನವಾಡಿ ಕಾರ್ಯಕರ್ತೆ ಮತು 14 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಸಂಬಂಧಿಸಿದಂತೆ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಲು ಒಟ್ಟು 4 ವಿವಿಧ ಹಂತಗಳಿದ್ದು, ಇದರಲ್ಲಿ ಕೆಲವರಿಗೆ 01ನೇ ಹಂತದಲ್ಲಿಯೇ "Application Successfully Uploaded" ಎಂಬ ಮೇಸೇಜ್ ಅವರು ಮೋಬೈಲ್‌ಗಳಿಗೆ ಸ್ವೀಕೃತವಾಗಿರುವುದರಿಂದ ಅರ್ಜಿಗಳನ್ನು ಪೂರ್ಣಗೊಳಿಸಿರುವುದಿಲ್ಲ, ಆದ್ದರಿಂದ ಅಪೂರ್ಣವಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅರ್ಜಿ ಪೂರ್ಣಗೊಳಿಸಲು 2025ರ ಜನವರಿ 5 ವರೆಗೆ ಕಾಲಾವಕಾಶ ನೀಡಲಾಗಿದೆ ಎಂದು ಚಿಂಚೋಳಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

ಈ ಹಿಂದೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು 2024ರ ಆಗಸ್ಟ್ 14 ರಂದು ಕೊನೆಯ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಒಟ್ಟು 445 ಅರ್ಜಿ ಬಂದಿದ್ದು, ಇವುಗಳಲ್ಲಿ 180 ಅರ್ಜಿಗಳು ಪೂರ್ಣವಾಗಿದ್ದು, ಇನ್ನೂಳಿದ 265 ಅರ್ಜಿಗಳು ವಿವಿಧ ಕಾರಣಗಳಿಂದ ಅಪೂರ್ಣವಾಗಿರುತ್ತವೆ. ಅದೇ ರೀತಿ ಸಹಾಯಕಿಯರ ಹುದ್ದೆಗಳಿಗೆ ಒಟ್ಟು 220 ಅರ್ಜಿಗಳು ಬಂದಿದ್ದು, ಅವುಗಳಲ್ಲಿ 107 ಅರ್ಜಿಗಳು ಪೂರ್ಣವಾಗಿದ್ದು, ಇನ್ನೂಳಿದ 113 ಅರ್ಜಿಗಳು ಅಪೂರ್ಣವಾಗಿರುತ್ತವೆ. ಅಪೂರ್ಣವಾಗಿರುವ ಅರ್ಜಿಗಳನ್ನು ಪೂರ್ಣಗೊಳಿಸಲು ದಿನಾಂಕ: 26–12–2024 ರಿಂದ 05–01–2025ವರಗೆ ಕಾಲಾವಕಾಶ ನೀಡಲಾಗಿದೆ.

ಅಪೂರ್ಣವಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಮಾಹಿತಿವುಳ್ಳ ಯಾದಿಯನ್ನು ಅಂಗನವಾಡಿ ಕೇಂದ್ರವಾರು ಲಗತ್ತಿಸಲಾಗಿದೆ. ಅಪೂರ್ಣವಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮೇಲ್ಕಂಡ ಕೊನೆಯ ದಿನಾಂಕದೊಳಗಾಗಿ ತಮ್ಮ ಲಾಗಿನ್ ಮತ್ತು ಪಾಸ್‌ವರ್ಡ್ ಬಳಸಿ ಅರ್ಜಿಯನ್ನು ಪೂರ್ಣಗೊಳಿಸಬೇಕು. ಕೊನೆಯ ದಿನಾಂಕ ಮುಗಿದ ನಂತರ ಯಾವುದೇ ಕಾರಣ–ಕ್ಕೂ ಮತ್ತೆ ಅರ್ಜಿಯನ್ನು ಪೂರ್ಣಗಳಿಸಲು ಅವಕಾಶ ನೀಡಲಾಗುವುದಿಲ್ಲ.

ಈ ಸಂದರ್ಭದಲ್ಲಿ ಕೇವಲ ಈಗಾಗಲೇ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಅಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಮಾತ್ರ ಅರ್ಜಿ ಪೂರ್ಣಗೊಳಿಸಲು ಅವಕಾಶವಿದ್ದು, ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಃಣಣಠಿ:// ಇಚಿಡಿಟಿಜಚಿಚಿಇಚಿರಿಟಜ. ಇಚಿಡಿ.ಟಿಭಿ.ಏಟಿ/ಚಿಭಭಿಜ/ ವೆಬ್‌ಸೈಟ್‌ನ್ನು ಅಥವಾ ಚಿತ್ತಾಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08475–273308 ಗೆ ಸಂಪರ್ಕಿಸಲು ಕೋರಲಾಗಿದೆ.

# ಸಮಾವೇಶ ಯಶಸ್ವಿಗೆ ಸಹಕರಿಸಿ:ಡಾ. ಪ್ರಭುಗೌಡ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ; ಬೆಳಗಾವಿಯಲ್ಲಿ ಡಿಸೆಂಬರ್ 27ರಂದು ನಡೆಯಲಿರುವ ಗಾಂಧಿ ಭಾರತ ಸಮಾವೇಶದಲ್ಲಿ ದೇವರ ಹಿಪ್ಪರಗಿ ಮತಕ್ಷೇತ್ರದಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸುವಂತಾಗಲು ನಮ್ಮ ಪಕ್ಷದ ಮುಖಂಡರು ಶಕ್ತಿಮೀರಿ ಪ್ರಯತ್ನಿಸಬೇಕು ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ,ಕ್ಷೇತ್ರ ಉಸ್ತುವಾರಿ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು.ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924 ರ ಡಿ. 27ರಂದು ಕಾಂಗ್ರೆಸ್ ಅಧಿವೇಶನ ನಡೆದಿತ್ತು,ಇದೀಗ ಇದಕ್ಕೆ ನೂರು ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ ಇದರ ಸವಿನೆನಪಿಗಾಗಿ ಕಾಂಗ್ರೆಸ್ ಪಕ್ಷವು ಡಿ. 27ರಂದು ಬೆಳಗಾವಿಯಲ್ಲಿ ಗಾಂಧಿ ಭಾರತ ಸಮಾವೇಶವನ್ನು ಆಯೋಜಿಸಿದೆ.ಬೆಳಗಾವಿ ಕಾಂಗ್ರೆಸ್ ಅಧಿವೇಶನ ಭಾರತೀಯ ರಾಜಕಾರಣದಲ್ಲಿ ಐತಿಹಾಸಿಕ,ಇದು ಪ್ರತಿಯೊಬ್ಬ ಕಾಂಗ್ರೆಸ್ಸಿಗನಿಗೂ ಹೆಮ್ಮೆಯ ವಿಷಯವಾಗಿದೆ, ಸಮಾವೇಶದಲ್ಲಿ ಸಿಡಬ್ಲ್ಯೂಸಿ ಸದಸ್ಯರು, ಕೆಪಿಸಿಸಿ ಅಧ್ಯಕ್ಷರು, ಸದಸ್ಯರು,ರಾಷ್ಟ್ರ ಹಾಗೂ ರಾಜ್ಯ ಮಟ್ಟದ ಪಕ್ಷದ ನಾಯಕರು ಭಾಗವಹಿಸಲಿದ್ದಾರೆ. ಈ ಸಮಾವೇಶವನ್ನು ಯಶಸ್ವಿಗೊಳಿಸುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರದಾಗಿದ್ದು ಕ್ಷೇತ್ರದ ನಮ್ಮೆಲ್ಲಾ ಕಾರ್ಯಕರ್ತರು ತಮ್ಮ ತಮ್ಮ ಊರುಕೇರಿಗಳಿಂದ ಜನರನ್ನು ಕರೆತರುವುದರ ಜೊತೆಗೆ ಸಮಾವೇಶದ ಯಶಸ್ವಿಗೆ ಕೈಜೋಡಿಸುವಂತೆ ಮನವಿ ಮಾಡಿಕೊಂಡಿದ್ದಾರೆ.

# ಹೋರಾಟಕ್ಕೆ ನನ್ನ ಸಂಪೂರ್ಣ ಬೆಂಬಲ: ಶಾಸಕ ನಾಡಗೌಡ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಆಲಮಟ್ಟಿ-ಯಾದಗಿರಿ ರೈಲು ಮಾರ್ಗ ನಿರ್ಮಾಣ ಅನುಷ್ಠಾನಕ್ಕಾಗಿ ನೀವು ನಡೆಸುತ್ತಿರುವ ಹೋರಾಟಕ್ಕೆ ನನ್ನ ಸಂಪೂರ್ಣ ಬೆಂಬಲ ಇದೆ ಎಂದು ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡ ಹೇಳಿದರು. ಸೋಮವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಲಮಟ್ಟಿ ಯಾದಗಿರಿ ರೈಲು ಮಾರ್ಗ ನಿರ್ಮಾಣ ಹೋರಾಟ ಸಮಿತಿಯ ಪದಾಧಿಕಾರಿಗಳು ನೀಡಿದ ಮನವಿಯನ್ನು ಸ್ವೀಕರಿಸಿ ಅವರು ಮಾತನಾಡಿ ಈ ಸಮಸ್ಯೆ ಕುರಿತು ನಾನು ಬೆಳಗಾವಿ ಅಧಿವೇಶನದಲ್ಲಿ ಪ್ರಶ್ನೆಯನ್ನು ಕೇಳಿ ಸದನದ ಗಮನ ಸೆಳೆಯಲು ಬಯಸಿದ್ದೆ ಆದರೆ ಕಾರಣಾಂತರಗಳಿಂದ ಈ ಪ್ರಶ್ನೆ ಸದನದ ಚರ್ಚೆಗೆ ಬರಲಿಲ್ಲ ಆದರೆ ನನಗೆ ಲಿಖಿತ ಉತ್ತರವನ್ನು ನೀಡಲಾಗಿದೆ ಇದರಲ್ಲಿ ಕೆಲವು ತಾಂತ್ರಿಕ ತೊಂದರೆಗಳು ಇವೆ ಇದರ ಕುರಿತೂ ನಾನು ತಜ್ಞ,ಅನುಭವಿಗಳೊಂದಿಗೆ ಮಾತನಾಡಿದ್ದೇನೆ,ಈ ನಿಮ್ಮ ಬೇಡಿಕೆ ಭಾರತ ಸರ್ಕಾರದ ವ್ಯಾಪ್ತಿಗೆ ಬರುವುದರಿಂದ ಕೇಂದ್ರದ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರೊಂದಿಗೆ ಮಾತನಾಡಬೇಕಾಗುತ್ತದೆ ನೀವೊಂದು ನಿಯೋಗ ತೆಗೆದುಕೊಂಡು ಬನ್ನಿ ನಾನು ನಿಮ್ಮ ಜೊತೆಗಿದ್ದು ನಿಮಗೆ ಎಲ್ಲಾ ರೀತಿಯಿಂದಲೂ ಸಹಕರಿಸುತ್ತೇನೆ ಎಂದರು. ಹೋರಾಟ ಸಮಿತಿಯ ಸದಸ್ಯ ಶ್ರೀಕಾಂತ ಪತ್ತಾರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಈ ನಮ್ಮ ಬೇಡಿಕೆ ಸುಮಾರು 9 ದಶಕಗಳ ಬೇಡಿಕೆಯಾಗಿದೆ ಎಂದು ತಿಳಿಸಿ,ಆಗ ಇದ್ದ ಪರಿಸ್ಥಿತಿ ಈಗ ಇಲ್ಲ,ತಾಳಿಕೋಟಿ ಇಂದು ವಾಣಿಜ್ಯ ಕೇಂದ್ರವಾಗಿ ಮಾರ್ಪಟ್ಟಿದೆ ಈಗ ಇದಕ್ಕೆ ಪೂರಕವಾದ ಎಲ್ಲಾ ಅನುಕೂಲತೆಗಳು ಲಭ್ಯ ಇವೆ

# ಹೆಚ್ಚುತ್ತಿರುವ ದುರ್ಘಟನೆಗಳಿಂದ ಮುಕ್ತಿಗಾಗಿ ಹೋಮ ಹವನ ಕಾರ್ಯಕ್ರಮ



(ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಇಲ್ಲಿನಕಾಳಿಗಲ್ಲಿಯ ಹನುಮಾನ ಮಂದಿರದಲ್ಲಿ ವಿಶ್ವ ಹಿಂದೂ ಪರಿಷದ್ ಬಜರಂಗ ಸಹಯೋಗದಲ್ಲಿ ಸಂಗಮೇಶ ವಾತಡೆರವರ ನೇತೃತ್ವದಲ್ಲಿ ಗೆಳೆಯರೊಂದಿಗೆ ಲೋಕಕಲ್ಯಾಣ ಹಾಗೂ ಕಲ್ಯಾಣಕ್ಕಾಗಿ ಇತ್ತೀಚೆಗೆ ನಗರದಲ್ಲೇಡೆಹೆಚ್ಚಾಗುತ್ತಿರುವಅಕಾಲಿಕ, ಅಪಘಾತಿಕ,ಆತ್ಮಹತ್ಯೆಂತಹ ಸಾವು ನೋವುಗಳುಕೇಳುಬರುತ್ತಿರುವುದರಿಂದ ಇದಕ್ಕೆಹೆಚ್ಚಾಗಿ ಅತಿ ಸಣ್ಣವಯಸ್ಸಿನ ಹಿಂದೂಯುವಕರು,ವಿದ್ಯಾರ್ಥಿಗಳೇ, ಬಲಿಯಾಗುತ್ತಿರುವ ಕಾರಣ ಮುಂದೆ ಇಂತಹ ದುರ್ಘಟನೆಗಳು ನಮ್ಮ ತಾಲೂಕಿನಲ್ಲಿಮತ್ತೆಮರುಕಳಿಸಬಾರದು ಎಂಬುವ ಸದ್ದುದ್ದೇಶದಿಂದ ವಿಘ್ನನಿವಾರಕ ವಿಘ್ನೇಶ್ವರನಲ್ಲಿ ಪ್ರಾಥಿಸುತ್ತಾ, ಗಣಹೋಮ ಯಜ್ಞ ಮಾಡಲಾಯಿತು. ದಿವ್ಯಸಾನಿಧ್ಯತ್ರಿಪುರಾಂತನ ಪೂಜ್ಯ ಶ್ರೀಷ,ಬ್ರ,ಡಾ,ಅಭಿನವ ಘನಲಿಂಗ ರುದ್ರಮನಿ ಶಿವಾಚಾರ್ಯರಿಂದ ವೀರಾಂಜನೇಯನಿಗೆ ಪೂಜೆ ಸಲ್ಲಿಸಿ ಮಾತನಾಡಿ ಜಗತ್ತಿನಲ್ಲಿರುವ ಎಲ್ಲಾ ಪ್ರಾಣಿಗಳಿಗಿಂತ ಅತಿ ಬುದ್ಧಿವಂತ ಪ್ರಾಣಿ ಅಂದ್ರೆ ಮನುಷ್ಯರಂತೆ,ಮನುಷ್ಯ ಎಂದ ಮೇಲೆ ಅಕಸ್ಮಾತವಾಗಿ,ತಿಳಿದು ತಿಳಿಯದೆಯೂ,ಆದ ತಪ್ಪುಗಳಿಗೆ ವಿನಾಕಾರಣ ಗೊಂದಲಗೊಳ್ಳದೆ, ಧೃತಿಗೆಡದೆ,ಆತ್ಮಸ್ಥೈರ್ಯ ಕಳೆದುಕೊಳ್ಳದೆ,ಧೈರ್ಯವಾಗಿ ಎದುರಿಸುವ ಛಲ ಹೊಂದಿರಬೇಕು ಇಲ್ಲವೇ ಗುಡಿ ಗೋಪುರಗಳಿಗೆ ತೆರಳಿ ಆಧ್ಯಾತ್ಮಿಕದಲ್ಲಿ ತೊಡಗಿ ಏಕಾಗ್ರತೆ ಹೊಂದಿ ಧ್ಯಾನ,ಭಜನೆ ಮಾಡಿದಾಗ ತನ್ನ ತಪ್ಪಿನ ಮರಿವಿಕೆಯಾಗಿ ತನ್ನಿಂದ ತಾನೇ ಧೈರ್ಯ ಬರುವುದು, ಇಲ್ಲವೇ ಸಂತರ ಮಾರ್ಗದರ್ಶನ ಪಡೆದು ಬರುವ ಸಮಸ್ಯೆಗಳಿಗೆ ಪರಿಹಾರ ಪಡೆಯಬೇಕು ಹಾಗೇಯೆ ಅವುಗಳಿಗೆ ಎದುರಿಸಿ ನಿಲ್ಲಬೇಕು ವಿನಹ ಹೇಡಿಯ ಹಾಗೆ ಸಾಯಬಾರದು,ದೈವ ಜನ್ಮ ನೀಡುವುದು ಸಮಾಜಕ್ಕೆ, ಧರ್ಮಕ್ಕೆ,ದೇಶಕ್ಕೆ,ಏನಾದರೂ ಒಳಿತು ಮಾಡಲಿ ಎಂದು ಅದನ್ನು ಬಿಟ್ಟು ವ್ಯಸನಗಳಿಗೆ ಬಲಿಯಾಗಿ,ಕ್ಷುಲ್ಲಕ ವಿಚಾರಗಳಿಗೆ ತಲೆಬಾಗಿ, ಹುಡುಗಾಟದಿಂದ ಹಿರಿಯರ ಮಾತು ಕೇಳದೆ ಆಗುವ ಅನಾಹುತಗಳಿಗೆ ಜವಾಬ್ದಾರರು ಯಾರು ಅಲ್ಲ,ಅಲ್ಲಿ ನೀವು ಮಾತ್ರ ಕಳೆದೊಗುತ್ತೀರಿ, ಉಳಿದವರು ನಾಲ್ಕು ದಿನ ಕಣ್ಣೀರು ಹಾಕಿ ಮತ್ತೆ ಯಥಾವತ್ತಾಗಿ ಜೀವನ ನಡೆಸುತ್ತಾರೆ,ನಡೆಸಲೇಬೇಕು ಏಕೆಂದರೆ ಇದು ಮನುಷ್ಯನ ಸಹಜ ಗುಣ,ಇಲ್ಲಿ ಎಲ್ಲವನ್ನು ಮರೆಸುವ ಪ್ರಕೃತಿಯ ಸಹಜ ಗುಣವೂ ಹೌದು,ಹೀಗಾಗಿ ನಮ್ಮಿಂದ ಆತ್ಮಸ್ಥೈರ್ಯ ತುಂಬುವ ಕೆಲಸವಾಗಬೇಕೇ ಹೊರತು ಭಯಪಡಿಸುವ ಕೆಲಸವಾಗಬಾರದು ನಮಗೆ ಜನ್ಮಸಿಗುವ 84 ಲಕ್ಷ ಜೀವರಾಶಿಗಳಲ್ಲಿ ಮಾನವ ಜನ್ಮ ಶ್ರೇಷ್ಠವಾದದ್ದು ಈ ಜನ್ಮದಲ್ಲಿ ಯಾರು ಪರಿಪೂರ್ಣರಲ್ಲ, ಕೆಲವೊಂದು ಸಮಯದಿ ತಿಳಿದು ತಿಳಿಯದೆನು ಒಂದಿಷ್ಟು ತಪ್ಪುಗಳು ಆಗುವುದು ಸಹಜ, ತಪ್ಪು ಮಾಡಿದ ಮೇಲೆ ತಿದ್ದಿ ನಡೆದಾಗ ಮಾತ್ರ ಮನುಷ್ಯನ ಜನ್ಮ ಸಾರ್ಥಕ ವಿನಹ ಆತ್ಮಹತ್ಯೆ ಒಂದೇ ಪರಿಹಾರವಲ್ಲ ಹತ್ತಾರು ತಪ್ಪುಗಳನ್ನು ಮಾಡುವವರು ಇಂದು ನಿರ್ಭೀತಿಯಿಂದ ಓಡಾಡುತ್ತಿದ್ದಾರೆ,ಆದರೆ ನಮಗೆ ತಿಳಿದೂ ತಿಳಿಲಾರದೂ ಆಗಿರುವ ತಪ್ಪಿಗೆ ಮನನೊಂದ ಬಲಿಯಾಗುವುದು ಬೇಡ,ಅದನ್ನು ಎದುರಿಸುವ ಆತ್ಮಸ್ಥೈರ್ಯ ತುಂಬುವ ಕಾರ್ಯ ನಾವೆಲ್ಲರೂ ಕೂಡಿ ಮಾಡಬೇಕಾಗಿದೆ,ಇಂತಹ ಹೋಮ ಹವನ ಯಜ್ಞಗಳು ನಿರಂತರವಾಗಿ ನಡೆಯುತ್ತಲೇ ಇರಬೇಕು,ಇದರಿಂದ ಮನುಷ್ಯನಲ್ಲಿನ ನಕಾರಾತ್ಮಕ ವಿಚಾರಗಳು ನಶಿಸಿ ಸಕಾರಾತ್ಮಕ ವಿಚಾರಗಳು ಬರುವುದು, ಹಾಗೆಯೆ ಪರಿಸರ ಶುಚಿಯಾಗಿ ಪರಿಸರದ ಸಮತೋಲನ ಕಾಪಾಡಲು ಸಾಧ್ಯ ಎಂದು ಶ್ರೀಗಳು ಆಶೀರ್ವಚನ ನೀಡಿದರು. ಈ ವೇಳೆ ಯಜ್ಞನೆರವೇರಿಸಿದ ಪಿಂಟು ಪಾಠಕ್ ವಿಹಿಂಪ. ತಾಲ್ಲೂಕು ಅಧ್ಯಕ್ಷರಾದ ಶ್ರೀಶೈಲ ವಾತಡೆ. ಬಜರಂಗದಳದ ಸಂಯೋಜಕರಾದ ರವಿ ನಾವದ್ಗೇಕರ, ಸಚ್ಚಿನ ಸೂರ್ಯವಂಶಿ,ಉಪನ್ಯಾಸರಾದ ಶಿವಲಿಂಗಯ್ಯಸ್ವಾಮಿ ಶಾನಭೋಗಿ ಹನುಮಾನ ಮಂದಿರದ,ಅಧ್ಯಕ್ಷರಾದ ಲಖನ ಸಾಂಡೆ. ಸಂಗಮೇಶ ವಾತಡೆರವರ. ಗೆಳೆಯರ ಬಳಗದ ಯುವಕರು ಸೇರಿದಂತೆ ಅನೇಕರು ಭಾಗಿಯಾಗಿದರು.

# ಕೊಪ್ಪಳ ಗವಿಶ್ರೀ ಕ್ರೀಡಾ ಉತ್ಸವ ಆ ಯೋಜನೆ ಸಂಸದ ಕೆ. ರಾಜಶೇಖರ ಹಿಟ್ನಾಳ

(ವೀರಯ್ಯ ವಿ ಹಿರೇಮಠ )

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಜನವರಿಯಲ್ಲಿ ನಡೆಯಲಿರುವ ಗವಿಶ್ರೀ ಜಾತ್ರೆಯ ನಿಮಿತ್ಯ ಕೊಪ್ಪಳ ನಗರದಲ್ಲಿ ಗವಿಶ್ರೀ ಕ್ರೀಡಾ ಉತ್ಸವ-2025ನ್ನು ಹಮ್ಮಿಕೊಳ್ಳಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಮಂಗಳವಾರ ಗವಿಶ್ರೀ ಕ್ರೀಡಾ ಉತ್ಸವ-2025 ಕುರಿತು ಮಾಹಿತಿ ನೀಡಲು ಕೊಪ್ಪಳ ನಗರದ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಕೊಪ್ಪಳ ಜಿಲ್ಲೆಯಲ್ಲಿ ಐತಿಹಾಸಿಕವಾಗಿ ಧಾರ್ಮಿಕವಾಗಿ ಹಾಗೂ ಭಕ್ತಿಯಿಂದ ಜಿಲ್ಲೆ, ರಾಜ್ಯ, ವಿದೇಶಗಳಿಂದಲೂ ಕೂಡ ಭಕ್ತರು ಆಗಮಿಸಿ ನೇರವೇರಿಸುವ ಅಂದಾಜ 25 ಲಕ್ಷ ಅಧಿಕ ಭಕ್ತಾದಿಗಳು, ಜನರು ಸೇರುವಂತಹ ಗವಿಶ್ರೀ ಜಾತ್ರ ಮಹೋತ್ಸವ ಅಂಗವಾಗಿ ರಾಜ್ಯದ ಮಹಾಜನರು, ಯುವಜನರು, ಮಹಿಳೆಯರು, ರೈತರು, ಮಕ್ಕಳು, ಎಲ್ಲಾ ವರ್ಗದವರು ಕೂಡ ಸೇರಿಕೊಂಡು ಜಾನಪದ ಶೈಲಿಯ ಹಾಗೂ ಪ್ರಸ್ತುತ ಪ್ರಚಲಿತವಿರುವ ಆಟಗಳನ್ನು ಸೇರಿಸಿ ಜಾತ್ರಾ ನಿಮಿತ್ಯ ಗವಿಶ್ರೀ ಕ್ರೀಡಾ ಉತ್ಸವ-2025ನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಕ್ರೀಡಾಕೂಟವನ್ನು ಕೊಪ್ಪಳ ಗವಿಮಠ, ಕೊಪ್ಪಳ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಕೈಗಾರಿಕೆಗಳು ಹಾಗೂ ವಾಣಿಜ್ಯೋದ್ಯಮಿಗಳ ಸಹಕಾರದಿಂದ ಹಾಗೂ ಜಿಲ್ಲಾ ಅಥ್ಲೆಟಿಕ್ಸ್ ಅಸೋಶಿಯೇಶನ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೊಪ್ಪಳ ಕುಸ್ತಿ ಸಂಘ, ಬ್ಯಾಡ್ಮಿಂಟನ್ ಅಸೋಶಿಯೇಶನ್,ಕಬಡ್ಡಿ ಹಾಗೂ ವಾಲಿಬಾಲ್ ಅಸೋಶಿಯೇಶನ್ ಮತ್ತು ಹಲವಾರು ಸಂಘ ಸಂಸ್ಥೆಗಳನ್ನ ಒಳಗೊಂಡು ಎಲ್ಲಾ ವರ್ಗದವರು ಮುಕ್ತವಾಗಿ ಭಾಗವಹಿಸುವ ಹಾಗೇ ಗವಿಶ್ರೀ ಕ್ರೀಡಾಕೂಟ-2025ನ್ನು ಆಯೋಜಿಸಲಾಗಿದೆ. ಈ ಕ್ರೀಡಾಕೂಟದಲ್ಲಿ 17 ವಿವಿಧ ರೀತಿಯ ಕ್ರೀಡೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಪುರುಷ ಮತ್ತು ಮಹಿಳೆಯರಿಗೆ ಮುಕ್ತ ವಾಲಿಬಾಲ್,ಕಬಡ್ಡಿ,ಮ್ಯಾರಾಥಾನ,ಶೆಟಲ್ ಬ್ಯಾಡ್ಮಿಂಟನ್, ಛದ್ಮವೇಷ, ದೇಹದಾರ್ಢ್ಯ, ಪಂದ್ಯಾವಳಿ ಏರ್ಪಡಿಸಲಾಗಿದೆ. ಪುರುಷರ ಆಹ್ವಾನಿತ ಕ್ರೀಡೆಗಳಾಗಿ ಕ್ರಿಕೆಟ್, ಗಾಳಿಪಟ, ಮಲ್ಲಕಂಬ, ಕುಸ್ತಿ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಪುರುಷರಿಗಾಗಿ ಜಿಲ್ಲಾ ಮಟ್ಟದಲ್ಲಿ ಎತ್ತಿನ ಬಂಡಿ ಶೃಂಗಾರ ಸ್ಪರ್ಧೆ, ಯುವಕರಿಂದ ಎತ್ತಿನ ಬಂಡಿ ಜಗ್ಗುವದು, ಸಂಗ್ರಾಣಿ ಕಲ್ಲು ಎತ್ತುವದು ಮತ್ತು ವಿಕಲಚೇತನರ ವಾಲಿಬಾಲ್ ಪಂದ್ಯಾವಳಿ. ಪುರುಷರ ಹಾಗೂ ಮಹಿಳೆಯರಿಗಾಗಿ ಜಿಲ್ಲಾ ಮಟ್ಟದಲ್ಲಿ ಹಗ್ಗ ಜಗ್ಗಾಟ ಸ್ಪರ್ಧೆ, ಮಹಿಳೆಯರಿಗೆ ಜಿಲ್ಲಾ ಮಟ್ಟದ ರಂಗೋಲಿ ಹಾಗೂ ಥ್ರೋಬಾಲ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದರು.

ಪ್ರಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಗಾಳಿಪಟ ಉತ್ಸವನ್ನು ಹಮ್ಮಿಕೊಳ್ಳಲಾಗಿದ್ದು, ಕರ್ನಾಟಕ, ಮಹಾರಾಷ್ಟ್ರ, ಕೇರಳ ಮತ್ತು ಹರಿಯಾಣದಿಂದಲೂ ಅನುಭವಿ ನುರಿತ ತಂಡಗಳು ಗವಿಶ್ರೀ ಮೈದಾನದಲ್ಲಿ ಸುಮಾರು 100ಕ್ಕೂ ಅಧಿಕ ಗಾಳಿಪಟಗಳ ಪ್ರದರ್ಶನವನ್ನು 2025ರ ಜನವರಿ 16 ರಂದು ನಡೆಸಲಿದ್ದಾರೆ. ಮಕ್ಕಳು ಯುವಕರಿಗೆ ಸ್ಫೂರ್ತಿ ತುಂಬುವಂತೆ ಮಕರ ಸಂಕ್ರಾತಿಯ ವಿಶೇಷವಾಗಿಯೆ ಬೃಹತ್ ಪ್ರಮಾಣದ ಗಾಳಿಪಟ ಉತ್ಸವವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಜನವರಿ 14 ರಂದು ಸಂಜೆ 3.30 ಗಂಟೆಗೆ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆಯನ್ನು ಗವಿಮಠ ಆವರಣದಲ್ಲಿ ಆಯೋಜಿಸಲಾಗಿದೆ. ಗವಿಶ್ರೀ ಕ್ರೀಡಾಕೂಟದಲ್ಲಿ ರೈತರನ್ನು ಗಮನದಲ್ಲಿ ಇಟ್ಟುಕೊಂಡು ರೈತರ ಜೀವನ ಅವಿಭಾಜ್ಯ ಅಂಗವಾದ ಎತ್ತು, ಚಕ್ಕಡಿ, ಇವುಗಳ ಅಲಂಕಾರದ ಸ್ಪರ್ಧೆಯನ್ನು ಜನವರಿ 17 ರಂದು ನಗರದ ತಾಲ್ಲೂಕ ಕ್ರೀಡಾಂಗಣದಿಂದ ಗವಿಮಠದವರೆಗೆ ನಡೆಯಲಿದೆ. ಅದರಂತೆ, ರೈತ ಮಕ್ಕಳು ಮತ್ತು ಯುವಜನರಿಗಾಗಿ ಎತ್ತಿನ ಬಂಡಿ ಜಗ್ಗುವ ಸ್ಪರ್ಧೆಯನ್ನು ಸಹ ಏರ್ಪಡಿಸಲಾಗಿದೆ ಎಂದರು.

ಸ್ಪರ್ಧೆಗಳ ವಿವರ : ಗವಿಶ್ರೀ ಕ್ರೀಡಾ ಉತ್ಸವ-2025ರ ನಿಮಿತ್ತ ಜನವರಿ 14 ರಂದು ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಪುರುಷ ಹಾಗೂ ಮಹಿಳೆಯರಿಗಾಗಿ ಮ್ಯಾರಥಾನ್ ಸ್ಪರ್ಧೆ ಮತ್ತು ಗವಿಮಠ ಆವರಣದಲ್ಲಿ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಜ. 15 ರಂದು ಗವಿಮಠದ ಆವರಣದಲ್ಲಿ ವಿಶೇಷಚೇತನ ಮಕ್ಕಳಿಂದ ಮಲ್ಲಕಂಬ ಪ್ರದರ್ಶನ ಮತ್ತು ಯುವಕರಿಂದ ಎತ್ತಿನ ಬಂಡಿ ಜಗ್ಗುವ ಸ್ಪರ್ಧೆಗಳು ಇರಲಿವೆ. ಜ. 16 ರಂದು ಗವಿಮಠದ ಆವರಣದಲ್ಲಿ ಕುಸ್ತಿ ಸ್ಪರ್ಧೆ ಮತ್ತು ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಶೆಟಲ್ ಬ್ಯಾಡ್ಮಿಂಟನ್ (ಡಬಲ್ಸ್) ಸ್ಪರ್ಧೆ, ಹಗ್ಗ-ಜಗ್ಗಾಟ, ಗಾಳಿಪಟ ಉತ್ಸವ ಮತ್ತು ತಾಲ್ಲೂಕು ಕ್ರೀಡಾಂಗಣದಲ್ಲಿ ಬಾಲಿಬಾಲ್, ವಿಕಲಚೇತನರ ಬಾಲಿಬಾಲ್, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಕಬಡ್ಡಿ, ಛದ್ಮವೇಷ ಸ್ಪರ್ಧೆ, ಪುರುಷರಿಗಾಗಿ ದೇಹದಾರ್ಢ್ಯತೆ ಸ್ಪರ್ಧೆ ಹಾಗೂ ಕ್ರಿಕೆಟ್ ಪಂದ್ಯಾವಳಿ ನಡೆಯಲಿವೆ. ಜ. 17 ರಂದು ಗವಿಮಠ ಆವರಣದಲ್ಲಿ ಸಂಗ್ರಾಣೆ ಕಲ್ಲು ಎತ್ತುವ ಸ್ಪರ್ಧೆ, ಎತ್ತಿನ ಬಂಡಿ ಅಥವಾ ಎತ್ತಿನ ಬಂಡಿ ಅಲಂಕಾರ ಸ್ಪರ್ಧೆ ಮತ್ತು ತಾಲ್ಲೂಕು ಕ್ರೀಡಾಂಗಣದಲ್ಲಿ ಮಹಿಳೆಯರಿಗಾಗಿ ಥ್ರೋಬಾಲ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಈ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಪ್ರಥಮ, ದ್ವಿತಿಯ ಹಾಗೂ ತೃತೀಯ ಸೇರಿದಂತೆ ಇತರೆ ಹಲವಾರು ಬಹುಮಾನಗಳನ್ನು ನೀಡಲಾಗುತ್ತದೆ ಎಂದು ಸಂಸದರು ಮಾಹಿತಿ ನೀಡಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ. ಶ್ರೀನಿವಾಸ ಗುಪ್ತಾ, ವೀರೇಶ್ ಮಹಾಂತಯ್ಯನಮಠ, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ, ಕೊಪ್ಪಳ ತಾಲ್ಲೂಕು ಕ್ರೀಡಾಧಿಕಾರಿ ಶರಣಪ್ಪ ಬಂಡಿಹಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ದೌರ್ಜನ್ಯ ಪ್ರಕರಣಗಳಲ್ಲಿ ತ್ವರಿತ ಪರಿಹಾರ ಒದಗಿಸಿ : ಜಿಲ್ಲಾಧಿಕಾರಿ ನಲಿನ್ ಅತುಲ್

(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ:ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ತ್ವರಿತವಾಗಿ ಪರಿಹಾರ ಒದಗಿಸಲು ಅಗತ್ಯಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ದೌರ್ಜನ್ಯ ನಿಯಂತ್ರಣ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಅಧ್ಯಕ್ಷರಾದ ನಲಿನ್ ಅತುಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ದೌರ್ಜನ್ಯ ನಿಯಂತ್ರಣ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ದೌರ್ಜನ್ಯ,ಗಲಭೆ ಪ್ರಕರಣಗಳ ತನಿಖೆಯಲ್ಲಿ ಸಂತ್ರಸ್ತರೆಂದು ಸಾಬೀತಾದವರಿಗೆ ಸರ್ಕಾರದಿಂದ ನಿಗದಿಪಡಿಸಿದ ಪರಿಹಾರವನ್ನು ಕೂಡಲೇ ಒದಗಿಸಬೇಕು. ಪರಿಶಿಷ್ಟ ಜಾತಿ, ಪಂಗಡಗಳ ಕಾಲೋನಿಯಲ್ಲಿ ಅಗತ್ಯವಿರುವ ರಸ್ತೆ, ಕುಡಿಯುವ ನೀರು, ಶೌಚಾಲಯ, ಚರಂಡಿ ವ್ಯವಸ್ಥೆ ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ದೌರ್ಜನ್ಯ ಪ್ರಕರಣಗಳಲ್ಲಿ ದೂರು ಸಲ್ಲಿಸಲು ಬಂದಾಗ ಯಾವುದೇ ಕಾರಣ ನೀಡದೆ ದೂರು ಸ್ವೀಕರಿಸಿ. ಪ್ರಕರಣ ದಾಖಲಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿವಿಧ ನಿಗಮಗಳಿಂದ ದೊರೆಯುವ ಸೌಲಭ್ಯಗಳನ್ನು ಸಕಾಲದಲ್ಲಿ ತಲುಪಿಸಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ ಮಾತನಾಡಿ,ಜಿಲ್ಲೆಯಲ್ಲಿ ಯಾವುದೇ ಪೊಲೀಸ್ ಠಾಣೆಯಲ್ಲಿ ದಾಖಲಾದ ದೌರ್ಜನ್ಯ ಪ್ರಕರಣಗಳಲ್ಲಿ ವಿಳಂಬವಿಲ್ಲದೆ ತನಿಖೆ ನಡೆಯುತ್ತಿದ್ದು, ಸಂತ್ರಸ್ತರಿಗೆ ಅಗತ್ಯ ಪರಿಹಾರ ಒದಗಿಸಲಾಗಿದೆ. ಪ್ರತಿ ತಿಂಗಳ ಎರಡನೇ ಭಾನುವಾರದಂದು ಎಸ್.ಸಿ.,ಎಸ್.ಟಿ ಜನಾಂಗದವರ ಕುಂದುಕೊರತೆಗಳ ಸಭೆಯನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಅಜ್ಜಪ್ಪ ಸೊಗಲದ ಮಾತನಾಡಿ, 2024ನೇ ಕ್ಯಾಲೆಂಡರ್ ವರ್ಷದಲ್ಲಿ ಒಟ್ಟು 62 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, 18 ಪ್ರಕರಣಗಳು ಎಫ್ಐಆರ್, 39 ಪ್ರಕರಣಗಳು ಚಾರ್ಜ್ ಶೀಟ್ ಹಂತದಲ್ಲಿದ್ದು, ಒಟ್ಟು 57 ಪ್ರಕರಣಗಳಲ್ಲಿ 1,88,22,500 ರೂ.ಗಳ ಪರಿಹಾರ ಧನವನ್ನು ಮಂಜೂರು ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಎಸ್ಸಿಪಿ-ಟಿಎಸ್ಪಿ ಪ್ರಗತಿ ಪರಿಶೀಲನೆ: ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ 2013 ರನ್ವಯ ಅನುಸೂಚಿತ ಜಾತಿಗಳು ಉಪಯೋಜನೆ, ಬುಡಕಟ್ಟು ಉಪಯೋಜನೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕಾರ್ಯಕ್ರಮಗಳ ನವೆಂಬರ್-2024ರ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಎಸ್ಸಿಪಿ-ಟಿಎಸ್ಪಿ ಯೋಜನೆಯ ಮೂಲ ಧ್ಯೇಯ ಮತ್ತು ಮಾನದಂಡಗಳಿಗೆ ಅನುಸಾರವಾಗಿ ಇಲಾಖೆಗಳು ಕಾರ್ಯನಿರ್ವಹಿಸಬೇಕು. ಈ ಯೋಜನೆಗಳನ್ನು ಜಾಗರೂಕತೆಯಿಂದ ನಿರ್ವಹಿಸಬೇಕು. ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಳಸಲಾಗಿದೆ, ಯಾವ ಪ್ರದೇಶದಲ್ಲಿ ಕಾಮಗಾರಿ ಮಾಡಲಾಗಿದೆ ಎನ್ನುವ ಮಾಹಿತಿಯನ್ನು ಸ್ಪಷ್ಟವಾಗಿ ನೀಡಬೇಕು. ಅಲ್ಲದೇ ಇಲಾಖೆಗಳಿಗೆ ನಿಗದಿಪಡಿಸಲಾದ ಗುರಿಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್ ಸೇರಿದಂತೆ ದೌರ್ಜನ್ಯ ನಿಯಂತ್ರಣ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರುಗಳು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶಿಲ್ದಾರರು ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು

# ರಾಯಚೂರು ಶಿಶು ಅಭಿವೃದ್ಧಿ ಯೋಜನೆ: ಅಸಂಪೂರ್ಣ ಅರ್ಜಿಗಳನ್ನು ಪೂರ್ತಿಗೊಳಿಸಲು ಹೊಸ ಅವಧಿ ಘೋಷಣೆ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು,ಡಿ.24-ರಾಯಚೂರು ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ 11 ಅಂಗನವಾಡಿ ಕಾರ್ಯಕರ್ತೆ ಹಾಗೂ 23 ಸಹಾಯಕಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು 2024ರ ಸೆಪ್ಟೆಂಬರ್ 21 ರಿಂದ ಅಕ್ಟೋಬರ್ 20 ರವರೆಗೆ ಅವಕಾಶ ನೀಡಲಾಗಿತ್ತು.

ಅರ್ಜಿಗಳನ್ನು ಸಲ್ಲಿಸುವಾಗ ತಾಂತ್ರಿಕ ಸಮಸ್ಯೆಗಳ ಕಾರಣ 4 ಹಂತಗಳಲ್ಲಿ ಕೆಲವರು 1ನೇ ಹಂತದಲ್ಲಿಯೇ "Application Successfully Uploaded" ಎಂಬ ಸಂದೇಶ ಪಡೆದಿದ್ದಾರೆ. ಈ ಕಾರಣದಿಂದ, 319 ಕಾರ್ಯಕರ್ತೆ ಹಾಗೂ 183 ಸಹಾಯಕಿ ಹುದ್ದೆಗಳಿಗೆ ಅರ್ಜಿಗಳು ಅಸಂಪೂರ್ಣವಾಗಿವೆ.

2024ರ ಡಿಸೆಂಬರ್ 20 ರಂದು ಹೊರಡಿಸಿರುವ ಸರ್ಕಾರದ ಆದೇಶದಂತೆ, 2024ರ ಡಿಸೆಂಬರ್ 26 ರಿಂದ 2025ರ ಜನವರಿ 5 ರವರೆಗೆ ಅರ್ಜಿಗಳನ್ನು ಪೂರ್ತಿಗೊಳಿಸಲು ಅವಕಾಶ ನೀಡಲಾಗುತ್ತಿದೆ. ಅರ್ಜಿದಾರರು ೃಣಣಠಿ://ಚಿಟಿ-ರಚಿಟಿತಿಚಿಜುಡಿಜಛಿಡಿಣುಣ.ಇಚಿಡಿ.ಟುಛಿ.ಎಟಿ ವೆಬ್‌ಸೈಟ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಅಪೂರ್ಣ ಅರ್ಜಿಗಳನ್ನು ಪೂರ್ತಿಗೊಳಿಸಲು ಹೊಸ ಅವಧಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಡಿ.24-ಮಾನವಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ವ್ಯಾಪ್ತಿಯಲ್ಲಿ ಖಾಲಿ ಇರುವ 20 ಅಂಗನವಾಡಿ ಕಾರ್ಯಕರ್ತೆ ಮತ್ತು 54 ಸಹಾಯಕಿಯ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ:30-08-2024 ರಿಂದ 29-09-2024 ರವರೆಗೆ ಕಾಲಾವಕಾಶ ನೀಡಲಾಗಿತ್ತು.

ಪ್ರಸ್ತುತ, ಅರ್ಜಿ ಸಲ್ಲಿಸುವ ಅವಧಿ ಮುಗಿದಿದ್ದು, ಅರ್ಜಿಗಳನ್ನು ಸಲ್ಲಿಸುವಲ್ಲಿ ಅರ್ಜಿದಾರರಿಗೆ ಹಲವು ತಾಂತ್ರಿಕ ಸಮಸ್ಯೆಗಳು ಉಂಟಾಗಿದ್ದರಿಂದ, 319 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ ಹಾಗೂ 183 ಸಹಾಯಕಿಯ ಹುದ್ದೆಗಳಿಗೆ ಅಪೂರ್ಣ ಅರ್ಜಿಗಳನ್ನು ಸ್ವೀಕರಿಸಲಾಗಿದೆ.

2024ರ ಡಿಸೆಂಬರ್ 20 ರಂದು ಸರ್ಕಾರದಿಂದ ಹೊರಡಿಸಲಾಗಿರುವ ಆದೇಶದಲ್ಲಿ, ಅರ್ಜಿಯನ್ನು ಪೂರ್ತಿಗೊಳಿಸದ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ನೀಡಲಾಗಿದ್ದು, ಅವರು 2024ರ ಡಿಸೆಂಬರ್ 26 ರಿಂದ 2025ರ ಜನವರಿ 5 ರವರೆಗೆ ತಮ್ಮ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ನೀಡಲಾಗಿದೆ. ಅರ್ಜಿದಾರರು https://anganwadirecruit.kar.nic.in ವೆಬ್‌ಸೈಟ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸುವಂತೆ ಮಾನವಿ ಶಿಶು ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲೆ ಬಾಗಿಲು ಒಡೆದ ಕಿಡಿಗೇಡಿಗಳು, ಕ್ರಮಕ್ಕೆ ಆಗ್ರಹ





(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಟಿಪ್ಪು ಸುಲ್ತಾನ್ ವೃತ್ತದಲ್ಲಿಯ ಬಹಾರ ಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕೊಠಡಿ ಬಾಗಿಲು,ಗಾಜು ಒಡೆದ ಕಿಡಿಗೇಡಿಗಳನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಲು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ.ಗಫಾರ್ ಹಾಗೂ ಪಾಸ್ಟರ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್ ಮುಂತಾದವರು ಆಗ್ರಹಿಸಿದ್ದಾರೆ, ಮೇ 2022 ರಿಂದ ಇಲ್ಲಿಯವರೆಗೆ 25ಕ್ಕೂ ಹೆಚ್ಚು ಶಾಲೆಯ ಕೊಠಡಿಗಳ ಬಾಗಿಲುಗಳ ಮತ್ತು ಗೇಟಿನ ಕೀಲಿಗಳನ್ನು ಕಿಡಿಗೇಡಿಗಳು ಒಡೆದಿದ್ದಾರೆ,ದಿ,01/09/2022 ರಂದು ಗೇಟ್ ಮುರಿದು ಶಾಲೆಯ ವರ್ಗದ ಬಾಗಿಲಿಗೆ ಕಿಡಿಗೇಡಿಗಳು ಸತ್ತ ಹಾವು ನೇತು ಹಾಕಿದ್ದರು, ಆಗೂ ಸಹ ನಗರ ಪೊಲೀಸ್ ಠಾಣೆಗೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೂ ದೂರನ್ನು ನೀಡಲಾಗಿತ್ತು, ಆಗ ಪೊಲೀಸರು ಬಂದು ಶಾಲಾ ಕೊಠಡಿ ಬಾಗಿಲಿಗೆ ಹಾಕಲಾಗಿದ್ದ ಸತ್ತ ಹಾವು ಇರುವುದನ್ನು ಪರಿಶೀಲಿಸಿ ಚಿತ್ರಗಳನ್ನು ತೆಗೆದುಕೊಂಡು ಹೋದರು, ಬಳಿಕವೂ ಪದೇಪದೇ ಕೊಠಡಿಗಳ ಬಾಗಿಲುಗಳ ಕಿಲಿಗಳನ್ನು ಹಾಗೂ ಗೇಟಿನ ಕೀಲಿಗಳನ್ನು ಒಡೆಯುವುದು ಮುಂದುವರಿಸಿ ಈಗ ಸುಮಾರು 25ಕ್ಕೂ ಹೆಚ್ಚು ಕೀಲಿಗಳ ಸಂಖ್ಯೆ ದಾಟಿದೆ, ಶಾಲೆಯಿಂದ ಕೂಗಳತೆಯಲ್ಲಿ ನಗರ ಪೊಲೀಸ್ ಠಾಣೆ ಇದ್ದರೂ ದಿ,22/12/2024ರಂದು ರವಿವಾರ ಕಿಡಿಗೇಡಿಗಳು ಶಾಲೆಯ ಕೊಠಡಿ ಬಾಗಿಲು ಮತ್ತು ಉರ್ದು ಶಾಲಾ ಕೊಠಡಿಯ ಗಾಜು ಒಡೆದಿದ್ದಾರೆ, ಶಿಕ್ಷಣದ ಮಹತ್ವ ತಿಳಿಯದೆ ಇರುವಂತಹ ಅವಿದ್ಯಾವಂತ ಕಿಡಿಗೇಡಿಗಳು ಇಂತಹ ಕೃತ್ಯಗಳನ್ನು ಮಾಡಲು ಸಾಧ್ಯ, ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳುವ ಮೂಲಕ ಮುಂದೆ ಇಂತಹ ಘಟನೆಗಳು ನಡೆಯದಂತೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್ ಹಾಗೂ ಪಾಸ್ಟರ್ ಅಸೋಸಿಯೇಷನ್ ಅಧ್ಯಕ್ಷ ಫಾದರ್ ಚನ್ನಬಸಪ್ಪ ಅಪ್ಪಣ್ಣವರ್ ಆಗ್ರಹಿಸಿದ್ದಾರೆ.

## 3ನೇ ರಾಜ್ಯಮಟ್ಟದ ರಸಪ್ರಶ್ನೆ ಸ್ಪರ್ಧೆ ಯ ಜಾತ್ರಾ ಮಹೋತ್ಸವ ಅಂಗವಾಗಿ ಜನವರಿ 5 ರಂದು:ದುರುಗಪ್ಪ ನಾಯಕ



ಮಲ್ಲಮ್ಮ ನುಡಿ ವಾರ್ತೆ

ಕಳೆದ ಹಲವು ವರ್ಷಗಳಿಂದ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುತ್ತಿರುವ ಸಹಾಯಕ ಪ್ರಾಧ್ಯಾಪಕರಾದ ಡಾ. ಮಾರುತಿ ಕುಮಾರ ಮಲದಕಲ್ ರವರ ನಾಯಕತ್ವದ ಮಲದಕಲ್ ಗೆಳೆಯರ ಬಳಗವು ನಮ್ಮ ಭಾಗದ ಯುವಜನಾಂಗದಲ್ಲಿ ಅದರಲ್ಲಿಯೂ ವಿಶೇಷವಾಗಿ ಗ್ರಾಮೀಣ ಭಾಗದ ಯುವಕ ಯುವತಿಯರಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ತಯಾರು ಕುರಿತಾಗಿ ಜಾಗೃತಿ ಮೂಡಿಸುವ ಸಂಬಂಧ ಹಾಗೂ ಸ್ಪರ್ಧಾತ್ಮಕ ಮನೋಭಾವನೆಯನ್ನು ಹೆಚ್ಚಿಸುವ ದೃಷ್ಟಿಯಿಂದ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಮಲದಕಲ್ ಗ್ರಾಮದ ಆರಾಧ್ಯ ದೈವ ಶ್ರೀ ಹುಡೇದ ಆಂಜನೇಯ ಸ್ವಾಮಿ ದೇವಸ್ಥಾನದ ಜಾತ್ರಾ ಮಹೋತ್ಸವದ ನಿಮಿತ್ಯ 05 ಜನವರಿ-2025 ರವಿವಾರದಂದು ರಾಯಚೂರ ನಗರದಲ್ಲಿನ ಟ್ಯಾಗೋರ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ಸತತ ಮೂರನೇ ಬಾರಿಗೆ ರಾಜ್ಯಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಮಲದಕಲ್ ಗೆಳೆಯರ ಬಳಗವು ಜ್ಞಾನಕ್ಷ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರ ದೇವದುರ್ಗ ಸಹಯೋಗದಲ್ಲಿ ಹಮ್ಮಿಕೊಂಡಿದೆ. ಈಗಾಗಲೇ ರಾಜ್ಯದ ವಿವಿಧ ಜಿಲ್ಲೆಗಳಿಂದ ಸರಿಸುಮಾರು 100ಕ್ಕೂ ಹೆಚ್ಚಿನ ತಂಡಗಳು ಸ್ಪರ್ಧೆಯಲ್ಲಿ ಭಾಗವಹಿಸಲು ತಮ್ಮ ಹೆಸರುಗಳನ್ನು ನೊಂದಾಯಿಸಿಕೊಂಡಿವೆ

ಈ ಸ್ಪರ್ಧೆಯನ್ನು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಶ್ರೀಯುತ ಜಿ.ಕುಮಾರ್ ನಾಯಕ್ ರವರು ಉದ್ಘಾಟನೆ ಮಾಡಿ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಕುರಿತು ಉಪನ್ಯಾಸ ನೀಡಲಿದ್ದಾರೆ. ಈ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಶ್ರೀ ಗುರುಬಸವ ರಾಜಗುರುಗಳು ಶ್ರೀ ನಿಜಾನಂದ ಯೋಗಾಶ್ರಮ ಮಲದಕಲ್ ರವರು ವಹಿಸಲಿದ್ದು, ಈ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಈ ಸ್ಪರ್ಧೆಯಲ್ಲಿ ಎರಡು ಹಂತಗಳಿದ್ದು ಮೊದಲನೆಯದಾಗಿ ಬಹುಆಯ್ಕೆ ವಸ್ತುನಿಷ್ಠ 100 ಪ್ರಶ್ನೆಗಳಿಗೆ ಉತ್ತರಿಸಿ ಬೇಕಾಗುತ್ತದೆ. ನಂತರ ಆ ಪತ್ರಿಕೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಮೊದಲ 5 ತಂಡಗಳಿಗೆ ಮೌಖಿಕ ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಲಾಗುತ್ತದೆ. ಅಲ್ಲಿ ವಿಜೇತರಾದ ಮೊದಲ ತಂಡಕ್ಕೆ ಬಹುಮಾನದ ರೂಪದಲ್ಲಿ 25000/-ನಗದು ಮತ್ತು ಪುಸ್ತಕಗಳನ್ನು ವಿತರಿಸಲಾಗುತ್ತದೆ. ತದನಂತರ ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ತಂಡಗಳಿಗೆ ಕ್ರಮವಾಗಿ 15000/- ಹಾಗೂ 10000/-ಸಾವಿರ ನಗದೊಂದಿಗೆ ಪುಸ್ತಕವನ್ನು ವಿತರಿಸಲಾಗುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರತಿ ತಂಡ 200/- ರೂಪಾಯಿಗಳ ನೊಂದಣಿ ಶುಲ್ಕವನ್ನು ಪಾವತಿಸಿ 9980874770, 8861148523, 7090335942, 9731468883 ದೂರವಾಣಿ ಸಂಖ್ಯೆಗಳಿಗೆ ಕರೆಮಾಡಿ ಹೆಸರುಗಳನ್ನು ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ನೊಂದಣಿಗೆ ಕೊನೆ ದಿನಾಂಕ 03 ಜನವರಿ ಆಗಿರುತ್ತದೆ.

3ನೇ ರಾಜ್ಯಮಟ್ಟದ ರಸಪ್ರಶ್ನೆ ಸ್ಪರ್ಧೆಯ ಯಶಸ್ಸಿಗೆ ತಾವುಗಳು ಸಹ ಕೈಜೋಡಿಸಬೇಕೆಂದು ಮತ್ತು ಈ ಸ್ಪರ್ಧೆಯ ಬಗ್ಗೆ, ಯುವ ಜನಾಂಗದವರಿಗೆ ಮಾಹಿತಿ ನೀಡಲು ಅನುಕೂಲವಾಗುವಂತೆ ಎಂದು ಪತ್ರಿಕಾ ಗೋಷ್ಠಿಯಲ್ಲಿ ದುರುಗಪ್ಪ ನಾಯಕ ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಅಮರೇಶ ವೆಂಕಟಾಪುರ, ಭೀಮಣ್ಣ ಭಂಡಾರಿ, ಜೀವ ನಾಯಕ , ರಮೇಶ್ ಹಿರೇಮಠ, ಸೇರಿದಂತೆ ಉಪಸ್ಥಿತರಿದ್ದರು

## ಅಂಗನವಾಡಿ ಕಾರ್ಯಕರ್ತೆ-ಸಹಾಯಕಿಯರ ನೇಮಕಾತಿ : ಅಪೂರ್ಣ ಅರ್ಜಿ ಸಲ್ಲಿಸಿದವರು ಜನವರಿ 5 ರೊಳಗೆ ಪೂರ್ಣ ಅರ್ಜಿ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಡಿಸೆಂಬರ್ 24, (ಕ.ವಾ) : ಯಾದಗಿರಿ ಜಿಲ್ಲೆಯ ಶಹಾಪೂರ ಮತ್ತು ವಡಗೇರಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿನ ಖಾಲಿ ಇರುವ 48 ಅಂಗನವಾಡಿ ಕಾರ್ಯಕರ್ತೆ ಹಾಗೂ 76 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಕಳೆದ ಆಗಸ್ಟ್ 13 ರಂದು ಅಧಿಸೂಚನೆ ಹೊರಡಿಸಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ತಾಂತ್ರಿಕ ಸಮಸ್ಯೆ ಕಾರಣ ಅರ್ಜಿಯ ನಾಲ್ಕು ಹಂತ ಪೂರ್ಣಗೊಳಿಸದ ಅಭ್ಯರ್ಥಿಗಳಿಗೆ ಮಾತ್ರ ಸರ್ಕಾರದ ನಿರ್ದೇಶನದಂತೆ ಪೂರ್ಣವಾಗಿ ಅರ್ಜಿ ಸಲ್ಲಿಸಲು ಇದೀಗ ಅವಕಾಶ ನೀಡಲಾಗಿದೆ ಎಂದು ಸಿ.ಡಿ.ಪಿ.ಓ ಮಲ್ಲಣ್ಣ ದೇಸಾಯಿ ತಿಳಿಸಿದ್ದಾರೆ.

ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ಭರ್ತಿ, ಭಾವಚಿತ್ರ ಮತ್ತು ಸಹಿ, ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು ಹಾಗೂ ಕೊನೆಯದಾಗಿ ಆಧಾರ ಸಂಖ್ಯೆ ನಮೂದಿಸಿ ಇ-ಹಸ್ತಾಕ್ಷರದೊಂದಿಗೆ ಹೀಗೆ 4 ಹಂತದಲ್ಲಿ ಅರ್ಜಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ. ಅಂಗನವಾಡಿ ಕಾರ್ಯಕತೆ-ಯರ ಹುದ್ದೆಗೆ 437 ಹಾಗೂ ಸಹಾಯಕಿಯರ ಹುದ್ದೆಗೆ 205 ಅಪೂರ್ಣ ಅರ್ಜಿಗಳು ತಾಲೂಕಿನಲ್ಲಿ ಸ್ವೀಕೃತವಾಗಿದ್ದು, ಇಂತಹ ಅಭ್ಯರ್ಥಿಗಳು ಇದೇ ಡಿ.26 ರಿಂದ 2025ರ ಜನವರಿ 5ರ ಸಂಜೆ 5.30 ಗಂಟೆ ಒಳಗೆ ವೆಬ್‌ಸೈಟ್ https://karnemakaone.kar.nic.in/abcd/ ಪೂರ್ಣ ಅರ್ಜಿ ಸಲ್ಲಿಸಬೇಕು.

ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರ ನೇಮಕಾತಿಗೆ ಸಂಬಂಧಿಸಿದಂತೆ ಸೆಪ್ಟೆಂಬರ್ 13ಕ್ಕೆ ಕೊನೆಗೊಂಡ ಅರ್ಜಿ ಸಲ್ಲಿಸುವ ಕಾಲಾವಧಿ ಒಳಗೆ ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ಹಂತಗಳ ಪೈಕಿ ಕೆಲವರಿಗೆ ಮೊದಲನೇ ಹಂತದಲ್ಲಿಯೇ "ಅಪ್ಲಿಕೇಶನ್ ಸಕ್ಸಸ್‌ಫುಲ್ ಅಪ್ಲೋಡೆಡ್" ಎಂಬ ಸಂದೇಶ ಮೊಬೈಲ್‌ಗೆ ಸ್ವೀಕೃತವಾಗಿರುವುದರಿಂದ ಈ ಅರ್ಜಿಗಳು ಪೂರ್ಣವಾಗಿ ಸಲ್ಲಿಕೆಯಾಗಿಲ್ಲ. ಹೆಚ್ಚಿನ ಮಾಹಿತಿಗಾಗಿ ಶಹಾಪೂರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಮತ್ತು ದೂ.ಸಂ. 8197630873 ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರನ್ನು ಮುಂದಿನ ಪೀಳಿಗೆಗೆ ಉಳಿಸಿಡುವುದು ನಮ್ಮ ಕರ್ತವ್ಯ: ಡಾ ದೇವರಾಜರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಡಿ.23:ಜಲ ಸಂರಕ್ಷಣೆಗಾಗಿ ಕೆರೆ ನಿರ್ಮಾಣ, ಈಗಾಗಲೇ ಇರುವ ಕೆರೆಗಳ ಹೂಳೆತ್ತುವುದು, ಚೆಕ್ ಡ್ಯಾಂ ಹಾಗೂ ಕೃಷಿ ಹೊಂಡಗಳ ನಿರ್ಮಾಣ ಹಾಗೂ ನಿರ್ವಹಣೆ ಸೇರಿದಂತೆ ಜಲ ಮರುಪೂರಣಕ್ಕೆ ಸಂಬಂಧಿಸಿದ ಕ್ರಮಗಳನ್ನು ಆದ್ಯತೆ ಮೇಲೆ ಕೈಗೊಳ್ಳಬೇಕು ಇದರಲ್ಲಿ ಸಾರ್ವಜನಿಕರೂ ಸ್ವಯಂ ಪ್ರೇರಿತರಾಗಿ ಜಲಸಂರಕ್ಷಣೆ ಹಾಗೂ ಮರುಪೂರಣ ಕಾರ್ಯಕ್ರಮಕ್ಕೆ ಸಹಕರಿಸಬೇಕು ಎಂದು ಚಿತ್ರದುರ್ಗದ ಜಲತಜ್ಞ ಡಾ. ದೇವರಾಜರೆಡ್ಡಿ ಅಭಿಪ್ರಾಯಪಟ್ಟರು.

ಆಳಂದ ತಾಲೂಕಿನ ತಡಕಲ ಗ್ರಾಮದ ಜೀವನಜ್ಯೋತಿ ಶಿಕ್ಷಣ ಮತ್ತು ಕಲ್ಯಾಣ ಸಂಸ್ಥೆಯ ಆವರಣದಲ್ಲಿ ಸೋಮವಾರ ಜರುಗಿದ ದಿ. ರುಕ್ಮಯ್ಯ ಗುತೆ-ೇದಾರರ 12ನೇ ಪುಣ್ಯಸ್ಮರಣೆ, ರೈತ ದಿನಾಚಾರಣೆ ಹಾಗೂ ಧರ್ಮಸಭೆ ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಪಾಲ್ಗೊಂಡು ಉಪನ್ಯಾಸ ನೀಡಿದರು.

ರೈತರುಗಳ ಖಾಸಗಿ ಜಮೀನು, ಸಮುದಾಯ ಅಥವಾ ಸರ್ಕಾರಿ ಗೋಮಾಳಗಳಲ್ಲಿ 1 ರಿಂದ 2 ಅಡಿ ಅಂತರದಲ್ಲಿ 1*1 ಅಗಲ ಮತ್ತು 4 ಅಡಿ ಆಳದ ಗುಂಡಿಗಳನ್ನು ತೋಡುವ ಮೂಲಕ ಮಳೆ ನೀರು ಇಲ್ಲಿ ಸಂಗ್ರಹವಾಗುವಂತೆ ಮಾಡಬೇಕು ಹೀಗೆ ಗುಂಡಿಗಳಲ್ಲಿ ಸಂಗ್ರಹವಾದ ನೀರನ್ನು ರೈತರು ತಮ್ಮ ಬೆಳೆಗಳಿಗೆ ಬಳಸಿಕೊಳ್ಳುವ ಜೊತೆಗೆ ನೀರು ನಿರಂತರವಾಗಿ ಅಲ್ಲಿಯೇ ನಿಂತಿರುವುದರಿಂದ ಇಂಗಿದ ನೀರು ಅಂತರ್ಜಲ ಸೇರುವ ಮೂಲಕ ಅಂತರ್ಜಲ ಹೆಚ್ಚಳಕ್ಕೂ ಸಹಕಾರಿಯಾಗಿದೆ ಎಂದರು.

ಮನೆಗಳ ಸುತ್ತಲಿನ 1 ಅಥವಾ 2 ಕಿ.ಮೀ ವ್ಯಾಪ್ತಿಯಲ್ಲಿ ಬೀಳುವ ಮಳೆ ನೀರಿನ ಹರಿವು ಈ ನಾಲಾ ಬದುವಿಗೆ ಬಂದು ಸೇರುವಂತೆ ವ್ಯವಸ್ಥೆ ಮಾಡಬೇಕು. ಲಭ್ಯವಿರುವ ರೈತರ ಭೂಮಿ ಅಥವಾ ಸರ್ಕಾರಿ ಜಾಗಗಳಲ್ಲಿ ಬೃಹತ್ತಾದ ಕಟ್ಟೆಯಂತಹ ಬದುವೊಂದನ್ನು ನಿರ್ಮಿಸಿ ಅತಿ ಹೆಚ್ಚು ನೀರು ಸಂಗ್ರಹವಾಗುವಂತೆ ಮಾಡಬೇಕು ಇಲ್ಲಿ ಸಂಗ್ರಹವಾದ ನೀರನ್ನು ಸುಮಾರು 15 ರಿಂದ 20 ರೈತರು ತಮ್ಮ ತೋಟಗಳಿಗೆ/ಬೆಳೆಗಳಿಗೆ ಬಳಸಿಕೊಳ್ಳಬಹುದಾಗಿದ್ದು, ಜಾನುವಾರುಗಳು ಸಹ ಈ ನೀರನ್ನು ಕುಡಿಯಬಹುದಾಗಿರುತ್ತದೆ. ಇದೊಂದು ಬೃಹತ್ ಕಟ್ಟೆಯ ರೀತಿಯಲ್ಲಿರುವುದರಿಂದ ಇದರಲ್ಲಿ ಸಂಗ್ರಹವಾದ ನೀರು ಹಲವು ದಿನಗಳ ವರೆಗೆ ಶೇಖರಣೆಯಾಗಿ ಕ್ರಮೇಣ ಇಂಗಿ ಅಂತರ್ಜಲ ಸೇರಿಕೊಳ್ಳುವುದರಿಂದ ಸುತ್ತಮುತ್ತಲಿನ ಅಂತರ್ಜಲ ಪ್ರಮಾಣ ಹೆಚ್ಚಳಕ್ಕೆ ಸಹಕಾರಿಯಾಗಿದೆ ತಿಳಿಸಿದರು.

ಮಾಜಿ ಶಾಸಕ ಸುಭಾಷ ಗುತ್ತೇದಾರ ಮಾತನಾಡಿ, ಹಿಂದಿನಿಂದಲೂ ಗ್ರಾಮಗಳನ್ನು ಸುಭೀಕ್ಷವಾಗಿಡಲು ಪಾರಂಪರಿಕವಾಗಿ ನಿರ್ಮಾಣ ಮಾಡಿರುವ ಕೆರೆಗಳು ಮಾನವನ ದುರಾಸೆಯಿಂದ ಅಳಿವಿನಂಚಿಗೆ ತಲುಪಿವೆ. ಅತಿಯಾದ ಒತ್ತುವರಿಯಿಂದಾಗಿ ಎಕರೆಗಳಷ್ಟಿದ್ದ ಕರೆಗಳು ಗುಂಟೆಗಳಲ್ಲಿವೆ. ಇದ-ರಿಂದಾಗಿ ನೀರಿನ ಶೇಖರಣೆಯ ಪ್ರಮಾಣ ಕುಗ್ಗಿ ಹೋಗಿದ್ದು, ಇಂತಹ ಕೆರೆಗಳ ಪುನಶ್ಚೇತನಕ್ಕೂ ಕ್ರಮ ವಹಿಸಬೇಕು. ಒತ್ತುವರಿ ತೆರವು ಮತ್ತು ಹೂಳನ್ನು ತೆಗೆಯುವ ಮೂಲಕ ನೀರಿನ ಒಳಹರಿವಿಗೆ ಆದ್ಯತೆ ನೀಡಬೇಕು ಇದರ ಜೊತೆಗೆ ಕೆರೆಗಳಿಗೆ ನೀರು ತುಂಬಿಸುವುದರ ಮೂಲಕ ಬತ್ತಿಹೋಗಿದ್ದ ಸುತ್ತಮುತ್ತಲಿನ ಬೋರವೇಲ್‌ಗಳಿಗೆ ಅಂತರ್ಜಲ ಮರುಪೂರಣ ಮಾಡುವ ಮೂಲಕ ಮರುಜೀವ ನೀಡಬೇಕು ಇದರ ಜೊತೆಗೆ ಬಿಸಿಲ ಬೇಗೆಯಲ್ಲಿ ಜಾನುವಾರುಗಳ ದಾಹ ಇಂಗಿಸಲು ಕೆರೆಗಳು ಪೂರಕವಾಗುವಂತೆ ಮಾಡಬೇಕು ಎಂದು ನುಡಿದರು..

ಕೃಷಿಹೊಂಡಗಳನ್ನು ಸಾಮಾನ್ಯವಾಗಿ ರೈತರ ಜಮೀನಿನಲ್ಲಿ 3000-4000 ಲೀ ಸಾಮರ್ಥ್ಯವನ್ನು ಹೊಂದುವ ರೀತಿಯಲ್ಲಿ ಜಾಗದ ಲಭ್ಯತೆಗನುಗುಣವಾಗಿ ನಿರ್ಮಾಣ ಮಾಡಬೇಕು ಇದ-ರಿಂದಾಗಿ ರೈತರು ತಾವು ಬೆಳೆದ ಬೆಳೆಗಳಿಗೆ ಸಕಾಲದಲ್ಲಿ ನೀರು ಹರಿಸುವುದರಿಂದ ಬೆಳೆಗಳನ್ನು ಕಾಪಾಡಿಕೊಳ್ಳಬಹುದಾಗಿದೆ ಹಾಗೂ ಅಂತರ್ಜಲ ಮಟ್ಟ ಹೆಚ್ಚಳಕ್ಕೆ ಇದು ಸಹಕಾರಿಯಾಗಿದ್ದು ಮಳೆಗಾಲದಲ್ಲಿ ಈ ಪ್ರದೇಶದಲ್ಲಿ ಬೀಳುವ ಮಳೆ ನೀರನ್ನು ಹಿಡಿದಿಡಲು ಸಹಕಾರಿಯಾಗಿದೆ ಎಂದು ಹೇಳಿದರು.

ಮಾದನಹಿಪ್ಪರ್ಗಾದ ಅಭಿನವ ಶಿವಲಿಂಗ ಸ್ವಾಮಿಗಳು ಮಾತನಾಡಿ, ಜಲ ಸಂರಕ್ಷಣೆ ಕೇವಲ ಸರ್ಕಾರಗಳ ಜವಾಬ್ದಾರಿಯಾಗಿರದೆ ಪ್ರತಿಯೊಬ್ಬ ಮಾನವನ ಕರ್ತವ್ಯವೂ ಆಗಿದೆ. ಮುಂದಿನ ಪೀಳಿಗೆಗೆ ನೀರನ್ನು ಉಳಿಸಿ ಮತ್ತು ಅಂತರ್ಜಲ ಹೆಚ್ಚಿಸುವ ಕೆಲಸಕ್ಕೆ ಪ್ರತಿಯೊಬ್ಬ ನಾಗರಿಕನೂ ಇಂದೇ ಕೈಜೋಡಿಸಲಿ. ನೀರನ್ನು ಮಿತವಾಗಿ ಬಳಸಿ ಜಲ ಸಾಕ್ಷರರಾಗುವ ಮೂಲಕ ಇದನ್ನು ಸಾಕಾರಗೊಳಿಸಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ನಂದಗಾಂವದ ರಾಜಶೇಖರ ಮಹಾಸ್ವಾಮೀಜಿ ಆಶೀರ್ವಚನ ನೀಡಿದರು. ಕಡಗಂಚಿಯ ವೀರಭದ್ರ ಶಿವಾಚಾರ್ಯರು, ಮುತ್ಯಾನ ಬಬಲಾದನ ಗುರುಪಾದಲಿಂಗ ಮಹಾಸ್ವಾಮಿ, ಮಾಡಿಯಾಳದ ಒಪ್ಪತ್ತೇಶ್ವರ ಸ್ವಾಮೀಜಿ, ಮಾದನಹಿಪ್ಪರ್ಗಾದ ಅಭಿನವ ಶಿವಲಿಂಗ ಸ್ವಾಮೀಜಿ, ಶಾಂತವೀರ ಶಿವಾಚಾರ್ಯರು, ಚಿಣಮಗೇರಿಯ ವೀರಮಹಾಂತ ಶಿವಾಚಾರ್ಯರು, ಯಳಸಂಗಿಯ ಪರಮಾನಂದ ಸ್ವಾಮಿ, ಕೇಸರ ಜವಳಗಾದ ವೀರಂತೇಶ್ವರ ಶಿವಾಚಾರ್ಯರು, ಕಿಣ್ಣಿಸುಲ್ತಾನದ ಶಿವಶಾಂತಲಿಂಗ ಶಿವಾಚಾರ್ಯರು, ಆಳಂದನ ಸಿದ್ದೇಶ್ವರ ಶಿವಾಚಾರ್ಯರು, ಚೆನ್ನಬಸವ ಪಟ್ಟದೇವರು, ನಿಂಬರ್ಗಾದ ಶಿವಲಿಂಗ ದೇವರು, ತಡಕಲನ ಸಿದ್ಧಮಲ್ಲ ಶಿವಾಚಾರ್ಯರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ತಾಲೂಕಿನ 5 ಜನ ಪ್ರಗತಿಪರ ರೈತರನ್ನು ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಶಿವರಾಜ ಪಾಟೀಲ ರದ್ದೇವಾಡಗಿ, ವಿಧಾನ ಪರಿಷತ ಮಾಜಿ ಸದಸ್ಯ ಅಮರನಾಥ ಪಾಟೀಲ, ಹರ್ಷಾ ಗುತ್ತೇದಾರ, ಸಂತೋಷ ಗುತ್ತೇದಾರ, ಹಿರಿಯ ಮುಖಂಡರಾದ ವೀರಣ್ಣಾ ಮಂಗಾಣೆ, ಆನಂದರಾವ ಗಾಯಕವಾಡ, ಮಾಣಿಕ ಜಾಧವ, ಮಲ್ಲಿಕಾರ್ಜುನ ತಡಕಲ ಸೇರಿದಂತೆ ಸುಭಾಷ ಗುತ್ತೇದಾರರ ಸಾವಿರಾರು ಅಭಿಮಾನಿಗಳು ಹಾಗೂ ಗುತ್ತೇದಾರ ಪರಿವಾರದವರು ಭಾಗವಹಿಸಿದ್ದರು.

ಹಿರಿಯ ಸಾಹಿತಿ ಅಪ್ಪಾಸಾಹೇಬ ಗುಂಡೆ ಕಾರ್ಯಕ್ರಮ ನಿರ್ವಹಿಸಿದರು.

# ಬಡ ಮಕ್ಕಳ ಸೇವೆ ದೇವರ ಪೂಜೆಗೆ ಸಮ: ಬೆಲ್ದಾಳ ಶರಣರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 24 :- ಬಡ ಮಕ್ಕಳ ಸೇವೆ ಮಾಡುವುದು ಅದು ನಿಜವಾದ ದೇವರಿಗೆ ಮಾಡುವ ಸೇವೆಗೆ ಸಮವಾಗಿದೆ ಎಂದು ಕೌಠಾ ಯೋಗಾಶ್ರಮದ ಪೂಜ್ಯ ಸಿದ್ಧರಾಮ ಶರಣರು ಬೆಲ್ದಾಳ ತಿಳಿಸಿದರು.

ಸೋಮವಾರ ಕೇಂದ್ರ ಬಸ್ ನಿಲ್ದಾಣ ಎದುರು ಇರುವ ವಿಜಯರಾಜ ಮೀಷನ್ ಟ್ರಸ್ಟ್ ವತಿಯಿಂದ ಕೊಡಮಾಡಿದ ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಇಲ್ಲಿಯ ಬಡ ಮಕ್ಕಳಿಗೆ ಬಟ್ಟೆ ಹಾಗೂ ಸಿಹಿ ಪೊಟ್ಟಣ ವಿತರಿಸಿ ಮಾತನಾಡಿರುವ ಅವರು, ಇಂದು ಧರ್ಮ, ಧರ್ಮಗಳ ಮಧ್ಯ, ಜಾತಿ ಜಾತಿ ಒಳಗೆ ದ್ವೇಷ, ಅಸುಯೆ,ಅಹಂಕಾರ ವ್ಯಾಪಕವಾಗಿ ತಾಂಡವವಾಡುತ್ತಿದೆ. ತನಗಾಗಿ ಹಾಗೂ ತನ್ನ ಪರಿವಾರಕ್ಕಾಗಿ ಹಣ ಕೂಡಿಡುವ ಇಂತಹ ಕಾಲ ಘಟ್ಟದಲ್ಲಿ ತನ್ನೆಲ್ಲ ಆಸ್ತಿ ಮಾರಿ ಜಿಲ್ಲೆಯ ಬಡ ಮಕ್ಕಳಿಗೆ ಖರ್ಚು ಮಾಡುವ ವಿಜಯರಾಜ ಮಿಷನ್ ಟ್ರಸ್ಟ್ ನಿರ್ದೇಶಕ ಧನರಾಜ ಅವರ ಕಾರ್ಯ ಇಡೀ ಮನುಕುಲಕ್ಕೆ ಮಾದರಿಯಾಗಿದೆ ಎಂದು ಬಣ್ಣಿಸಿದರು. ಇಂದು ಉಳ್ಳುವರು ಇಲ್ಲದವರ ಕೈ ಹಿಡಿಬೇಕು ಆದರೆ ಇಲ್ಲದವರಿಂದಲೇ ಉಳ್ಳುವವರು ಅದಷ್ಟು ಕಸಿದುಕೊಂಡು ರಾಕ್ಷಸರಂತೆ ವರ್ತಿಸುವುದು ದೊಡ್ಡ ದುರಂತ. ಸಮಜದ ತುಳಿತಕ್ಕೊಳಗಾದವರಿಗೆ ಸಹಾಯ ಮಾಡುವುದು ಹಾಗೂ ಸಾಹಾನುಭೂತಿ ತೋರುವುದು ನಿಜವಾದ ಸಾಕ್ಷಾತ್ಕಾರ. ಹಾಗಾಗಿ ಇದ್ದವರ ಬಗ್ಗೆ ಕಾರ್ಯಕ್ರಮ ಮಾಡದೇ ಇಲ್ಲದವರ ಬಾಳಿಗೆ ಧ್ವನಿಯಾಗಿ ಇಂಥವರ ಕಷ್ಟ ಸುಖಗಳಿಗೆ ವಿಜಯರಾಜ ಮಿಷನ್ ಟ್ರಸ್ಟ್ ಸಕಾರಾತ್ಮಕವಾಗಿ ಸ್ಪಂದಿಸುವುದು ಉತ್ತಮ ಬೆಳವಣಿಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹೈದ್ರಾಬಾದ್‌ನ ಝಾನ್‌ರಾಜು ಇಂಟರ್‌ನ್ಯಾಶ್ನಲ್ ಬೈಬಲ್ ಕಾಲೇಜಿನ ಸಂಸ್ಥಾಪಕ ಅಧ್ಯಕ್ಷರಾದ ಎನ್.ಎಮ್ ಪಾಲ್ ಮುಖ್ಯ ಭಾಷಣಕಾರರಾಗಿ ಪ್ರಾರ್ಥನೆ ಮಾಡಿ, ಪ್ರವಚನ ನೀಡುತ್ತ, ತನ್ನ ಬಳಿ ಇದ್ದುದನ್ನಿ ಇತರರೊಂದಿಗೆ ಹಂಚಿಕೊಂಡು ಬದುಕುವುದೇ ನಿಜವಾದ ಧರ್ಮ. ಪರಸ್ಪರ ಸಹಕಾರ ಹಾಗೂ ಸಹೋದರತ್ವ ತೋರುವುದು ಎಲ್ಲ ಧರ್ಮಗಳ ಸಾರವಾಗಿದೆ. ತನಗೆ ಬೇಕಾದುದನ್ನು ಇಟ್ಟುಕೊಂಡು ಉಳಿದನ್ನು ಇತರರಿಗೆ ಹಂಚುವುದೇ ಸ್ವಾಮಿ ಯಸುವಿನ ಮುಖ್ಯ ಧ್ಯೆಯ. ಹಾಗಾಗಿ ಬೈಬಲ್ ಹೇಳುವಂತೆ ಸಂಕಷ್ಟದಲ್ಲಿದ್ದವರಿಗೆ ಸಹಾಯ ಮಾಡಿ, ಅದರಲ್ಲಿಯೇ ತನ್ನ ಸಂತೋಷ ಕಂಡುಕೊಳ್ಳುವುದು ಮನುಷ್ಯನಾದವನ ನಿಜವಾದ ಧರ್ಮ. ಆದ್ದರಿಂದ ಧನರಾಜ ಅವರ ನೇತೃತ್ವದ ವಿಜಯರಾಜ ಮೀಷನ್ ಟ್ರಸ್ಟ್ ಇಂತಹ ಪರೋಪಕಾರ ಹಾಗೂ ಪರಮಧರ್ಮ ಕಾರ್ಯದಲ್ಲಿ ತೊಡಗಿತರುವುದು ಅತ್ಯಂತ ಸರಾಹನಿಯ ಕಾರ್ಯ ಎಂದು ಕೊಂಡಾಡಿದರು.

ಸಿಟಿ ಜಮಾಯತೆ ಉಲ್ಮ ಹಿಂದ್‌ನ ಅಧ್ಯಕ್ಷ ಎಂ.ಡಿ ಅಯುಬ್ ಸಲೀಮ್ ಹುಸೇನಿ ಮಾತನಾಡಿ, ಪರಸ್ಪರ ಪ್ರೀತಿ, ವಿಶ್ವಾಸ, ಸಹೋದರತ್ವವನ್ನು ಎಲ್ಲ ಧರ್ಮಗಳು ಸಾರುತ್ತವೆ. ತನ್ನಲ್ಲಿರುವುದು ಇಲ್ಲದವರಿಗೆ ಕೊಟ್ಟು ಸಂತೋಷ ಪಡುವ ಕಾರ್ಯ ಪ್ರತಿಯೊಬ್ಬರು ಮಾಡಬೇಕಿದ್ದು, ಧನರಾಜ ಅವರು ಈ ಐತಿಹಾಸಿಕ ಕಾರ್ಯ ಮಾಡುತ್ತ ಬರುತ್ತಿರುವುದು ಎಲ್ಲ ಧರ್ಮಿಯರಿಗೆ ಮಾದರಿ ಎಂದರು.

ಉದ್ಯಮಿ ಬಸವರಾಜ ಧನ್ನೂರ್ ಮಾತನಾಡಿ, ಇಂದು ದೇಶದಲ್ಲಿ ಬಹಳಷ್ಟು ಜನ ಶ್ರೀಮಂತರಿದ್ದಾರೆ. ಆದರೆ ಮನಸ್ಸು ಮಾತ್ರ ತುಂಬ ಸಂಕುಚಿತ. ಧನರಾಜ ಅವರು ಅಪಘಾತಕ್ಕೊಳಗಶಾಗಿದ್ದರೂ ಮನುಷ್ಯತ್ವದ ಸತ್ಯ ಅರಿತು ಇಂಥ ಪರೋಪಕಾರ ಕೆಲಸಕ್ಕೆ ಕೈ ಹಾಕಿ ಸತ್ಯ ಬಲ್ಲದೇ ಇರುವ ಅದೆಷ್ಟೊ ಶ್ರೀಮಂತರ ಕಣ್ಣು ತೆರೆಸುವ ಕಾರ್ಯ ಮಾಡಿರುವುದು ನಿಜಕ್ಕೂ ಪ್ರಶಂಸನಾರ್ಹ ಸಂಗತಿ ಎಂದರು.

ಅಧ್ಯಕ್ಷತೆ ವಹಿಸಿದ ಧನರಾಜ ಬಂಡೆಪ್ಪ ಮಾತನಾಡಿ, ತನಗೆ ಅಪಘಾತವಾಗಿ ನಂತರ ಚೇತರಿಸಿಕೊಂಡು ಗುಣಮುಖನಾಗಿ ನನ್ನ ಆಸ್ತಿ ಮಾರಿ ಸಮಾಜ ಕಾರ್ಯಕ್ಕೆ ಮುಂದಾದಾಗ ಎಲ್ಲರು ನನ್ನನ್ನು ಹುಚ್ಚ ಎಂದು ಜರಿದರು. ಅದನ್ನು ಲೆಕ್ಕಿಸದೇ ಇಂದು ಈ ಬಡ ಮಕ್ಕಳ ಸೇವೆ ವರ್ಷದಲ್ಲಿ ಎರಡು ಬಾರಿ ಮಾಡುವ ಸೌಭಾಗ್ಯ ನನಗೆ ಒದಗಿ ಬಂದಿರುವುದು ನನ್ನ ಪಾಲಿನ ಪುಣ್ಯ ಎಂದು ಭಾವಿಸುವುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ನಿರಗುಡಿ ಹವಾ ಮಲ್ಲಿನಾಥ ಮಹಾರಾಜರು ಬಡ ಮಕ್ಕಳಿಗೆ ಕ್ರಿಸಮಸ್ ಹಬ್ಬದ ಬಟ್ಟೆ ಬರಿಗಳು, ಕೇಕ್ ಬಾಕ್ಸಳು ಹಾಗೂ ಸಿಹಿ ಬಾಕ್ಸಳನ್ನು ವಿತರಿಸಿದರು. ಮಕ್ಕಳಿಂದ ಕ್ರಿಸಮಸ್ ಹಬ್ಬಕ್ಕಾಗಿ ಕೇಕ್ ಕತ್ತರಿಸಲಾಯಿತು. ಭಂತೆ ಅಮ್ಮನವರು, ಪತ್ರಕರ್ತ ಶಿವಕುಮಾರ ಸ್ವಾಮಿ, ಪಪ್ಪು ಪಾಟೀಲ ಖಾನಾಪುರ ಹಾಗೂ ಇತರರು ವೇದಿಕೆಯಲ್ಲಿದ್ದರು.

ಆರಂಭದಲ್ಲಿ ವಿಜಯರಾಜ ಮೀಷನ್ ಟ್ರಸ್ಟ್ ಅಧ್ಯಕ್ಷೆ ವಿಜಯಶ್ರೀ ಧನರಾಜ ಸರ್ವರನ್ನು ಸ್ವಾಗತಿಸಿದರು. ಅನುರಾಗ ಬಂಡೆಪ್ಪ ವಂದನೆ ಸಲ್ಲಿಸಿದರು. ಧನರಾಜ ಕಾರ್ಯಕ್ರಮ ನಿರೂಪಿಸಿದರು.

# ಅರ್ಥಪೂರ್ಣವಾಗಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಡಿಸೆಂಬರ್ 24, ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಇದೇ ಜನೆವರಿ 1.ರಂದು ಜಿಲ್ಲಾಡಳಿತದವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪಕೋಟೆಪ್ಪಗೊಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೊಳ ಅವರು, ಅಂದು ಬೆಳಿಗ್ಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜುಗಳಲ್ಲಿ, ಕಚೇರಿಗಳಲ್ಲಿ ಈ ಸಂಸ್ಮರಣಾ ದಿನ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಸಂಸ್ಮರಣಾ ದಿನಾಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು, ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು.

ಈ ಸಭೆಯಲ್ಲಿ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ಬಸವರಾಜ್ ಸೈದಾಪುರ, ಕಾಳಪ್ಪ . ವಿಶ್ವಕರ್ಮ ಪಾರ್ವತಿ. ಬನ್ನಪ್ಪ ವಿಶ್ವಕರ್ಮ. ರಮೇಶ್ ಶ್ರೀಶೈಲ್ ಮೋನೆಯ ದೇವರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜ.16 ರಿಂದ ಮೂರು ದಿನಗಳ ಕಾಲ ಜಿಲ್ಲೆಗೆ ಉಪ ಲೋಕಾಯುಕ್ತರ ಭೇಟಿ

# ಅಗತ್ಯ ಮಾಹಿತಿಯೊಂದಿಗೆ ಹಾಜರಾಗಲು ಅಧಿಕಾರಿಗಳಿಗೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಕರ್ನಾಟಕಉಪ ಲೋಕಾಯುಕ್ತನ್ಯಾಯಮೂರ್ತಿ ಬಿ.ವೀರಪ್ಪ ಅವರು, ಜನವರಿ 16, 17 ಹಾಗೂ 18 ರಂದು 3 ದಿನಗಳ ಕಾಲ ಬಳ್ಳಾರಿ ಜಿಲ್ಲೆಗೆ ಭೇಟಿ ನೀಡಿ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆಸಂಬಂಧಿಸಿದಂತೆ ಬಾಕಿ ಇರುವ ಲೋಕಾಯುಕ್ತ ದೂರುಗಳ ವಿಚಾರಣೆ ಹಾಗೂ ವಿಲೇವಾರಿಕಾರ್ಯಕ್ರಮನಡೆಸಲಿದ್ದು, ಅಗತ್ಯ ಮಾಹಿತಿಯೊಂದಿಗೆ ಉಪ ಲೋಕಾಯುಕ್ತರ ಎಲ್ಲಾ ಕಾರ್ಯಕ್ರಮದಲ್ಲೂ ಹಾಜರಾಗಬೇಕೆಂದುಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರುಅಧಿಕಾರಿಗಳಿಗೆಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಉಪಲೋಕಾಯುಕ್ತರುಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿ ತನಿಖೆಗೆ ಬಾಕಿ ಇರುವ ದೂರು ಪ್ರಕರಣಗಳ ವಿಚಾರಣೆಮತ್ತುಸಭೆನಡೆಸುವರು. ಈವರೆಗೆ ನೋಂದಣಿಯಾದ ದೂರು ಪ್ರಕರಣಗಳು, ಅವುಗಳ ವಿಲೇವಾರಿ ಮಾಹಿತಿಯೊಂದಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು, ಉಪ ಲೋಕಾಯುಕ್ತರ ಕಾರ್ಯಕ್ರಮಗಳಿಗೆ ಅಗತ್ಯ ಮಾಹಿತಿಯೊಂದಿಗೆಹಾಜರಾಗಬೇಕು ಎಂದು ತಿಳಿಸಿದರು.

ಲೋಕಾಯುಕ್ತ ಪ್ರಕರಣ ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಉಳಿಸಿಕೊಂಡಿದ್ದಲ್ಲಿ ಸೂಕ್ತ ಕಾರಣವನ್ನುಉಪಲೋಕಾಯುಕ್ತರ ಗಮನಕ್ಕೆ ತರಬೇಕು ಎಂದರು.

ಬಾಕಿಉಳಿದಿರುವಲೋಕಾಯುಕ್ತ ದೂರು ಅರ್ಜಿಗಳನ್ನು ವೈಯಕ್ತಿಕ ಗಮನಹರಿಸಿ ಶೀಘ್ರ ವಿಲೇವಾರಿಗೆಕ್ರಮ ಕೈಗೊಳ್ಳಬೇಕು. ವಿಲೇವಾರಿ ಮಾಡಲು ಕಾನೂನು ಚೌಕಟ್ಟಿನಲ್ಲಿ ಅವಕಾಶವಿಲ್ಲದಿದ್ದಲ್ಲಿ ದೂರುದಾರರರಿಗೆ ಹಿಂಬರಹ ನೀಡಬೇಕು. ಹಿಂಬರಹ ನೀಡಿರುವ ಬಗ್ಗೆ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ಇಲಾಖಾಧಿಕಾರಿಗಳು ಹೊಂದಿರಬೇಕುಎಂದುನಿರ್ದೇಶನ ನೀಡಿದರು.

ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ವಿದ್ಯಾಧರ ಶಿರಹಟ್ಟಿ ಸಲಹೆ

# ಪ್ರತಿಯೊಬ್ಬರಿಗೂ ಗ್ರಾಹಕರ ರಕ್ಷಣೆ ಕಾಯ್ದೆಯ ಅರಿವು ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಹಣ ನೀಡಿ ಸೇವೆಸ್ವೀಕರಿಸುವಪ್ರತಿಯೊಬ್ಬರೂ ಗ್ರಾಹಕರಾಗಿದ್ದು, ಸೇವೆಯಲ್ಲಿ ಲೋಪವಾದಾಗಗ್ರಾಹಕರರಕ್ಷಣೆ ಕಾಯ್ದೆ–1986ರ ಕುರಿತು ಅರಿವು ಹೊಂದುವುದು ಅಗತ್ಯವಾಗಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಒಂದನೇ ಹೆಚ್ಚುವರಿ ನ್ಯಾಯಧೀಶರಾದ ವಿದ್ಯಾಧರ ಶಿರಹಟ್ಟಿ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಆಹಾರಮತ್ತುನಾಗರಿಕಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತಾ ಇಲಾಖೆ ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅಲ್ಲಿಪುರ ರಸ್ತೆಯ ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಜೀವಿಸುವ ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿ ವ್ಯಾಪಾರ ವಹಿವಾಟಿನಲ್ಲಿ ಭಾಗಿದಾರರಾಗುತ್ತಾರೆ. ವಸ್ತು–ಆಹಾರ ವಿಷಯ ಸೇರಿದಂತೆ ಗ್ರಾಹಕರು ಖರೀದಿಸುವ ಇನ್ನಿತರೆ ಸಾಮಾಗ್ರಿಗಳಲ್ಲಿ ರಾಜಿ ಸಲ್ಲ. ಗಾಳಿ, ಬೆಳಕು, ನೀರು ಶುದ್ಧವಾಗಿರುವಂತೆ ಹೇಗೆ ಬಯಸುತ್ತೇವೋ ಅದೇ ರೀತಿ ಗ್ರಾಹಕರು ಖರೀದಿಸುವ ಪ್ರತಿಯೊಂದು ವಸ್ತುವಿನಲ್ಲಿ ಶುಭ್ರತೆ, ಗುಣಮಟ್ಟ ಅಪೇಕ್ಷೆ ಪಡುವುದು ಗ್ರಾಹಕರ ಕರ್ತವ್ಯವಾಗಿದೆ ಎಂದರು.

ಗ್ರಾಹಕರು ವಸ್ತು–ಸಾಮಾಗ್ರಿ ಖರೀದಿಸುವ ಸಂಧರ್ಭದಲ್ಲಿ ಉತ್ಕೃಷ್ಠ ಹಾಗೂ ಉತ್ತಮ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸೇವಾ ವಲಯ ಮತ್ತು ವಾಣಿಜ್ಯ ವಲಯ ಸೇರಿದಂತೆ ಇತರೆ ವಲಯಗಲ್ಲಿ ಗ್ರಾಹಕರು ನ್ಯೂನತೆ ಎದುರಿಸಿದಲ್ಲಿ ಕಾನೂನಾತ್ಮಕ ರಕ್ಷಣೆಗೆ ಮುಂದಾಗಬೇಕು ಎಂದು ತಿಳಿಸಿದರು.

ಪ್ರಸ್ತುತ ಡಿಜಿಟಲ್ ಮಾಧ್ಯಮದ ಯುಗವಾಗಿದೆ. ಗ್ರಾಹಕರು ತಮ್ಮ ಅಂಗೈಯಲ್ಲಿನ ಮೊಬೈಲ್ ಬಳಕೆಯಿಂದ ಅಗತ್ಯ ವಸ್ತುಗಳ ಖರೀದಿಗೆ ಮುಂದಾಗುತ್ತಾರೆ. ಆನ್‌ಲೈನ್ ವಹಿವಾಟಿನಲ್ಲಿ ಮೋಸ ಹೋಗುವ ಸಂಭವವಿದ್ದು, ಕಾನೂನು ತಿಳುವಳಿಕೆ ಇರಬೇಕು ಎಂದು ವಿದ್ಯಾರ್ಥಿ–ಗ್ರಾಹಕರಿಗೆ ಸಲಹೆ ನೀಡಿದರು.

ವಿವಿಯ ಕುಲಪತಿಗಳಾದ ಪ್ರೊ. ಎಂ.ಮುನಿರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವಿದ್ಯಾವಂತ ಗ್ರಾಹಕರೇ ಹೆಚ್ಚು ವಂಚಿತರಾಗುತ್ತಿದ್ದು, ಅವರು ಎಚ್ಚೆತ್ತುಕೊಳ್ಳಬೇಕಿದೆ. ಅವಿದ್ಯಾವಂತರಿಗೆ ಮತ್ತು ತಮ್ಮ ನೆರೆ–ಹೊರೆಯರಿಗೆ ಗ್ರಾಹಕರ ರಕ್ಷಣೆಯ ಕಾನೂನು–ಕಾಯ್ದೆ ಕುರಿತು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ತಿಪ್ಪೇಸ್ವಾಮಿ.ಎನ್ ಮಾತನಾಡಿ, ಹಣ ನೀಡಿ ಸೇವೆ ಪಡೆಯುವ ಎಲ್ಲರೂ ಗ್ರಾಹಕರೆ. ಗ್ರಾಹಕರು ಖರೀದಿಸುವ ವಸ್ತು ಅಥವಾ ಸಾಮಾಗ್ರಿಗಳಲ್ಲಿ ಲೋಪವಾದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಿದರೇ, ಗ್ರಾಹಕರ ಸಮಸ್ಯೆಗಳನ್ನು ಗಣನೆಗೆ ತೆಗೆದು–ಕೊಂಡು ಪರಿಹಾರ ಒದಗಿಸಿ ಕೊಡಲಾಗುತ್ತದೆ ಎಂದು ಹೇಳಿದರು.

ಗ್ರಾಹಕರು ಕಾನೂನಿನಾತ್ಮಕ ಹಕ್ಕುಗಳಾದ ಗ್ರಾಹಕರ ರಕ್ಷಣಾ ಹಕ್ಕು, ಮಾಹಿತಿ ಪಡೆಯುವ ಹಕ್ಕು, ಆಯ್ಕೆಯ ಹಕ್ಕು, ಅದಾಲತ್ ಹಕ್ಕು, ಪರಿಹಾರ ಪಡೆಯುವ ಹಕ್ಕು, ಆರೋಗ್ಯ ಪೂರ್ಣ ಪರಿಸರ ಹಕ್ಕುಗಳ ಕುರಿತು ಜ್ಞಾನ ಹೊಂದಬೇಕು. ಯಾವುದೇ ವಸ್ತು–ಸಾಮಾಗ್ರಿ ಖರೀದಿಸಿದಾಗ ರಸೀದಿ ಪಡೆಯಬೇಕು ಎಂದು ತಿಳಿಸಿದರು.

ಹಿರಿಯ ವಕೀಲರಾದ ಎನ್.ಪ್ರಕಾಶ್ ಅವರು ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈಸಂಧರ್ಭದಲ್ಲಿ ವಿಜಯನಗರಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ್, ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಕಾನೂನು ಮಾಪನ ಶಾಸ್ತ್ರದ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಜೂಜಾಟ: 6 ಜನರ ಬಂಧನ, 56 ಸಾವಿರ ರೂ.ಜಪ್ತಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.24–ಸೀತನೂರು ಸೀಮೆಯ ಉದನೂರು ರಸ್ತೆಯ ಜಮೀನಿನಲ್ಲಿ ಗಿಡದ ಕೆಳಗೆ ಕುಳಿತು ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಫರಹತಾಬಾದ ಪೊಲೀಸ್ ಠಾಣೆ ಪಿಐ ಮಲ್ಲಿಕಾರ್ಜುನ ಇಕ್ಕಳಗಿ, ಸಿಬ್ಬಂದಿಗಳಾದ ಗಡ್ಡೆಪ್ಪ ಕೊರೆ, ತಿರುಪತಿ, ಎಂ.ಆರ್.ಪಟೇಲ್ ಮತ್ತು ಮಂಜುನಾಥ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ.

ಶಾಂತಕುಮಾರ ಮಲಶೆಟ್ಟಿ, ಶ್ರೀಶೈಲ ಗೊಬ್ಬುರು, ಯಲ್ಲಾಲಿಂಗ ಸರಡಗಿ, ಮಂಜುನಾಥ ಪಾಟೀಲ, ಭೀಮಾಶಂಕರ ಕಾಬಾ, ಮಲಕಪ್ಪ ಯಡ್ರಾಮಿ ಎಂಬುವವರನ್ನು ಬಂಧಿಸಿ 56 ಸಾವಿರ ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.

ಬಸವರಾಜ ಹರಳಯ್ಯ ಮತ್ತು ಸಾಯಬಣ್ಣ ಮಾಳ ಬನವರ ಎಂಬುವವರು ಓಡಿ ಹೋಗಿದ್ದಾರೆ. ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜ.06 ರಂದು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಜಿಲ್ಲಾಧಿಕಾರಿ ಮಿಶ್ರಾ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24– ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ 17 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಲಾಗಿದ್ದು, ಆಯ್ಕೆಯಾಗಿರುವ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳೊಂದಿಗೆ ಜ.06 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ರೈಲ್ವೆ ಸ್ಟೇಷನ್ ಎದುರುಗಡೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯುವ ದಾಖಲೆ ಪರಿಶೀಲನೆಗೆ ಹಾಜರಾಗಬೇಕು.

ಬಳ್ಳಾರಿ ಜಿಲ್ಲೆಯಲ್ಲಿ ಖಾಲಿ ಇರುವ 17 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಲು ಮೆರಿಟ್ ಕಮ್ ರೋಸ್ಟರ್ ಆಧಾರದ ಮೇಲೆ ಬಳ್ಳಾರಿ ಜಿಲ್ಲೆಯ ವೆಬ್‌ಸೈಟ್ http://bellary.nic.inನಲ್ಲಿ ಪ್ರಕಟಿಸಲಾಗಿದೆ ಎಂದು ಗ್ರಾಮ ಆಡಳಿತ ಅಧಿಕಾರಿಗಳ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ರೈತರು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು: ಸೋಮಸುಂದರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ರೈತರು ರಾಷ್ಟ್ರದ ಬೆನ್ನೆಲುಬಾಗಿದ್ದು, ರೈತರು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡು ಆದಾಯವನ್ನು ದ್ವಿಗುಣಗೊಳಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್.ಕೆ.ಎಂ ಅವರು ಹೇಳಿದರು.

ನಗರದ ಹಳೆಯ ತಾಲ್ಲೂಕು ಕಚೇರಿ ಅವರಣದಲ್ಲಿ ಸೋಮವಾರ ಆಯೋಜಿಸಿದ್ದ ಅಂತರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ದೇಶದ ಜೀವನಾಡಿಯಾಗಿದ್ದು, ಸಮಾಜದಲ್ಲಿ ಎಲ್ಲರೂ ರೈತರನ್ನು ಗೌರವದಿಂದ ಕಾಣಬೇಕು ಎಂದು ತಿಳಿಸಿದರು.

ಉಪ ಕೃಷಿ ನಿರ್ದೇಶಕ ಮಂಜುನಾಥ.ಎಸ್.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರೈತರು ಹಗಲು–ಇರುಳು ಯಾವುದೇ ಸ್ವಾರ್ಥ ಇಲ್ಲದೇ ನಿಸ್ವಾರ್ಥದಿಂದ ದುಡಿಯುವ ಶ್ರಮಿಕರಾಗಿದ್ದಾರೆ, ಅವರಿಗೆ ಗೌರವಿಸುವುದು ನಮ್ಮ ಧರ್ಮವಾಗಿದೆ. ರೈತರು ತಮ್ಮ ಆರೋಗ್ಯದ ಕಾಳಜಿ ವಹಿಸಬೇಕು ಎಂದರು.

ಸಹಾಯಕ ಕೃಷಿ ನಿರ್ದೇಶಕ ದಯಾನಂದ.ಎಂ ಅವರು ಮಾತನಾಡಿ, ಕೃಷಿ ಇಲಾಖೆಯಡಿ ಲಭ್ಯವಿರುವ ವಿವಿಧ ಯೋಜನೆಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ 2024–25ನೇ ಸಾಲಿನಲ್ಲಿ ಬಳ್ಳಾರಿ ತಾಲ್ಲೂಕು ಕೃಷಿ ಇಲಾಖೆಯ ಆತ್ಮಯೋಜನೆ(ಕಿಸಾನ್ ಗೋಷ್ಠಿ) ಯಡಿ ಸಾಧಕ ರೈತ ಮತ್ತು ರೈತ ಮಹಿಳೆಯರಿಗೆ ಸನ್ಮಾನಿಸಲಾಯಿತು.

ಜಿಲ್ಲಾ ಮಟ್ಟದಿಂದ 10 ರೈತರು–ರೈತ ಮಹಿಳೆಯರು ಹಾಗೂ ತಾಲ್ಲೂಕು ಮಟ್ಟದಿಂದ 03 ರೈತ–ರೈತ ಮಹಿಳೆಯರಿಗೆ ಸಮಗ್ರ ಕೃಷಿ ಪದ್ಧತಿಯಡಿ ಸಾಧನೆಗೈದ ರೈತ ಮತ್ತು ರೈತ ಮಹಿಳೆಯರನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಹಗರಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಿಂದ "ಸಮೃದ್ಧ ಸಿರಿಧಾನ್ಯಗಳ ಮೌಲ್ಯವರ್ಧನೆ" ಎಂಬ ಶೀರ್ಷಿಕೆಯ ಕಿರುಹೊತ್ತಿಗೆ ಬಿಡುಗಡೆ ಮಾಡಿ ಸಿರಿಧಾನ್ಯಗಳ ಮೌಲ್ಯ ಹಾಗೂ ಅವುಗಳ ಉಪಯುಕ್ತತೆ ಕುರಿತು ಮಹತ್ವ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಹಗರಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ.ಪಾಲಯ್ಯ, ಡಾ.ರಾಜೇಶ್ವರಿ, ಜುವಾರಿ ಮುಖ್ಯ ವ್ಯವಸ್ಥಾಪಕರಾದ ಮಹೇಶ್ ಕಾಟ್ಕೆ ಸೇರಿದಂತೆ ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಆತ್ಮಯೋಜನೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬಳ್ಳಾರಿ ಮಹಾನಗರ ಪಾಲಿಕೆ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕಾರ್ಯ (ನಗರ) ನಡೆಸಿದ್ದು, ಯಾವುದೇ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಇರುವುದಿಲ್ಲವೆಂದು ಸರ್ವೆಯಿಂದ ಕಂಡುಬಂದಿದ್ದು, ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಡಿ.26ರೊಳಗಾಗಿ ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿಗೆ ಸಲ್ಲಿಸಬಹುದು.

ಕಳೆದ ಅ.27 ಮತ್ತು 28 ರಂದು ಸಮೀಕ್ಷೆ ಕಾರ್ಯ ಹಾಗೂ ಶಿಬಿರ ಆಯೋಜಿಸಲಾಗಿತ್ತು. ಯಾವುದೇ ಅರ್ಜಿಗಳು ಸ್ವೀಕೃತಗೊಂಡಿರುವುದಿಲ್ಲ ಎಂದು ಬಳ್ಳಾರಿ ಮಹಾನಗರ ಪಾಲಿಕೆ ಪ್ರಕಟಣೆ ತಿಳಿಸಿದೆ.

# ಕುಡತಿನಿ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಕುಡತಿನಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮ್ಯಾನುವಲ್ ಸ್ಕ್ಯಾವೆಂಜರ್ಸ್‌ಗಳ ಮರುಸಮೀಕ್ಷೆ ಕಾರ್ಯ ಕೈಗೊಂಡಿ–ದ್ದು, ಯಾವುದೇ ಮ್ಯಾನುವಲ್ ಸ್ಕ್ಯಾವೆಂಜರ್ಸ್ ಸಹ ಕಂಡು ಬಂದಿರುವುದಿಲ್ಲ. ಸಮೀಕ್ಷೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಡಿ.26 ರಂದು ಸಂಜೆ 4.30 ಗಂಟೆಯೊಳಗೆ ಕುಡತಿನಿ ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸಬಹುದು ಎಂದು ಕುಡತಿನಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಾಧ ತಡೆ ಮಾಸಾಚರಣೆ

ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ :ಡಿ,24– ವಿಶ್ವ ಪ್ರಸಿದ್ಧ ಐತಿಹಾಸಿಕ ಹಂಪಿಗೆ ದೇಶ ಮತ್ತು ವಿದೇಶಗಳಿಂದ ಲಕ್ಷಾಂತರ ಪ್ರವಾಸಿಗರು ಆಗಮಿಸುತ್ತಿದ್ದು, ಹಂಪಿ ಪ್ರವಾಸಿ ಪೊಲೀಸ್ ಠಾಣೆ ವತಿಯಿಂದ ದೇಶ ಮತ್ತು ವಿದೇಶಿ ಪ್ರವಾಸಿಗರಿಗೆ, ಸ್ಥಳೀಯ ನಿವಾಸಿಗರಿಗೆ, ವಿದ್ಯಾರ್ಥಿಗಳಿಗೆ, ಆಟೋ ಚಾಲಕರು ಮತ್ತು ಪ್ರವಾಸಿ ಗೈಡ್ ಗಳಿಗೆ ಅಪರಾಧ ತಡೆ ಮಾಸಾಆಚರಣೆ ಕಾರ್ಯಕ್ರಮವನ್ನು ಹಂಪಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆದ ಶಿವಕುಮಾರ ನಾಯ್ಕ .ಎಲ್ ರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಹಿಳೆಯರ ಮತ್ತು ಪ್ರವಾಸಿಗರ ಸುರಕ್ಷತೆ, ಮಾದಕ ವಸ್ತುಗಳ ಬಗ್ಗೆ ಜಾಗೃತಿ, ಕಾನೂನು ಅರಿವು, ಜನಸ್ನೇಹಿ ಪೊಲೀಸ್ ಠಾಣೆಯ ಬಗ್ಗೆ ಜಾಗೃತಿಯನ್ನು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಗಳು, ಪ್ರವಾಸಿಗರು, ಶಾಲಾ ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ವಿಶೇಷಚೇತನರ ರಿಯಾಯಿತಿ ಬಸ್‌ಪಾಸ್ ನವೀಕರಣ ಮತ್ತು ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 24–ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 2025ನೇ ಸಾಲಿನ ವಿಶೇಷಚೇತನರ ರಿಯಾಯಿತಿ ಪಾಸುಗಳ ವಿತರಣೆ / ನವೀಕರಣವನ್ನು ಡಿಸೆಂಬರ್ 30 ರಿಂದ ಪ್ರಾರಂಭಿಸಲಾಗುವುದು. ಈ ಸಂಬಂಧ ಫಲಾನುಭವಿಗಳು ಸೇವಾಸಿಂಧು ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ. 2024ನೇ ಸಾಲಿನಲ್ಲಿ ವಿತರಿಸಿರುವ ಬಸ್‌ಪಾಸ್‌ಗಳನ್ನು 2025 ನೇ ಫೆಬ್ರವರಿ 28 ರವರೆಗೆ ಮಾನ್ಯ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಉಪ ಲೋಕಾಯುಕ್ತರಿಂದ ವಿಡಿಯೋ ಸಂವಾದ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಬರುವ ಜನವರಿ 16, 17 ಮತ್ತು 18 ರಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು, ಜಿಲ್ಲೆಗೆ ಭೇಟಿ ನೀಡಲಿರುವ ಪ್ರಯುಕ್ತ ಉಪ ಲೋಕಾಯುಕ್ತರು, ಸೋಮವಾರ ಸಂಜೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಡೀಯೋ ಸಂವಾದ ಸಭೆ ನಡೆಸಿ ಮಾಹಿತಿ ಪಡೆದುಕೊಂಡರು.

ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಎಲ್ಲಾ ವಸತಿ ನಿಲಯಗಳಲ್ಲಿ ಸ್ವಚ್ಛತೆ, ಶೌಚಾಲಯ, ವಸತಿ ನಿಲಯಗಳ ಕಾಂಪೌಂಡ್ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳು ಸುವ್ಯವಸ್ಥಿತದಲ್ಲಿರಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿನ ಎಲ್ಲಾ ಶಾಲೆಗಳಿಗೆ ಸೂಕ್ತ ಕಟ್ಟಡದ ವ್ಯವಸ್ಥೆ, ಶಾಲಾ ಮಕ್ಕಳಿಗೆ ಬ್ಯಾಗ್, ಶೂ–ಸಾಕ್ಸ್ ಹಾಗೂ ಬಿಸಿಯೂಟದ ವ್ಯವಸ್ಥೆ ಮತ್ತು ಮಕ್ಕಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಶೌಚಾಲಯಗಳು ಅಚ್ಚುಕಟ್ಟಾಗಿರಬೇಕು ಎಂದು ಡಿಡಿಪಿಐ ಅಧಿಕಾರಿಗಳಿಗೆ ತಿಳಿಸಿದರು.

ಬಳ್ಳಾರಿ ನಗರದಲ್ಲಿ ಖಾತಾ ಬದಲಾವಣೆಗೆ ಸಂಬಂಧಿಸಿದಂತೆ ಬಾಕಿ ಇರುವ ಪ್ರಕರಣಗಳು, ಕಸ ವಿಲೇವಾರಿ, ಪ್ಲಾಸ್ಟಿಕ್ ಬಳಕೆಗೆ ಕಡಿವಾಣ, ಕುಡಿಯುವ ನೀರಿನ ವ್ಯವಸ್ಥೆ, ಒಳಚರಂಡಿ ವ್ಯವಸ್ಥೆ, ಕಸ ವಿಲೇವಾರಿ ಘಟಕಗಳ ಕುರಿತು ಮಹಾನಗರ ಪಾಲಿಕೆ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾಹಿತಿ ಪಡೆದುಕೊಂಡರು.

ನರೇಗಾ ಯೋಜನೆ, ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಕುರಿತು ಜಿಪಂ ಅಧಿಕಾರಿಗಳೊಂದಿಗೆ ಮಾಹಿತಿ ಪಡೆದುಕೊಂಡರು. ಜಿಲ್ಲೆಯಲ್ಲಿ ಅರಣ್ಯ ಜಾಗ ಒತ್ತುವರಿ ಕುರಿತು ಅರಣ್ಯ ಇಲಾಖಾಧಿಕಾರಿಗಳ ಜೊತೆ ಪರಸ್ಪರ ಚರ್ಚಿಸಿ ಮಾಹಿತಿ ಪಡೆದುಕೊಂಡರು.

ಕಂದಾಯ, ಡಿಎಂಎಫ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಜೆಸ್ಕಾಂ, ಸಾರಿಗೆ, ಆಹಾರ, ಅಬಕಾರಿ, ಜೆಸ್ಕಾಂ, ಆರೋಗ್ಯ, ಕೃಷಿ ಮತ್ತು ತೆ–ೂಟಗಾರಿಕೆ ಇಲಾಖೆಗಳಿಗೆ ಸಂಬಂಧಿಸಿದಂತೆ ಎಲ್ಲಾ ಅಧಿಕಾರಿಗಳೊಂದಿಗೆ ಸಂವಾದ ನಡೆಸಿ ಮಾಹಿತಿ ಪಡೆದುಕೊಂಡ ಅವರು, ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳನ್ನು ಸಕಾಲದಲ್ಲಿ ತಲುಪಿಸಬೇಕು. ಯಾವುದೇ ರೀತಿಯಲ್ಲಿ ವಿಳಂಬವಾಗುವಂತಿಲ್ಲ. ಯಾವುದೇ ಅಕ್ರಮಗಳಿಗೆ ಅಧಿಕಾರಿಗಳು ಅಸ್ಪದ ನೀಡಬಾರದು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಪೊಲೀಸ್ ಅಧೀಕ್ಷಕರಾದ ಸಿದ್ದರಾಜು, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಎಎಸ್ಪಿ ನವೀನ್ ಕುಮಾರ್, ಸಹಾಯಕ ಆಯುಕ್ತ ಪ್ರಮೋದ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಗಣರಾಜ್ಯೋತ್ಸವದ ಅಂಗವಾಗಿ ಫಲಪುಷ್ಪ ಪ್ರದರ್ಶನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 23–ತೋಟಗಾರಿಕೆ ಇಲಾಖೆ ವತಿಯಿಂದ 2025ನೇ ಜನವರಿಯಲ್ಲಿ ಗಣರಾಜ್ಯೋತ್ಸವದ ಅಂಗವಾಗಿ 217ನೇ ಫಲಪುಷ್ಪ ಪ್ರದರ್ಶನವನ್ನು ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಪ್ರದರ್ಶನದ ಪ್ರಯುಕ್ತ ಸರ್ಕಾರಿ/ ಖಾಸಗಿ ಅಲಂಕಾರಿಕ ತೋಟಗಾರಿಕಾ ಆಸಕ್ತರು ತಮ್ಮ ಮನೆ, ಕಚೇರಿ ಅಥವಾ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಲಂಕಾರಿಕ ತೋಟಗಳು, ತಾರಸಿ, ಕೈತೋಟಗಳು, ತರಕಾರಿ, ಔಷಧಿ ಗಿಡಗಳು, ಕುಂಡಗಳಲ್ಲಿ ಬೆಳೆದ ವಿವಿಧ ಜಾತಿಯ ಗಿಡಗಳು, ಇಕೆಬಾನ, ಜಾನೂರ್, ಥಾಯ್ ಆರ್ಟ್ ಮತ್ತು ಪೂರಕ ಕಲೆಗಳಿಗೆ ಸಂಬಂಧಿಸಿದಂತೆ ಸ್ಪರ್ಧೆಗಳನ್ನು 2025 ರ ಜನವರಿ 18 ರಂದು ಹಮ್ಮಿಕೊಳ್ಳಲಾಗಿದೆ.

ಇಕೆಬಾನ, ಜಾನೂರ್, ಥಾಯ್ ಆರ್ಟ್, ತರಕಾರಿ ಕೆತ್ತನೆ ಮತ್ತು ಇತರೆ ಪೂರಕ ಕಲೆಗಳಿಗೆ ಸಂಬಂಧಿಸಿದಂತೆ ಆಸಕ್ತರು, ಪ್ರದರ್ಶಕರಿಂದ ಅರ್ಜಿಗಳನ್ನು 2025 ಜನವರಿ 6 ರಿಂದ 10 ರವರೆಗೆ ಸ್ವೀಕರಿಸಲಾಗುವುದು. ಅರ್ಜಿಗಳನ್ನು, ತೋಟಗಾರಿಕಾ ಜಂಟಿ ನಿರ್ದೇಶಕರು (ಯೋಜನೆ) ಲಾಲ್‌ಬಾಗ್‌ನ ಬೆಂಗಳೂರು ಕಚೇರಿಯಲ್ಲಿ ಬೆಳಿಗ್ಗೆ 10 ರಿಂದ 5 ಗಂಟೆಯವರೆಗೆ ಅರ್ಜಿಗಳನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೆಚ್.ಟಿ.ಗೀತಾ ಮೊಬೈಲ್ ಸಂಖ್ಯೆ: 9008433076 ಅಥವಾ ಕುಮಾರಿ ತಾರಕೇಶ್ವರಿ ಕೆ.ಆರ್. ಮೊಬೈಲ್ ಸಂಖ್ಯೆ: 8497048733, ಪುಷ್ಪಲತಾ ಎಂ. ಮೊಬೈಲ್ ಸಂಖ್ಯೆ: 8904592122 ಇವರನ್ನು ಸಂಪರ್ಕಿಸುವುದು.

ವಿವಿಧ ಅಲಂಕಾರಿಕ ತೋಟಗಳ ಸ್ಪರ್ಧೆ / ಕುಂಡಗಳಲ್ಲಿ ಬೆಳೆದ ಗಿಡಗಳ ಸ್ಪರ್ಧೆಗೆ ಅರ್ಜಿಗಳನ್ನು ಜನವರಿ 8 ರಿಂದ 15 ರವರೆಗೆ ಸ್ವೀಕರಿಸಲಾಗುವುದು. ಅರ್ಜಿಗಳನ್ನು ತೋಟಗಾರಿಕಾ ಜಂಟಿ ನಿರ್ದೇಶಕರು (ತೋಟದ ಬೆಳೆಗಳು) ಲಾಲ್‌ಬಾಗ್, ಬೆಂಗಳೂರು ಕಚೇರಿಯಲ್ಲಿ ಅರ್ಜಿಗಳನ್ನು ಬೆಳಿಗ್ಗೆ 10 ರಿಂದ 5 ಗಂಟೆಯವರೆಗೆ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಚುಂಚಯ್ಯ ಮೊಬೈಲ್ ಸಂಖ್ಯೆ: 9916433061, ಎನ್.ಟಿ.ಸುಜಾತ ಮೊಬೈಲ್ ಸಂ–ಖ್ಯೆ: 9901296270, ದೀಪಿಕ ಎಸ್.ಕೆ. ಮೊಬೈಲ್ ಸಂಖ್ಯೆ: 7892100304 ಇವರನ್ನು ಸಂಪರ್ಕಿಸುವುದು.

ಮಳಿಗೆಗಳ ಹಂಚಿಕೆಗಾಗಿ 2024 ನೇ ಡಿಸೆಂಬರ್ 30 ರಿಂದ 2025 ನೇ ಜನವರಿ 4 ರವರೆಗೆ ಸ್ವೀಕರಿಸಲಾಗುವುದು. ಅರ್ಜಿಗಳನ್ನು ತೋಟಗಾರಿಕಾ ಜಂಟಿ ನಿರ್ದೇಶಕರು (ಹಣ್ಣುಗಳು) ಲಾಲ್‌ಬಾಗ್‌ನ, ಬೆಂಗಳೂರು ಕಚೇರಿಯಲ್ಲಿ ಅರ್ಜಿಗಳನ್ನು ಬೆಳಿಗ್ಗೆ 10 ರಿಂದ 5 ಗಂಟೆಯವರೆಗೆ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9036986445, 9591304675, 9008094261ನ್ನು ಸಂಪರ್ಕಿಸುವಂತೆ ಲಾಲ್‌ಬಾಗ್‌ನ ಸಸ್ಯತೋಟದ ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಶುವಿಗೆ ಪೆಂಟಾವಲೆಂಟ್ ಲಸಿಕೆ ಹಾಕಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.24–ಜನನವಾದ 45 ದಿನಗಳ ಅವಧಿಯಲ್ಲಿ ಶಿಶುವಿಗೆ ಪೆಂಟಾವಲೆಂಟ್ ಲಸಿಕೆಯನ್ನು ಹಾಕಿಸುವ ಮೂಲಕ ಮಾರಕ ರೋಗಗಳು ತಡೆಗಟ್ಟಲು ಪಾಲಕರು ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ದೇವಿನಗರ ಇವರ ಸಂಯುಕ್ತಾಶ್ರಯದಲ್ಲಿ ದೇವಿನಗರ ಅಂಗನವಾಡಿ ಕೇಂದ್ರದಲ್ಲಿ ಡಿಸೆಂಬರ್ 31 ರವರೆಗೆ ಜರುಗುವ ಪೆಂಟಾವಲೆಂಟ್ ಲಸಿಕೆ ವಿಶೇಷ ಅಭಿಯಾನದ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಾಲ್ಯದಲ್ಲಿ ಕಂಡು ಬರುವ ಮಾರಕ ಕಾಯಿಲೆಗಳಿಂದ ಮಕ್ಕಳ ಆರೋಗ್ಯದ ದೃಷ್ಟಿಯಿಂದ 12 ಮಾರಕ ರೋಗಗಳಿಗೆ ಸಂಬಂಧಿಸಿದ ಲಸಿಕೆಗಳನ್ನು ಮಕ್ಕಳಿಗೆ ನೆಗಡಿ, ಕೆಮ್ಮು ಸಾಧಾರಣ ಜ್ವರ ಇದ್ದರೂ ಸಹ ಯಾವುದೇ ಹಿಂಜರಿಕೆಯಿಲ್ಲದೆ ಲಸಿಕೆ ಹಾಕಿಸುವ ಮೂಲಕ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ತಪ್ಪದೇ ಪಾಲಕರು ಲಸಿಕೆಗಳನ್ನು ಹಾಕಿಸಬೇಕು ಎಂದು ಕೋರಿದರು. ಒಂದು ಚುಚ್ಚುಮದ್ದು ನೀಡುವ ಮೂಲಕ 5 ರೋಗಗಳನ್ನು ತಡೆಗಟ್ಟಲು ಸಹಾಯಕವಾಗುವ ಪೆಂಟಾವಲೆಂಟ್ ಲಸಿಕೆಯನ್ನು ಮಗುವಿನ ಒಂದುವರೆ ತಿಂಗಳು, ಎರಡುವರೆ ತಿಂಗಳು ಹಾಗೂ ಮೂರುವರೆ ತಿಂಗಳು ವಯಸ್ಸಿನ ಅವಧಿಯಲ್ಲಿ ಹಾಕಿಸಬೇಕು. ಈ ಮೂಲಕ ಗಂಟಲು ಮಾರಿ, ನಾಯಿಕೆಮ್ಮು, ಧನುರ್ವಾಯು, ಯಕೃತ್ತಿನ ಉರಿ ಮತ್ತು ಊತ, ಕಾಮಾಲೆ, ಹೆಚ್‌ಇನ್‌ಫ್ಲ್ಯುಯೆಂಜಾಬಿ, ಮೆದುಳು ರೋಗ ಮೆನಂಜೆಟೀಸ್ ರೋಗಗಳನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ ಎಂದು ಅವರು ತಿಳಿಸಿದರು. ಮಕ್ಕಳ ಸದೃಢ ಆರೋಗ್ಯಕ್ಕಾಗಿ ತಪ್ಪದೇ ಲಸಿಕೆಗಳನ್ನು ಹಾಕಿಸಬೇಕು. ಒಂದು ವರ್ಷದ ಒಳಗಡೆ ಮಗುವಿಗೆ ಪೆಂಟಾವಲೆಂಟ್ ಲಸಿಕೆ ಹಾಕಿಸದೇ ಇದ್ದರೂ ಸಹ ತಪ್ಪದೇ ಲಸಿಕೆ ಹಾಕಿಸಲು ವಿನಂತಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಮಗುವಿಗೆ ಹುಟ್ಟಿದ ತಕ್ಷಣ ಪೋಲಿಯೋ, ಹೆಪಟೈಟಿಸ್ ಬಿ, ಬಾಲಕ್ಷಯ ರೋಗ ತಡೆಗಟ್ಟಲು ಲಸಿಕೆಗಳನ್ನು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಕಲಾಗುತ್ತಿದೆ ಎಂದು ಹೇಳಿದರು.

ಮಗುವಿನ ಒಂದುವರೆ ತಿಂಗಳು, ಎರಡುವರೆ ತಿಂಗಳು ಹಾಗೂ ಮೂರುವರೆ ತಿಂಗಳು ವಯಸ್ಸಿನ ಅವಧಿಯಲ್ಲಿ ಅತಿಸಾರಬೇಧಿಗೆ ರೋಟಾವೈರಸ್, ನಿಮೋಕಾಕಲ್ ಲಸಿಕೆ, ಪೆಂಟಾವಲೆಂಟ್ ಹಾಗೂ ಪೋಲಿಯೋ ಲಸಿಕೆಯನ್ನು ಬಾಯಿ ಮೂಲಕ ಹಾಗೂ ಚುಚ್ಚುಮದ್ದು ಮೂಲಕ ನೀಡಲಾಗುತ್ತದೆ ಎಂದರು. ಮಗುವಿಗೆ 9 ತಿಂಗಳು ತುಂಬಿದ ನಂತರ ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ ಮತ್ತು ಸಂಜೆ–ಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ ನೀಡಲಾಗುತ್ತದೆ. ಇವೆಲ್ಲವುಗಳನ್ನು ಮಗುವಿನ ಒಂದು ವರ್ಷದೊಳಗೆ ಹಾಕಲಾಗುತ್ತಿದ್ದು, ಇವುಗಳನ್ನು ತಪ್ಪದೆ ಆರೋಗ್ಯ ಕೇಂದ್ರಗಳಲ್ಲಿ ಪಡೆದುಕೊಳ್ಳಬೇಕು. ಗ್ರಾಮ ವಾರ್ಡ್‌ಗಳಲ್ಲಿ ಪ್ರತಿ ಗುರುವಾರ ಹಾಕುವ ಬಗ್ಗೆ ಹೆಚ್ಚು ಜಾಗೃತಿ ನೀಡಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಸುರೇಖ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಡಿಎನ್‌ಓ ಗಿರೀಶ್, ಪಿಹೆಚ್‌ಸಿಓ ಕಾವ್ಯ, ಹೆಚ್‌ಐಓ ರಾಮಕೃಷ್ಣ, ಆಶಾಕಾರ್ಯಕರ್ತೆ ಹೈಯತುನ್ನೀಸ, ಅಂಗನವಾಡಿ ಕಾರ್ಯಕರ್ತೆ ಮರಿಯಮ್ಮ ಸೇರಿದಂತೆ ತಾಯಂದಿರು ಹಾಗೂ ಇನ್ನೀತರರು ಉಪಸ್ಥಿತರಿದ್ದರು.

### ಕಾರಜೋಳ ವಿರುದ್ಧ ಸಚಿವ ತಿಮ್ಮಾಪೂರ ಆರೋಪ

# 522 ಮೀ.ಗೆ ನೀರು ನಿಲ್ಲಿಸುವ ಠರಾವು ಮಾಡಿದ್ದು ಬಿಜೆಪಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ಸತ್ಯಹರಿಶ್ಚಂದ್ರನಂತೆ ಮತ್ತೊಬ್ಬರ ಭೃಷ್ಟಾಚಾರದ ಬಗ್ಗೆ ಮಾತನಾಡುವ ಚಿತ್ರದುರ್ಗದ ಸಂಸದರು ತಾವು ನೀರಾವರಿ ಮಂತ್ರಿಗಳಾಗಿದ್ದಾಗ ಮಾಡಿರುವುದು ಸಾಕಷ್ಟಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಪರೋಕ್ಷವಾಗಿ ಗೋವಿಂದ ಕಾರಜೋಳಗೆ ತಿವಿದಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ನಿಮ್ಮ ಬಂಡವಾಳವೂ ಸಾಕಷ್ಟಿದೆ. ಅದನ್ನೆಲ್ಲ ಬಿಚ್ಚಿಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಆಲಮಟ್ಟಿ ಜಲಾಶಯದಲ್ಲಿ 522 ಮೀಟರಗೆ ನೀರು ನಿಲ್ಲಿಸುವ ಕುರಿತಾಗಿ ತಾವೇ ನೀರಾವರಿ ಸಚಿವರಾಗಿದ್ದಾಗ ಸಂಪುಟದ ಉಪ ಸಮಿತಿಯಲ್ಲಿ ಠರಾವು ಮಾಡಿಸಿ ಈಗ ಕಾರಜೋಳ ನಾಟಕ ಮಾಡುತ್ತಿದ್ದಾರೆ. ನಿಮ್ಮ ನಾಟಕ ಜನರಿಗೆ ಗೊತ್ತಿದೆ. ಬೊಮ್ಮಾಯಿ ಅವರನ್ನು ಕರೆದುಕೊಂಡು ಬಂದು 524 ಮೀ.ವ್ಯಾಪ್ತಿಯ ಸಂತ್ರಸ್ಥರಿಗೂ ಪರಿಹಾರ ಕೊಡಿಸಿದ್ದೇನೆ ಎಂದು ದ್ವಂಧ ಹೇಳಿಕೆ ನೀಡುತ್ತಿದ್ದಾರೆ ಎಂದು ಹರಿಹಾಯ್ದ ತಿಮ್ಮಾಪೂರ, ನಿಮ್ಮ ಬಂಡವಾಳ ಬಹಳಷ್ಟಿದೆ. ಬಿಚ್ಚಿಡಬೇಕಾಗುತ್ತದೆ ಹುಷಾರ್ ಎಂದರು.

ಅಂಬೇಡ್ಕರ ಬಗ್ಗೆ ಹಗುರವಾಗಿ ಮಾತನಾಡಿ ಅವಮಾನಿಸಿರುವ ಕೇಂದ್ರ ಗೃಹ ಸಚಿವ ಅಮಿತ ಶಾ ಹಾಗೂ ವಿಧಾನ ಪರಿಷತ್ನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರಗೆ ಅಸಭ್ಯ ಪದ ಬಳಸಿ ನಿಂದಿಸಿರುವ ಸಿ.ಟಿ.ರವಿ ಅವರನ್ನು ಬಿಜೆಪಿಯಿಂದ ಹೊರಹಾಕಬೇಕು ಎಂದು ಒತ್ತಾಯಿಸಿದ ಸಚಿವ ತಿಮ್ಮಾಪೂರ, ಅಮಿತಾ ಶಾ ಹಾಗೂ ಸಿ.ಟಿ.ರವಿ ಮನಸ್ಥಿತಿ ಒಂದೇ ಆಗಿದೆ ಎಂದು ಜರಿದರು.

ಅಧಿಕಾರದ ದಾಹಕ್ಕೆ ಜನರನ್ನು ದಾರಿತಪ್ಪಿಸುವ ಕೆಲಸ ಮಾಡುತ್ತಿರುವ ಬಿಜೆಪಿ, ಮನು ವಾದ ತರುವ ಪ್ರಯತ್ನ ಮಾಡುತ್ತಿದ್ದು, ದೇಶ ವಿಭಜನೆಗೆ ಹುನ್ನಾರ ನಡೆಸಿದೆ ಎಂದು ಆರೋಪಿಸಿದ ಸಚಿವ ತಿಮ್ಮಾಪೂರ, ದೇಶದ ಜನ ಇದನ್ನೆಲ್ಲ ಸೂಕ್ಷ್ಮವಾಗಿ ನೋಡುತ್ತಿದ್ದಾರೆ. ಒಂದು ದಿನ ತಕ್ಕ ಪಾಠ ಕಲಿಸುತ್ತಾರೆ ಎಂದರು.

ಬೆಳಗಾವಿಯಲ್ಲಿ ಡಿ.26 ಹಾಗೂ 27 ರಂದು ನಡೆಯುವ ಎಐಸಿಸಿ ಶತಮಾನೋತ್ಸವದ ಅಧಿವೇಶನದ ಕುರಿತಾಗಿ ಮಾತನಾಡಿದ ಅವರು, ಇದು ಐತಿಹಾಸಿಕ ಸಮಾವೇಶವಾಗಲಿದ್ದು, ಮಲ್ಲಿಕಾರ್ಜುನ ಖರ್ಗೆ ಅವರು ಅಧ್ಯಕ್ಷತೆ ವಹಿಸುವ ಸಮಾವೇಶ ರಾಜ್ಯದ ಹೆಮ್ಮೆ ಎನಿಸಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ಮಾತನಾಡಿ, ಡಿ.26 ರಂದು ಬೆಳಗಾವಿಯಲ್ಲಿ ನಡೆಯುವ ಎಐಸಿಸಿ ಅಧಿವೇಶನದಲ್ಲಿ ಎಲ್ಲ ಸದಸ್ಯರು ಪಾಲ್ಗೊಳ್ಳಲಿದ್ದು, ಪಕ್ಷದ ಕಾರ್ಯಕಾರಿ ಸಮಿತಿಯೂ ನಡೆಯಲಿದೆ. ಡಿ.27 ರಂದು ನಡೆಯುವ ಸಾರ್ವಜನಿಕ ಸಭೆಯಲ್ಲಿ ಜಿಲ್ಲೆಯಿಂದ 20 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸುವರು ಎಂದು ಹೇಳಿದರು.

ಇಂದು ರಾಜಕಾರಣ ಬಹಳ ಹಗುರವಾಗಿದ್ದು, ಗ್ರಾಪಂ ಸದಸ್ಯರು ಸಹ ಶಾಸಕರಿಗೆ ಬುದ್ಧಿ ಹೇಳುವ ಸ್ಥಿತಿ ಬಂದಿದೆ. ಸಿ.ಟಿ.ರವಿ ಸದನದ ಗೌರವಾನ್ವಿತ ಸದಸ್ಯರಾಗಿ ಒಬ್ಬ ಮಹಿಳೆಗೆ ಅಸಂವಿಧಾನಿಕ ಪದ ಬಳಸಿ ನಿಂದಿಸಿರುವುದು ಅಕ್ಷಮ್ಯ. ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಬೀಳಗಿ ಶಾಸಕ ಜೆ.ಟಿ.ಪಾಟೀಲ ಹೇಳಿದರು. ಮುಖಂಡ ವೆಂಕಣ್ಣ ಕಮಕೇರಿ ಇದ್ದರು.

# ಚಂದ್ರಕಾಂತ ಕೇಸನೂರಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ನಗರದ ಜ್ಯೋತಿ ಪತ್ತಿನ ಕೋ ಅಪರೇಟಿವ್ ಬ್ಯಾಂಕಿನ ನೂತನ ನಿರ್ದೇಶಕರಾಗಿ ಆಯ್ಕೆಯಾಗಿರುವ ಚಂದ್ರಕಾಂತ ಕೇಸನೂರ ಅವರನ್ನು ವಿಧಾನಪರಿಷತ್ ಸದಸ್ಯ ಪಿ.ಎಚ್.ಪೂಜಾರ ಅವರ ಜನಸಂಪರ್ಕ ಕಾರ್ಯಾಲಯದಲ್ಲಿ ಸನ್ಮಾನಿಸಲಾಯಿತು.

ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಸಂಗನಗೌಡ ಗೌಡರ, ಡಾ.ಶೇಖರ ಮಾನೆ, ಶಂಭುಗೌಡ ಪಾಟೀಲ, ಕುಮಾರ ಗಿರಿಜಾ, ರಾಜು ಚಿತ್ತವಾಡಗಿ ಅವರು ಕೇಸನೂರ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಭೂಸರಡ್ಡಿ, ವಿರುಪಾಕ್ಷ ಅಮೃತಕರ, ಶ್ರೀನಿವಾಸ ಪೂಜಾರ, ಶೈಲು ಅಂಗಡಿ, ರಾಜು ಗೌಳಿ, ರಾಜು ಶ್ರೀರಾಮ, ಸುರೇಶ ಪೂಜಾರಿ, ಈರಣ್ಣ ಗವಿಮಠ, ಶಾಂತಾಬಾಯಿ ಗೋಣಿ, ಉಮಾದೇವಿ ಗವಿಮಠ, ವಿಜಯಲಕ್ಷ್ಮೀ ಅಂಗಡಿ, ಅನಂತ ಮಳಗಿ, ಮಂಜುನಾಥ ಬಳೂರಗಿ, ಮಲ್ಲಮ್ಮ ಕಟಗೇರಿ ಮತ್ತಿತರರು ಇದ್ದರು.

### ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೆ.ಆರ್.ಐ.ಡಿ.ಎಲ್ ವಿಭಾಗದ

# ಅಡಿಯಲ್ಲಿ ನಡೆದಿರುವ ಭ್ರಷ್ಟಾಚಾರ ಪ್ರದೀಪ ಅಣಬಿ ಆರೋಪ

(ಮಲ್ಲಿಕಾರ್ಜುನ್ ಮಳಿಕೇರಿ)




ಮಲ್ಲಮ್ಮ ನುಡಿ ವಾರ್ತೆ

ಕೆ ಆರ್ ಐ.ಡಿ. ಎಲ್ ವಿಭಾಗದ ಅಡಿಯಲ್ಲಿ ಹಲವಾರು ಕಾಮಗಾರಿಗಳು ನಡೆದಿದ್ದು.

ಬರೀ ಕಾಮಗಾರಿಗಳ ಹೆಸರಿಗೆ ಮಾತ್ರ ಇದ್ದು ಭ್ರಷ್ಟಾಚಾರದಿಂದ ಕೂಡಿದೆ ಎಂದು ಸರ್.ಎಂ.ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘ, ತಾಲೂಕ ಘಟಕ, ಶಹಾಪುರ ಅಧ್ಯಕ್ಷರಾದ ಪ್ರದೀಪ್ ಅಣಬಿ ಆರೋಪಿಸಿದರು

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ.ಯಾದಗಿರಿ ರವರಲ್ಲಿ ದೂರು ನೀಡಲಾಗಿತ್ತು. ಅದರಂತೆ, ಸದರಿ ದೂರಿಗೆ ಸಂಬಂಧಿಸಿದ – ಪ್ರತಿಯನ್ನು ಕಾರ್ಯಪಾಲಕ ಅಭಿಯಂತರಲ್ಲಿ ಕೆ.ಆರ್.ಐ.ಡಿ.ಎಲ್ ವಿಭಾಗ ಯಾದಗಿರಿ ರವರಿಗೂ ಕೂಡ ದಿನಾಂಕ: 05/12/2024 ರಂದು ಸದರಿಯವರ ಕಾರ್ಯಾಲಯದಲ್ಲಿ ದೂರನ್ನು ಕೊಟ್ಟು ಅದರ ಸ್ವೀಕೃತಿಯನ್ನು ಪಡೆದುಕೊಂಡು ನಮ್ಮ ದೂರಿನ ಪತ್ರದಲ್ಲಿನ ವಿವರದಂತೆ 1) ಯಾದಗಿರಿ ಜಿಲ್ಲೆಯ ಮೋಟ್ನಳ್ಳಿ ಮೊರಾರ್ಜಿ ದೇಸಾಯಿ, ವಸತಿ ಶಾಲೆಯ ದುರಸ್ತಿಗಾಗಿ ರೂ.80 ಲಕ್ಷ, 2) ಜಿಲ್ಲೆಯ ಸುರಪುರ ನಗರ ಪ್ರದೇಶದಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಟ್ಟಡ ನಿರ್ಮಾಣಕ್ಕಾಗಿ ಸುಮಾರು: 3.87 ಕೋಟಿ ನೀಡಲಾಗಿದ್ದು, ಈ ಕುರಿತು ಅಂದಾಜು ಪತ್ರಿಕೆಯಲ್ಲಿ ಇರುವಂತೆ ಕಾಮಗಾರಿಯನ್ನು ನಿರ್ವಹಿಸುವುದು ಬಿಟ್ಟು ಕಳಪೆ ಮಟ್ಟದಲ್ಲಿ ಕಾಮಗಾರಿ ಮಾಡುವುದು: ಇವರ ಮೂಲ ಉದ್ದೇಶ. ಕಾಮಗಾರಿಗೆ ಬಳಸಲಾದ ಸ್ಟೀಲ್, ಸಿಮೆಂಟ್, ಉಸುಕು(ಮರಳು), ಕಂಕರ್, ಜಲ್ಲಿ, ಮತ್ತು ಸರಿಯಾದ ರೀತಿಯಲ್ಲಿ ಕಟ್ಟಡಕ್ಕೆ ನೀರು ಹೊಡೆಯುವುದು ಸೇರಿ ಅನೇಕ ರೀತಿಯಲ್ಲಿ ಅಕ್ರಮ ಮಾಡುತ್ತಿರುವುದು ಕಂಡುಬಂದಿದೆ. ಈ ಕುರಿತು ಒಂದು ಕಾಮಗಾರಿ ದುರಸ್ತಿ ಹೆಸರಿಗೆ 80.00 ಲಕ್ಷ ಮೀಸಲಿಟ್ಟಿದ್ದು, ಹೊಸ ಕಟ್ಟಡ, ಹೊಸ ಕೋಣೆಯನ್ನು ನಿರ್ಮಿಸಬಹುದಾದ ಮೊತ್ತದಲ್ಲಿ ದುರಸ್ತಿ ಹೆಸರಿನಲ್ಲಿ ಇಷ್ಟೊಂದು ಹಣ ಪೋಲಾಗುತ್ತಿರುವುದು ಎಷ್ಟು ಸರಿ ಎಂದು ಪ್ರದೀಪ್ ಅಣಬೆ ದೂರಿದರು.

# ಬೆಳಗಾವಿ ಎಐಸಿಸಿ ಅಧಿವೇಶನ ರಾಜ್ಯಕ್ಕೆ ಹೆಮ್ಮೆ–ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ಬೆಳಗಾವಿಯಲ್ಲಿ ಡಿ.26 ಹಾಗೂ 27 ರಂದು ನಡೆಯಲಿರುವ ಎಐಸಿಸಿ ಅಧಿವೇಶನ ರಾಜ್ಯಕ್ಕೆ ಹೆಮ್ಮೆಯ ಸಂಗತಿ. ಅದರಲ್ಲೂ ರಾಜ್ಯದ ಹಿರಿಯ ಮುಖಂಡ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆ ವಹಿಸುತ್ತಿರುವುದು ಸಂತಸದ ವಿಷಯ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1924ರಲ್ಲಿ ಮಹಾತ್ಮಾಗಾಂಧಿ ಅವರ ಅಧ್ಯಕ್ಷತೆಯಲ್ಲಿ ಪ್ರಥಮ ಅಧಿವೇಶನ ರಾಜ್ಯದವರೇ ಆಗಿದ್ದ ಗಂಗಾಧರರಾವ್ ದೇಶಪಾಂಡೆ ಅವರ ಅಪೇಕ್ಷೆಯ ಮೇರೆಗೆ ಬೆಳಗಾವಿಯಲ್ಲಿ ನಡೆದಿತ್ತು. ಅದರ ಶತಮಾನೋತ್ಸವದ ಅಧಿವೇಶನವೂ ಇಲ್ಲೇ ನಡೆಯುತ್ತಿರುವುದು ಅವಿಸ್ಮರಣೀಯ ಎಂದರು.

ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ಮಾತನಾಡಿ, ಬೆಳಗಾವಿಯ ಅಧಿವೇಶನ ಐತಿಹಾಸಿಕ ಸಮ್ಮೇಳನವಾಗಲಿದೆ. ಡಿ.26 ಪಕ್ಷದ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದ್ದು, ಡಿ.27 ರಂದು ಸಾರ್ವಜನಿಕ ಸಭೆ ಜರುಗಲಿದೆ. ಅಂದಿನ ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ 20 ಸಾವಿರಕ್ಕೂ ಹೆಚ್ಚು ಜನ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ, ಡಿ.26 ರಂದು ಸುವರ್ಣ ಸೌಧದ ಎದುರು ಮಹಾತ್ಮಾಗಾಂಧೀ ಪುತ್ಥಳಿ ಅನಾವರಣ ನಡೆಯಲಿದೆ ಎಂದರು. ಮುಖಂಡ ವೆಂಕಣ್ಣ ಕಮಕೇರಿ ಇದ್ದರು.

# ಶಿರೂರಿನಲ್ಲಿ ಸಂಭ್ರಮದ ಕಾರ್ತಿಕೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ತಾಲೂಕಿನ ಶಿರೂರ ಪಟ್ಟಣದಲ್ಲಿ ಬಸ್ ನಿಲ್ದಾಣದ ಬಳಿಯಿರುವ ಹಾದಿ ಬಸವೇಶ್ವರ ಹಾಗೂ ಬೀರಲಿಂಗೇಶ್ವರ ದೇವರ ಕಾರ್ತಿಕೋತ್ಸವ ಸೋಮವಾರ ಸಂಭ್ರಮದಿಂದ ಜರುಗಿತು.

ಪಟ್ಟಣದ ದುರ್ಗದ ಬಯಲಿನ ಬಸವೇಶ್ವರಮೂರ್ತಿಗೆ, ಬೀರಲಿಂಗೇಶ್ವರ ಹಾಗೂ ಮಹಾಳಿಂಗರಾಯ ದೇವರು ಮತ್ತು ಪಂಚಪ್ಪನ ಪೇ–ಟೆಯ ಬಸವೇಶ್ವರನಿಗೆ ವಿಶೇಷ ಪೂಜೆ ನೆರವೇರಿದ ನಂತರ ಸಂಜೆ ಭಕ್ತರು ಎಣ್ಣೆ ದೀಪ ಹಚ್ಚಿ ಸಂಭ್ರಮಿಸಿದರು. ಅನ್ನ ಸಂತರ್ಪಣೆ ನಡೆಯಿತು.

ದೊಡ್ಡ ಓಣಿಯ ಹೂಲಿ ಬಸವೇಶ್ವರ ಕಾರ್ತಿಕೋತ್ಸವವು ಸಡಗರದಿಂದ ಜರುಗಿತು. ಸೋಮವಾರ ಬೆಳಿಗ್ಗೆ ಅಭಿಷೇಕ, ವಿವಿಧ ಪೂಜಾ ಕಾರ್ಯಗಳು ನೆರವೇರಿದವು. ಸಾಯಂಕಾಲ ದೇವಸ್ಥಾನದ ಆವರಣದಲ್ಲಿ ಭಕ್ತರು ಎಣ್ಣೆ ದೀಪ ಬೆಳಗಿಸಿದರು. ಕಾರ್ತಿಕೋತ್ಸವದ ಅಂಗವಾಗಿ ಮನರಂಜನೆ ಕಾರ್ಯಕ್ರಮಗಳು ಜರುಗಿದವು.

# ಸೂಳಿಕೇರಿ ರಾಮ ಮಂದಿರಕ್ಕೆ ಶ್ರೀಗಳ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ಸಮೀಪದ ಸೂಳಿಕೇರಿ ಗ್ರಾಮದ ಪುರಾತನ ಶ್ರೀ ರಾಮ ಮಂದಿರಕ್ಕೆ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರು ಮಂಗಳವಾರ ಭೇಟಿ ನೀಡಿದ್ದರು.

ಶ್ರೀಗಳು ರಾಮ ದೇವರಿಗೆ ಮಂಗಳಾರತಿ ಮಾಡಿ ನೆರವೇರಿಸಿದರು. ಭಕ್ತರು ಶ್ರೀಗಳ ಪಾದಪೂಜೆ ನೆರವೇರಿಸಿ ಆಶೀರ್ವಾದ ಪಡೆದರು.

ಉತ್ಸವ ಸಮಿತಿ ಅಧ್ಯಕ್ಷ ಗೋವಿಂದರಾವ ದೇಶಪಾಂಡೆ, ಡಾ.ಜಯತೀರ್ಥ ದೇಶಪಾಂಡೆ, ಜಿ.ಎನ್.ಸೂಳಿಕೇರಿ, ಆರ್.ಬಿ.ಸೂಳಿಕೇರಿ, ಸಂಜೀವ ದೇಶಪಾಂಡೆ, ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಮಲನಗರ: ಡಿ.26ಕ್ಕೆ ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ ಕನ್ನಡ ರಥೋತ್ಸವ



(ಪರಮೇಶ ರಾಂಪುರೆ)

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಡಿ.26ಕ್ಕೆ ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ

ಕನ್ನಡ ರಥೋತ್ಸವ ಕಾರ್ಯಕ್ರಮ ವಿಜೃಂಭಣೆಯಿಂದ ಮಾಡಲಾಗುವದು ಎಂದು ಜಾತ್ರಾ ಮಹೋತ್ಸವದ ಅಧ್ಯಕ್ಷರಾದ ಪ್ರಕಾಶ ಟೋಣ್ಣೆ ಅವರು ಹೇಳಿದರು.

ಪಟ್ಟಣದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಮ್ಮ ಭಾಗದಲ್ಲಿ ನಿಜಾಮ ಆಳ್ವಿಕೆ ಕಾಲದಲ್ಲಿ ಹೊರಗಡೆ ಉರ್ದು ಫಲಕ ಹಾಕಿ ಕನ್ನಡ ಕಲಿಸಿದ್ದ ಕನ್ನಡ ಪಟ್ಟದ್ದೇವರು, ಹಾಗೂ ಅನೇಕ ಸಾಮಾಜಿಕ, ಶೈಕ್ಷಣಿಕ ಹಾಗೂ ಗುರು ಬಸವಣ್ಣವರ ವಚನ ಸಿದ್ದಂತದಿಂದ ಸಮಾಜ ಪರಿವರ್ತನೆಗಾಗಿ ಹಗಲು ರಾತ್ರಿ ದುಡಿದ ಈ ಭಾಗದಲ್ಲಿ ನಡೆದಾಡುವ ದೇವರು ಎಂದು ಪ್ರಖ್ಯಾತಿ ಪಡೆದ ಪೂಜ್ಯ ಶ್ರೀ ಮ. ಘ. ಚ. ಡಾ.ಚನ್ನಬಸವ ಪಟ್ಟದ್ದೇವರ ಹುಟ್ಟೂರಿನಲ್ಲಿ 135ನೇ ಜಯಂತೋತ್ಸವ ಕಾರ್ಯಕ್ರಮಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ರೂಪರೇಖೆ

ಡಿ.26 ಗುರುವಾರ ಬೆಳಿಗ್ಗೆ 8 ಗಂಟೆಗೆ ಪಟ್ಟದ್ದೇವರ ಭಾವಚಿತ್ರ ಮೆರವಣಿಗೆ ಶ್ರೀ ಚನ್ನಬಸವ ಕಾಲೋನಿಯಿಂದ ಶ್ರೀಮಠದವರೆಗೆ ನಡೆಯುವುದು.

ಬೆಳಿಗ್ಗೆ 10:30 ಗಂಟೆಗೆ ತೊಟ್ಟಿಲು ಕಾರ್ಯಕ್ರಮ. ನಂತರ 11:00 ಗಂಟೆಗೆ ಉದ್ಘಾಟನಾ ಸಮಾರಂಭ,

ಸಂಜೆ 4:00 ಗಂಟೆಗೆ ಡಾ. ಚನ್ನಬಸವ ಪಟ್ಟದ್ದೇವರ ಕನ್ನಡ ರಥೋತ್ಸವ ಮೆರವಣಿಗೆ ಶ್ರೀಮಠದಿಂದ ಅಕ್ಕಮಹಾದೇವಿ ಚೌಕ ವರೆಗೆ

ನಡೆಯಲಿದೆ. ಸಾಯಂಕಾಲ 6:00 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗುವುದು.

ಉದ್ಘಾಟನೆ ಕಾರ್ಯಕ್ರಮದ ದಿವ್ಯಸನ್ನಿದ್ಯಾ:

ಪೂಜ್ಯ ಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅಧ್ಯಕ್ಷರು, ಅನುಭವ ಮಂಟಪ.

ದಿವ್ಯಸಮ್ಮುಖ: ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು, ಪೀಠಾಧಿಪತಿಗಳು ಹಿರೇಮಠ ಸಂಸ್ಥಾನ ಭಾಲ್ಕಿ ಶ್ರೀ ಮಹಾಲಿಂಗ ಸ್ವಾಮಿಗಳು, ಶ್ರೀ ಶಿವಾನಂದ ಸ್ವಾಮಿಗಳು, ಶ್ರೀ ಬಸವಲಿಂಗ ಸ್ವಾಮಿಗಳು, ಶ್ರೀ ಡಾ. ಮಾತೆ ಮಹಾದೇವಮ್ಮತಾಯಿ, ಶ್ರೀ ಪ್ರಭುಲಿಂಗ ಸ್ವಾಮಿಗಳು, ಶ್ರೀ ಶಿವಬಸವ ಸ್ವಾಮಿಗಳು ಉಪಸ್ಥಿತಿ.

ಶಾಸಕರಾದ ಪ್ರಭು ಚವ್ಹಾಣ ಅವರ ಕಾರ್ಯಕ್ರಮಕ್ಕೆ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆ ಪ್ರಕಾಶ ಟೋಣ್ಣೆ,

ಅನುಬಾವ: ಶರಣೆ ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ, ಸಾಹಿತಿಗಳು ಕಲಬುರಗಿ,

ಗುರುಬಸವ ಪೂಜೆ: ಸುರೇಶ ಸೊಲ್ಲಾಪುರೆ ಉಪಾಧ್ಯಕ್ಷರು, ಜಾತ್ರಾ ಸಮಿತಿ, ಹಾಗೂ ಪ್ರಭುರಾವ ಕಳಸೆ ಖಜಾಂಚಿಗಳು, ಜಾತ್ರಾ ಸಮಿತಿ. ಸಾಮಾಜಿಕ ಸೇವೆಗೈದವರಿಗೆ ಸನ್ಮಾನ ಮಾಡಲಾಗುವದು. ರಥಕ್ಕೆ ಚಾಲನೆ: ಪೂಜ್ಯ ಶ್ರೀ ಜಗದ್ಗುರು ಮ.ನಿ.ಪ್ರ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮೀಜಿ, ಶ್ರೀಶೈಲ ಇವರ ಅಮೃತ ಹಸ್ತದಿಂದ ನಡೆಯಲಿದೆ.

ಇಂದಿನ ಪತ್ರಿಕಾ ಗೋಷ್ಠಿಯಲ್ಲಿ ಹಿರಿಯರಾದ ಪ್ರಕಾಶ ಮಾನಕರೆ, ಸುರೇಶ ಸೊಲ್ಲಾಪುರೆ, ಲಿಂಗಾನಂದ ಮಹಾಜನ, ಸುಭಾಷ ಮಿರ್ಚೆ, ಶಿವಕುಮಾರ ವಡ್ಡೆ, ಪ್ರವೀಣ ಪಾಟೀಲ, ಮಡಿವಾಳಪ್ಪ ಮಹಾಜನ, ಸಂತೋಷ ಬಿರಾದಾರ, ಅವಿನಾಶ ಶಿವನಕರ, ಬಾಲಾಜಿ ತೆಲಂಗೆ, ಪರಮೇಶ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬಾಗಲಕೋಟೆಯಲ್ಲಿ ರಾಷ್ಟ್ರಿಯ ಗ್ರಾಹಕರ ದಿನಾಚರಣೆ ವಸ್ತುಗಳ ಖರೀದಿಯಲ್ಲಿ ಜಾಗೃತಿ ಅಗತ್ಯ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ವಸ್ತುಗಳ ಖರೀದಿಯಲ್ಲಿ ಜಾಗೃತಿ ವಹಿಸಿದಾಗ ಮಾತ್ರ ಗ್ರಾಹಕರು ಮೋಸ ಹೋಗುವುದನ್ನು ತಪ್ಪಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಹಾರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಇಲಾಖೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನೋಡಲು ಒಳ್ಳೆಯ ಗುಣಮಟ್ಟದ ವಸ್ತುವಿನ ಹಾಗೆ ಕಂಡರೂ ಪರಿಶೀಲಿಸಿದ ಮೇಲೆಯೇ ಖರೀದಿಗೆ ಮುಂದಾಗಬೇಕು ಎಂದರು.

ಗ್ರಾಹಕರಿಲ್ಲದೇ ವರ್ತಕರು ವ್ಯವಹಾರ ಮಾಡಲು ಸಾಧ್ಯವಿಲ್ಲ. ಆದರೆ ವರ್ತಕರು ಒಂದಲ್ಲ ಒಂದು ರೀತಿಯಲ್ಲಿ ಗ್ರಾಹಕರಿಗೆ ಅನ್ಯಾಯ ಮಾಡುತ್ತಿದ್ದು, ವ್ಯವಹಿಸುವಾಗ ಎಚ್ಚರಿಕೆಯಿಂದ ಇರಬೇಕು. ನಾವು ಕೊಡುವ ಮೌಲ್ಯಕ್ಕೆ ತಕ್ಕ ವಸ್ತು ಆಗಿರಬೇಕು. ಬಣ್ಣ, ರುಚಿಗೆ ಮರುಳಾಗದೇ ಗುಣಮಟ್ಟದ ವಸ್ತು ಖರೀದಿಗೆ ಮುಂದಾಗಬೇಕು. ಮೋಸ ಹೋದಲ್ಲಿ ಗ್ರಾಹಕರ ವೇದಿಕೆಗೆ ದೂರು ಸಲ್ಲಿಸಬೇಕು. ಈ ಬಗ್ಗೆ ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿದಲ್ಲಿ ಮೋಸ ಹೋಗುವುದನ್ನು ತಪ್ಪಿಸಲು ಸಾಧ್ಯ ಎಂದು ಅವರು ಹೇಳಿದರು.

ಜಿ.ಪಂ ಸಿಇಓ ಶಶೀಧರ ಕುರೇರ ಮಾತನಾಡಿ, ಗ್ರಾಹಕರು ಯಾವುದೇ ಒಂದು ವಸ್ತು ಖರೀದಿಸುವ ಮುನ್ನ ಗುಣಮಟ್ಟ ಪರಿಶೀಲಿಸುವದರ ಜೊತೆಗೆ ಖರೀದಿಸಿದಕ್ಕೆ ರಸೀದಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಮೋಸ ಹೋದಲ್ಲಿ ದೂರು ಕೊಡಲು ದಾಖಲೆಗಳು ಮುಖ್ಯವಾಗಿರುತ್ತವೆ. ಈ ನಿಟ್ಟಿನಲ್ಲಿ ಗ್ರಾಹಕರಿಗೆ ಇರುವ ಹಕ್ಕುಗಳನ್ನು ಪಡೆಯಲು ಮುಂದಾಗಬೇಕು. ಆನ್‌ಲೈನ್ ವ್ಯವಸ್ಥೆಯಲ್ಲಿ ಜನ ಸಾಕಷ್ಟು ಮೋಸ ಹೋಗುತ್ತಿದ್ದಾರೆ. ನೀವು ಎಲ್ಲಿಯವರೆಗೆ ಜಾಗೃತರಾಗುವದಿಲ್ಲವೋ ಅಲ್ಲಿಯವರೆಗೆ ಮೋಸ ಮಾಡುತ್ತಾ ಬರುತ್ತಾರೆ. ಈ ಬಗ್ಗೆ ಹೆಚ್ಚಿನ ಜಾಗೃತಿ ವಹಿಸಲು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಡಿ.ವೈ.ಬಸಾಪೂರ ಮಾತನಾಡಿ, 1986 ರಲ್ಲಿ ಗ್ರಾಹಕರ ಹಿತರಕ್ಷಣಾ ಕಾಯ್ದೆ ಜಾರಿಗೆ ತಂದಾಗ ಆನ್‌ಲೈನ್ ಮಾರುಕಟ್ಟೆ ಇರಲಿಲ್ಲ. ಆಗ ನೇರ ಮಾರುಕಟ್ಟೆ ಇತ್ತು. ಇತ್ತೀಚಿನ ವರ್ಷಗಳಲ್ಲಿ ಆನ್‌ಲೈನ್ ಮಾರುಕಟ್ಟೆ ಬಂದಿರುವದರಿಂದ ಕಾಯ್ದೆಯ ನ್ಯೂನ್ಯತೆಯನ್ನು ಸರಿಪಡಿಸಿ 2019ರಲ್ಲಿ ಗ್ರಾಹರಕ ಸಂರಕ್ಷಣಾ ಕಾಯ್ದೆ ಜಾರಿಗೆ ತರಲಾಗಿದೆ. ಗ್ರಾಹಕರ ಮೋಸ ಹೋದಲ್ಲಿ ಖುದ್ದಾಗಿ ಆಯೋಗಕ್ಕೆ ದೂರು ಸಲ್ಲಿಸಬಹುದಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಮಾತನಾಡಿದರು. ನ್ಯಾಯವಾದಿ ಜೆ.ಎನ್.ಕುಲಕರ್ಣಿ ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರ ಹಾಗೂ ಬಹುಮಾನ ವಿತರಿಸಲಾಯಿತು. ಪ್ರಾರಂಭದಲ್ಲಿ ಆಹಾರ ಇಲಾಖೆ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯೆ ಸಿ.ಎಚ್.ಸಮಿಉನ್ನಿಸ್ ಅಬ್ರಾರ್, ಡಿಡಿಪಿಐ ವಿವೇಕಾನಂದ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿಗಳು, ಆಹಾರ ಇಲಾಖೆಯ ಜಿಲ್ಲಾ ವ್ಯವಸ್ಥಾಪಕರು ಹಾಗೂ ಆಹಾರ ಇಲಾಖೆಯ ಲೆಕ್ಕಾಧಿಕಾರಿ ಆರ್.ಎಸ್.ಚೌದರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಿರಂತರ ಪರಿಶ್ರಮ, ಪ್ರಯತ್ನದಿಂದ ಕನಸು ನನಸು–ಜಾನಕಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.24–ವಿದ್ಯಾರ್ಥಿಗಳು ನಿರಂತರ ಪರಿಶ್ರಮ ಮತ್ತು ಪ್ರಯತ್ನದಿಂದ ಎಂತಹ ಕನಸುಗಳನ್ನು ನನಸು ಮಾಡಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಬಾದಾಮಿ ತಾಲೂಕಿನ ಚಿರ್ಲಕೊಪ್ಪ ಜವಾಹರ ನವೋದಯ ವಿದ್ಯಾಲಯದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಮಾರ್ಗದರ್ಶನ ಮತ್ತು ವೃತ್ತಿ ಸಮಾಲೋಚನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೌಶಲ್ಯ ಕಲಿಕೆಯಿಂದ ಸ್ವಾವಲಂಬನೆ, ಸಾಮಾಜಿಕ ಭದ್ರತೆ ಹಾಗೂ ಆತ್ಮ ವಿಶ್ವಾಸ ಮೂಡುತ್ತದೆ ಎಂದರು.

ಜೀವನದಲ್ಲಿ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವ ಮನೋಭಾವ ಹೊಂದಬೇಕು. ವಿದ್ಯಾರ್ಥಿಗಳು ತಮ್ಮಲ್ಲಿರುವ ಕೌಶಲ್ಯವನ್ನು ಹೊರತೆಗೆದು ಅದರಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದಾಗಿದೆ. ಇದರೊಂದಿಗೆ ಭವಿಷ್ಯದ ಯಶಸ್ಸಿಗೆ ಇಂದಿನಿಂದ ತಯಾರಿ ನಡೆಸುವುದು ಅವಶ್ಯವಾಗಿದೆ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಜಿಲ್ಲಾ ಕೌಶಲ್ಯಾಭಿವೃದ್ದಿ ಅಧಿಕಾರಿ ಹಿರೇಮಠ ಮಾತನಾಡಿ, ಪದವಿ ಪೂರ್ವ ಶಿಕ್ಷಣದ ನಂತರದಲ್ಲಿ ವಿದ್ಯಾರ್ಥಿಗಳು ಹಲವಾರು ವೃತ್ತಿಪರ ಕೋರ್ಸಗಳನ್ನು ಆಯ್ಕೆ ಮಾಡಿಕೊಳ್ಳುವದರೊಂದಿಗೆ ಜ್ಞಾನದಿಂದ ಮಾತ್ರವಲ್ಲದೇ ಕೌಶಲ್ಯವನ್ನು ರೂಪಿಸಿಕೊಳ್ಳುವದರಿಂದ ಜೀವನದಲ್ಲಿ ಯಶಸ್ಸನ್ನು ಕಾಣಬಹುದೆಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿ ಶ್ರೀನಿವಾಸ ಕುಲಕರ್ಣಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಕಲಿಕಾ ಮತ್ತು ವೃತ್ತಿಜೀವನದಲ್ಲಿ ಆಲಿಸುವಿಕೆ ಮತ್ತು ಸಂವಹನ ಕೌಶಲ್ಯವು ಆತ್ಮವಶ್ಯಕವಾಗಿದ್ದು, ಇದರೊಂದಿಗೆ ತಮ್ಮ ಭವಿಷ್ಯದಲ್ಲಿ ತಾವು ಏನಾಗಬೇಕೆಂಬುದರ ಬಗ್ಗೆ ಯೋಜನೆಯನ್ನು ಹಾಕಿಕೊಳ್ಳಬೇಕು. ಯೋಜನೆಗೆ ತಕ್ಕಂತೆ ತಯಾರಿಯನ್ನು ನಡೆಸಬೇಕು. ಇದಕ್ಕೆ ಪೂರಕವಾಗಿ ಅಭ್ಯಾಸ ಮಾಡಿ ಜೊತೆಗೆ ಭಾಗವಹಿಸುವಿಕೆ ಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯ ಎಸ್.ಎಸ್. ಆಸಾರಿ, ದೈಹಿಕ ಶಿಕ್ಷಣ ಶಿಕ್ಷಕ ಎಂ.ಡಿ.ಮಠಪತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸ್ಥಳೀಯ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಕೇಂದ್ರ ಪುರಸ್ಕೃತ ಅಮೃತ ಮಿತ್ರ 2.0 ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಡಿಸೆಂಬರ್ 24, – ಸನ್ 2024–25ನೇ ಸಾಲಿನ ಅಮೃತ ಮಿತ್ರ 2.0 ಕಾರ್ಯಕ್ರಮದಡಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಶಹಾಪೂರ ನಗರಸಭೆ ಪೌರಾಯುಕ್ತರು ರಮೇಶ ಬಡಿಗೇರ ಅವರು ತಿಳಿಸಿದ್ದಾರೆ.

ಶಹಾಪೂರ ನಗರಸಭೆ ವ್ಯಾಪ್ತಿಯಲ್ಲಿ ಪ್ರಸ್ತುತ ಸಕ್ರೀಯದಲ್ಲಿರುವ ಸ್ಥಳೀಯ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಕೇಂದ್ರ ಪುರಸ್ಕೃತ ಅಮೃತ ಮಿತ್ರ 2.0 ಕಾರ್ಯಕ್ರಮದಡಿ ತಾಂತ್ರಿಂಕೇತರ ಚಟುವಟಿಕೆಯಡಿ ಅನುಷ್ಠಾನ ಮತ್ತು ನಿರ್ವಾಣೆಯಲ್ಲಿ ಶಹಾಪೂರ ನಗರಸಭೆ ವ್ಯಾಪ್ತಿಯ ಸಾರ್ವಜನಿಕ ಉದ್ಯಾವನನಗಳು ಮತ್ತು ಆಟದ ಮೈದಾನಗಳ ನಿರ್ವಹಣೆ ಮಾಡಲು ಆಸಕ್ತಿಯುಳ್ಳ ಸಕ್ರೀಯ ಮಹಿಳಾ ಸ್ವ–ಸಹಾಯ ಗುಂಪುಗಳಿಂದ ಅರ್ಜಿ ಆಹ್ವಾನಿಸಿದೆ.

# ಹೈದರಾಬಾದ್ ನಗರದಲ್ಲಿ ಕನಕದಾಸರ ಜಯಂತಿ ಆಚರಣೆ



(ಮಲ್ಲಪ್ಪಾ ಟಿ ಹಾಸಗೊಂಡ)
ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತೆಲಂಗಾಣ ರಾಜ್ಯದ ಹೈದರಾಬಾದನಲ್ಲಿ ಮಲ್ಲಣ್ಣ ಕುರುಮಾ ಸಂಘದ ಆಯೋಜಿಸಿದ ದಾಸ ಶ್ರೇಷ್ಠ ಭಕ್ತ ಕನಕದಾಸರ 537ನೇ ಜಯಂತಿ ಅದ್ದೂರಿಯಾಗಿ ಆಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಹಾಲುಮತದ ಗುರುಗಳಾದ ಪೂಜ್ಯ ಶ್ರೀ ರೇವಣಿದ್ದೇಶ್ವರ ಶಾಂತಮಯ ಅಪ್ಪಾಜಿಯವರು ಭಂಡಾರ ಹಾಗೂ ಕಂಬಳಿಯ ಮಹತ್ವವನ್ನು ತಿಳಿಸಿ ಎಲ್ಲರಿಗೂ ಆಶೀರ್ವದಿಸಿದರು.

ಈ ಸಂದರ್ದಲ್ಲಿ ಜಿಯಾಗುಡದ ಮಲ್ಲಣ್ಣ ಕುರುಮಾ ಸಂಘದ ಅಧ್ಯಕ್ಷರಾದ ಅಮರನಾಥ ಹಿರೋಡೆ, ಬೀದರ್ ಜಿಲ್ಲೆಯ ಹಾಲುಮತ ಸಮಾಜದ ಮುಖಂಡರಾದ ಶ್ರೀ ಬಾಲಾಜಿ ಜಾಬಾಡೆ, ಶ್ರೀನಿವಾಸ್ ಮೇತ್ರೆ, ಹಾಗೂ

ಶಿವಾಜಿ ಕುಂಟಬೀರ್, ಅನಿಲ ಮೆತ್ರೆ, ಪ್ರಭು ಪೂಜಾರಿ, ಸೇರಿದಂತೆ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

# ಜಾತಿ, ಮತ, ಪಂಥ ಮೀರಿ ನಿಂತವರು ಸದ್ಗುರು ಸಿದ್ಧಾರೂಢರು –ಕೆ.ನಟರಾಜ್



ಮಲ್ಲಮ್ಮ ನುಡಿ ವಾರ್ತೆ
(ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ: ಜಗದ್ಗುರು ಶ್ರೀ ಸಿದ್ಧಾರೂಢರ ಜಾತಿ, ಮತ, ಪಂಥ ಮೀರಿ ನಿಂತ ಸದ್ಗುರುಗಳಾಗಿದ್ದರು ಎಂದು ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಕೆ.ನಟರಾಜ್ ಹೇಳಿದರು.

ತಾಲೂಕಿನ ಚಳಕಾಪೂರ ಗ್ರಾಮದ ಬ್ರಹ್ಮವಿದ್ಯಾಶ್ರಮ ಶ್ರೀ ಸಿದ್ಧಾರೂಢ ಮಠದಲ್ಲಿ ನಡೆದ ಶ್ರೀ ಸಿದ್ಧಾರೂಢರ ಜ್ಯೋತಿ ಯಾತ್ರೆ ಚಾಲನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ನಾನು ಇಲ್ಲಿ ನ್ಯಾಯಮೂರ್ತಿಯಾಗಿ ಬಂದಿಲ್ಲ, ಸದ್ಗುರು ಶ್ರೀ ಸಿದ್ಧಾರೂಢರ ಭಕ್ತನಾಗಿ ಬಂದಿದ್ದೇನೆ. ಸದ್ಗುರು ಶ್ರೀ ಸಿದ್ದಾರೂಢರ ಜ್ಯಾತಿ, ಮತ, ಪಂಥ ಮೀರಿ ನಿಂತ ಸಾಧುವಾಗಿದ್ದರು. ಅವರ ತತ್ವಗಳು ಜಗತ್ತನ್ನು ಬೆಳಗುವ ತತ್ವಗಳಾಗಿದ್ದಾವೆ ಎಂದು ಹೇಳಿದರು.

ಇದೇವೇಳೆ ವಿಧಾನ ಸಭೆ ಉಪ ಸಭಾಪತಿ ರುದ್ರಪ್ಪ ಲಮಾಣಿ 2025 ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಸಾನಿಧ್ಯವಹಿಸಿ ಮಾತನಾಡಿದ ಚಿದಂಬರಾಶ್ರಮ ಶ್ರೀ ಸಿದ್ಧಾರೂಢ ಮಠ ಬೀದರಿನ ಶ್ರೀ ಶಿವಕುಮಾರ ಸ್ವಾಮಿಗಳು, ಸದ್ಗುರು ಶ್ರೀ ಸಿದ್ಧಾರೂಢರು 12 ಭಾಷೆಗಳನ್ನು ಬಲ್ಲವರಾಗಿದ್ದರು. ಅವರು ಯಾವ ರಾಜ್ಯದಲ್ಲಿ ಸಂಚರಿಸಿದರೋ ಆ ರಾಜ್ಯದ ಜನರ ಭಾಷೆ ಮಾತನಾಡುತ್ತಿದ್ದರು. ಭಾರತದೇಶವನ್ನೆಲ್ಲ ಸುತ್ತಿದ ಏಕೈಕ ಸ್ವಾಮಿ ಅವರಾಗಿದ್ದರು ಎಂದುದ ಹೇಳಿದರು.

ನಾಗಭೂಷಣ ಶಿವಯೋಗಿ ಮಠ ಮುಚಳಂಬಿಯ ಶ್ರೀ ಪ್ರಣವಾನಂದ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಬ್ರಹ್ಮವಿದ್ಯಾಶ್ರಮ ಶ್ರೀ ಸಿದ್ಧಾರೂಢ ಮಠ ಚಳಕಾಪೂರದ ಶ್ರೀ ಶಂಕರಾನಂದ ಸ್ವಾಮಿಗಳು ಸಾನಿಧ್ಯವಹಿಸಿದ್ದರು.

ಕಾರ್ಯಕ್ರಮದಲ್ಲಿ ಕಲಬುರಗಿಯ ಮಾತೋಶ್ರೀ ಲಕ್ಷ್ಮೀದೇವಿ ತಾಯಿ, ಗುರುದೇವಾಶ್ರಮ ಬೀದರಿನ ಮಾತೊಶ್ರೀ ಸಿದ್ದೇಶ್ವರಿ ತಾಯಿ, ಬಬಚ್ಚಡಿ ಆಶ್ರಮದ ಶ್ರೀ ಗಣೇಶಾನಂದ ಮಹಾರಾಜರು, ಮಳಚಾಪೂರದ ಶ್ರೀ ಸದ್ರೂಪಾನಂದ ಸ್ವಾಮಿಗಳು, ಬೆಳ್ಳೂರಿನ ಮಾತೆ ಅಮೃತಾನಂದಮಹಿ ತಾಯಿ, ಬಾಲಹಳ್ಳಿಯ ಶ್ರೀ ನಾಗಯ್ಯಾ ಸ್ವಾಮಿಗಳು, ಗ್ರಾ.ಪಂ. ಅಧ್ಯಕ್ಷ ಶ್ರೀಮಂತ ಕಲ್ಲೂರ ಉಪಸ್ಥಿತರಿದ್ದರು.

ಇದೇವೇಳೆ ಶ್ರೀ ಸಿದ್ಧಾರೂಢರ ಜ್ಯೋತಿ ರಥ ಯಾತ್ರೆಯು ಗ್ರಾಮದ ವಿವಿಧ ಬೀದಗಳಲ್ಲಿ ಮೆರವಣಿಗೆಯೊಂದಿಗೆ ಸಂಚರಿಸಿ, ಶ್ರೀ ಸಿದ್ಧಾರೂಢ ಮಠದಲ್ಲಿ ವಾಸ್ತವ ಹೂಡಲಾಯಿತು.

ಕಿಶೋರ ಕುಲಕರ್ಣಿ ಸ್ವಾಗತಿಸಿದರು. ನರೇಂದ್ರ ಪಾಟೀಲ ನಿರೂಪಿಸಿದರು. ಗಣೇಶಾನಂದ ಮಹಾರಾಜರು ವಂದಿಸಿದರು.

# ಸ್ಪರ್ಧಾತ್ಮಕ ಯುಗದಲ್ಲಿ ಉದ್ಯಮಿಗಳು ನೂತನ ತಾಂತ್ರಿಕತೆಗಳನ್ನು ಬಳಸಿಕೊಳ್ಳಬೇಕು–ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಡಿಸೆಂಬರ್.24––ಆಧುನಿಕ ಸ್ಪರ್ಧಾತ್ಮಕ ಯುಗದಲ್ಲಿ ಉದ್ಯಮಿಗಳ ನೂತನ ತಾಂತ್ರಿಕತೆಗಳನ್ನು ಬಳಸುವುದರ ಜೊತೆಗೆ ಮಾರುಕಟ್ಟೆ ಸ್ಪರ್ಧೆ, ಕಡಿಮೆ ಉತ್ಪಾದನಾ ವೆಚ್ಚ ಹಾಗೂ ಉತ್ತಮ ಗುಣಮಟ್ಟದ ಉತ್ಪಾದನೆಗಳ ಬಗ್ಗೆ ಹೆಚ್ಚಿನ ಗಮನವಿಡಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಹೇಳಿದರು.

ಅವರು ಮಂಗಳವಾರ ಬೀದರನ ನಾವಡಗೇರಿ ಚಿಕ್ಕಪೇಟೆ ಹತ್ತಿರವಿರುವ ಮಸ್ಟಿಫ್ ಸೆಲೆಕ್ಟ್ ಹೋಟೆಲ್‌ನಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿಟಿಪಿಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ "ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" (ಖಂಒಕ) ಯೋಜನೆಯಡಿಯಲ್ಲಿ ಹಮ್ಮಿಕೊಂಡಿದ್ದ ಲೀನ್ ಯೋಜನೆ ಮತ್ತು ಝಡ್.ಇ.ಡಿ. ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯಾವುದೇ ಉದ್ಯಮಕ್ಕೆ ಕಚ್ಚಾ ವಸ್ತು ಮುಖ್ಯ, ಕಚ್ಚಾ ವಸ್ತು ದೊರೆಯುವ ಸ್ಥಳ ಅಂತರ ಹಾಗೂ ಸಾಗಾಟದ ವೆಚ್ಚ ಸಹ ಅತೀ ಮಹತ್ವವಾಗಿರುತ್ತದೆ. ಉತ್ಪಾದನಾ ವೆಚ್ಚಗಳನ್ನು ವಿವಿಧ ಹಂತಗಳಲ್ಲಿ ಕಡಿಮೆಗೊಳಿಸುವ ಬಗ್ಗೆ ಗಮನವಿರಬೇಕು. ಸಮಯದ ಉಳಿತಾಯ, ಕಾರ್ಮಿಕರ ಲಭ್ಯತೆ, ತಾಂತ್ರಿಕತೆಯ ವೆಚ್ಚಗಳನ್ನು ಸೇರಿ ಒಟ್ಟಾರೆಯಾಗಿ ಮಾರುಕಟ್ಟೆಯ ಸ್ಪರ್ಧೆಯಲ್ಲಿ ಉತ್ತಮ ಉತ್ಪನ್ನಗಳನ್ನು ನೀಡಲು ಉದ್ಯಮಿ ಶ್ರಮಿಸಬೇಕೆಂದರು.

ಸೂಕ್ಷ್ಮ, ಸಣ್ಣ, ಮಧ್ಯಮ ಕೈಗಾರಿಕಾ ಆರಂಭಿಸುವವರಿಗೆ ಕೇಂದ್ರ ಹಾಗೂ ರಾಜ್ಯ ಸರಕಾರಗಳು ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಸಾಲ ಹಾಗೂ ಕಡಿಮೆ ಬಡ್ಡಿ ಸಹಯಧನ ಇದೆ. ಗಡಿ ಹಾಗೂ ಸಣ್ಣ ಕೈಗಾರಿಕೆ ಘಟಕಗಳ ವಿಸ್ತರಣೆಗೆ ಆಧುನಿಕರ ತಾಂತ್ರಿಕ ಉನ್ನತೀಕರಣಕ್ಕೆ ವಿವಿಧ ಸೌಲಭ್ಯಗಳು ಲಭ್ಯವಿದ್ದು ಉದ್ಯಮಿಗಳು ಸದುಪಯೋಗಪಡೆದುಕೊಳ್ಳಲು ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕಿ ಸುರೇಖಾ ಮುನೊಳಿ ಮಾತನಾಡಿ, ಸಣ್ಣ ಕೈಗಾರಿಕೆಗಳಿಂದ ಸ್ಥಳೀಯ ಆರ್ಥಿಕತೆ ಬೆಳೆವಣಿಗೆಗೆ ಅನುಕೂಲವಾಗುತ್ತದೆ. ಸರಕಾರದ ಹೊಸಯೋಜನೆಗಳನ್ನು ಉದ್ಯಮಿಗಳು ಉಪಯೋಗಿಸಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಗೌರವಾನ್ವಿತ ಅತಿಥಿಗಳಾಗಿ ಬೀದರ ಚೇಂಬರ್ ಆಫ್ ಕಾಮರ್ಸ್ ಮತ್ತು ಇಂಡ್ರಿಸ್ ಅಧ್ಯಕ್ಷರಾದ ಬಿ.ಜಿ.ಶೆಟಕಾರ, ಬೀದರ ಜಿಲ್ಲಾ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಶಿವರಾಜ ಹಲಶೆಟ್ಟಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕೈಗಾರಿಕೆಗಳ ಸಂಘದ ಅಧ್ಯಕ್ಷ ಪಿ.ವಿಜಯಕುಮಾರ, ಕೆಮಿಕಲ್ ಮತ್ತು ಫಾರ್ಮಾಸ್ಯುಟಿಕಲ್ ಸಂಘದ ಅಧ್ಯಕ್ಷ ದೇವೇಂದ್ರಪ್ಪಾ, ವಿ.ಟಿ.ಪಿ.ಸಿ, ಕಲಬುರಗಿ ಶಾಖಾ ಕಛೇರಿಯ ಸಹಾಯಕ ನಿರ್ದೇಶಕ ಜಾಫರ್ ಖಾಸಿಂ ಅನ್ಸಾರಿ, ಕಾಸಿಯಾ ಅಧ್ಯಕ್ಷರಾದ ಎಂ.ಜಿ.ರಾಜಗೋಪಾಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಯಲದಗುಂಡಿ ಶ್ರೀ ಪರಮೇಶ್ವರ ಜಾತ್ರಾ ಮಹೋತ್ಸವ ಜಗತ್ತು ಪರಮೇಶ್ವರನ ಪ್ರವಾಸಿ ತಾಣ – ಹಾರಕೂಡ ಶ್ರೀ.



(ವರದಿ. ಡಿ. ಕೆ. ಪ್ರಹ್ಲಾದ.)
ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಈ ಜಗತ್ತು ಸೃಷ್ಟಿಕರ್ತ ಪರಮೇಶ್ವರನ ಪ್ರವಾಸಿ ತಾಣವಾಗಿದ್ದು, ನಾವೆಲ್ಲ ಕೆಲ ದಿನಗಳವರೆಗೆ ಸೌಂದರ್ಯವನ್ನು ಅನುಭವಿಸಿ ಮತ್ತೆ ಹಿಂತಿರುಗಲು ಬಂದ ಪ್ರವಾಸಿಗರು ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಯಲದಗುಂಡಿ ಗ್ರಾಮದ ಶ್ರೀ ಪರಮೇಶ್ವರ ಜಾತ್ರೆಯ ಅಂಗವಾಗಿ ಏರ್ಪಡಿಸಿದ ಧರ್ಮಸಭೆಯ ಸಾನಿಧ್ಯ ವಹಿಸಿ ಮಾತನಾಡಿ ಪ್ರಕೃತಿ ಸಹಜವಾಗಿ ಜನಿಸಿದ ಪ್ರತಿ ಮನುಷ್ಯ ಭವಚಕ್ರದಲ್ಲಿ ಸಿಲುಕಿ ನರಳದೆ ಸುಖ ಯಾತ್ರಿಕನಾಗಿ ಜೀವನ ಪಯಣ ಸಾಗಿಸಲು, ಮೋಹದ ಪರದೆ ಕಳಚಲು ಭಗವದ್ ದರ್ಶನ ಪಡೆಯಲು ನಿತ್ಯ ಸಂತುಷ್ಟನಾಗಿರುವಂತಹ ಕುಶಲ ಪ್ರಜ್ಞೆ ಬೆಳೆಸಿಕೊಳ್ಳಬೇಕು. ದೇವನ ಅದ್ಭುತ ಚಿತ್ತಾರವನ್ನು ಕಂಡು ಆನಂದಿಸಬೇಕೆ ವಿನ: ತನ್ನದಾಗಬೇಕೆಂಬ ಹಪಾಹಪಿತನ ಇರಬಾರದು.

ದೇವರ ಛತ್ರ ಮುಂದಿನ ಪೀಳಿಗೆಗೆ ವ್ಯವಸ್ಥಿತವಾಗಿ ಬಿಟ್ಟು ಹೋಗಬೇಕಾದ ಗುರುತರ ಜವಾಬ್ದಾರಿ ನಮ್ಮ ಮೇಲಿದೆ ಎಂಬುದನ್ನು ಪ್ರತಿಯೊಬ್ಬರೂ ಮನಗಾಣಲೇಬೇಕಾದ ಸಂಗತಿ.

ನಾವೆಲ್ಲ ಬಂದು ಹೋಗುವ ನೆಂಟರು ಎನ್ನುವುದಕ್ಕೆ ಪರಮೇಶ್ವರನ ಜಾತ್ರೆಯೇ ದೊಡ್ಡ ನಿದರ್ಶನ, ಎಲ್ಲರ ಜೀವನ ಯಾತ್ರೆ ಸಿರಿಸೌಖ್ಯದಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

ಶಾಸಕರಾದ ಶರಣು ಸಲಗರ ಮಾತನಾಡಿ ಜಾತ್ರೆಗಳು ಮಾಡುವುದರ ಜೊತೆಗೆ ಮಕ್ಕಳಿಗೆ ಶಿಕ್ಷಣ ಹಾಗೂ ಸಂಸ್ಕಾರ ಕೊಡುವುದು ಅವಶ್ಯಕವಾಗಿದೆ.

ಜಾತ್ರೆಗಳಲ್ಲಿ ಸಾಮಾಜಿಕ ನಾಟಕಗಳ ಜೊತೆಗೆ ಧಾರ್ಮಿಕ ಹಾಗೂ ನೀತಿ ಪ್ರದಾನವಾದ ನಾಟಕಗಳು ಮಾಡುವುದರಿಂದ ಮಕ್ಕಳನ್ನು ಸುಸಂಸ್ಕೃತರನ್ನಾಗಿ ಮಾಡಬಹುದು ಎಂದು ನುಡಿದರು.

ಹಿರೇನಾಗಾಂವಿನ ಪೂಜ್ಯಶ್ರೀ ಜಯಶಾಂತಲಿಂಗ ಮಹಾಸ್ವಾಮಿಗಳು, ನೀರಾವರಿ ನಿಗಮ ಮಂಡಳಿ ಬೆಂಗಳೂರಿನ ನಿವೃತ್ತ ವ್ಯವಸ್ಥಾಪಕ ನಿರ್ದೇಶಕರಾದ ಮಲ್ಲಿಕಾರ್ಜುನ ಗುಂಗೆ, ಮುಖಂಡರಾದ ಶಿವಕುಮಾರ ಸೆಟಗಾರ, ಹುಮನಾಬಾದಿನ ಪಿಎಸ್‌ಐ ಸುರೇಶ ಚೌಹಾಣ ಮಾತನಾಡಿದರು.

ಬಸ್ವತತ್ವಪ್ರಚಾರಕರಾದ ಬಸವರಾಜ ಪಂಡಿತ, ಶಿಕ್ಷಕರಾದ ಮಲ್ಲಿನಾಥ ಹಿರೇಮಠ ಹಾರಕೂಡ, ಮುಖಂಡರಾದ ಬಾಬು ಹೊನ್ನಾನಾಯಕ, ಸಂಜು ಸುಗರೆ, ಸಂತೋಷ ಪಾಟೀಲ ಹಾರಕೂಡ, ಸಿದ್ರಾಮಪ್ಪ ಗುದಗೆ, ಸಿದ್ರಾಮಪ್ಪ ಕವಳೆ, ರತಿಕಾಂತ ಕೊಹಿನೂರ, ಸದಾನಂದ ಪಾಟೀಲ, ನಾಗೇಶ ಮಹಾಜನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಮಲ್ಲಪ್ಪ ಕೋಟೆ ಸ್ವಾಗತಿಸಿ, ನಿರೂಪಿಸಿದರು.

# ಅಮಿತ್ ಶಾ ಗಡಿಪಾರು ಮಾಡಿ ದಲಿತ ಸಂಘರ್ಷ ಸಮಿತಿ ವತಿಯಿಂದ ಬೃಹ ಪ್ರತಿಭಟನೆ




(ಮಲ್ಲಿಕಾರ್ಜುನ್ ಮಳಿಕೇರಿ)
ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ವರನ್ನು ಅವಮಾನ ಮಾಡಿ ಸಂಸತ್ ಭವನದಲ್ಲಿ ಪ್ರಜಾಪ್ರಭುತ್ವ ಕುರಿತು ಅವಹೇಳನಕಾರಿ ಮಾತನಾಡಿದ ಕೇಂದ್ರ ಗ್ರಹ ಮಂತ್ರಿ, ಅಮೀತ ಶಾರನ್ನು ಕೇಂದ್ರ ಸಂಪುಟದಿಂದಲೇ ವಜಾಮಾಡಿ ಅವರನ್ನು ಭಾರತ ದೇಶದಿಂದ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿ ಕರಾದಸಂಸ ಪ್ರೊ.ಕೃಷ್ಣಪ್ಪ ಸ್ಥಾಪಿತ ಸಮಿತಿ

ನೇತೃತ್ವದಲ್ಲಿ ತಹಶೀಲ್ದಾರ್ ಕಚೇರಿ ಮುಂದೆ ಅರೆಬೆತ್ತಲೆ ಪ್ರತಿಭಟನೆ ಮಾಡಿ ಆಗ್ರಹಿಸಿದರು.

ವಿಶ್ವನಾಯಕರೆಂದು ಕರೆದಿರುವ ಮಾಹಾನಾಯಕರ ಮಾತನಾಡಿದ್ದು ಖಂಡನೀಯವಾಗಿದೆ. ಅಲ್ಲದೆ ಡಾ.ಬಾಬಾಸಾಹೇಬರು ರಚಿಸಿದ ಸಂವಿಧಾನದಿಂದ ಪ್ರಜಾಪ್ರಭುತ್ವದ ವ್ಯವಸ್ಥೆ ಜಾರಿಗೆ ಬಂದಿದರಿಂದಲೇ

ಈ ಶಾ ಭಾರತ ದೇಶದ ಗೃಹ ಮಂತ್ರಿ ಪದವಿ ಪಡೆದುಕೊಂಡಿ–ದ್ದಾರೆ. ಇದನ್ನೆ

ಮೈ ಮರೆತು ಮಾತನಾಡಿದ ಶಾ ಅವರನ್ನು ರಾಷ್ಟ್ರಪತಿಗಳು ವಜಾಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯ ಮಾಡಿದರು.

ಈ ಸಮಯದಲ್ಲಿ ಉಪತಹಶೀಲ್ದಾರ ಸೇತುಮಾದವರಾವ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ರಾಜ್ಯ ಸಂಕಾರ್ಯದರ್ಶಿ ಹೊನ್ನಪ್ಪಗಂಗನಾಳ,, ವಿಭಾಗೀಯ ಅಧ್ಯಕ್ಷರಾದ ಸುಭಾಶ ತಳವಾರ, ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಗುತ್ತೇದಾರ ಬೇವಿನಳ್ಳಿ, ತಾಲುಕಾ ಅಧ್ಯಕ್ಷರಾದ ಮಾಳಪ್ಪ ಸಲಾದಪುರ, ಮುಖಂಡರಾದ

ಮರೆಪ್ಪ ಜಾಲಿಮೆಂಚಿ, ಪಂಡಿತ ಮತ್ನಾಳ, ಶ್ರೀಕಾಂತ ತೊಗರಿ, ಮಲ್ಲು ಡಿಗ್ರಿ, ಭೀಮರಾಯ ನಾಗನಟಗಿ, ಲಕ್ಷ್ಮಣ ಹಳಿಸಗರ, ಸಂತೋಷ ಗೋಗಿ, ಸುಜಾತಾ ಜೇವರ್ಗಿ, ತಿಪಮ್ಮ ಬುದ್ದನಗರ, ಮರಿಯಮ್ಮ ತಳವಾರ, ರೇಣುಕಾ ದಿಗ್ಗಿ, ಅಂಬಪ್ಪ ನಾಗನಟಗಿ, ವಿರೇಶ ಕಲಕೇರಿ, ಸಿದ್ದು ದಿಗ್ಗಿ, ಮರೆಯಮ್ಮ ಸಿಂದಗಿ, ಲಕ್ಷ್ಮಿ ತಳವಾರ, ಸಾಹೇಬಣ್ಣ ಸಲಾದಪುರ, ಬಸಲಿಂಗ ಕೊಳಿ, ಮಲ್ಲಮ್ಮ

ಹತ್ತಿಗೂಡೂರ ಸೇರಿದಂತೆ ಅನೇಕ ಕಾರ್ಯಕರ್ತರು ಪ್ರಗತಿಪರ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

# ಅಮೀತ ಶಾ ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರ ಒತ್ತಾಯ




(ರಾಜಕುಮಾರ ಆರ್.ಹಡಪದ)
ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕೇಂದ್ರ ಗೃಹ ಸಚಿವ ಅಮೀತ ಶಾ ರಾಜೀನಾಮೆ ಆಗ್ರಹಿಸಿ ಸ್ವಾಭಿಮಾನಿ ಡಾ. ಬಿ. ಆರ್. ಅಂಬೇಡ್ಕರ್ ಹೋರಾಟ ಸಮಿತಿ ವತಿಯಿಂದ ಸೋಮವಾರ ತಾಲೂಕಿನ ಮನ್ನಾಏಖೇಳ್ಳಿ ಗ್ರಾಮದಲ್ಲಿ ಪ್ರತಿಭಟನೆ ಮಾಡಲಾಯಿತ್ತು. ಇಲ್ಲಿಯ ಹಳೆ ಪ್ರವಾಸಿ ಮಂದಿರದಿಂದ ಅಂಬೇಡ್ಕರ್ ವೃತದವರೆಗೆ ಧಿಕ್ಕಾರ ಕೂಗುತ್ತಾ ಪ್ರತಿಭಟನಾ ಮೆರವಣಿಗೆ ನಡೆಸಿದರು. ಸರ್ಕಾರ ಉನ್ನತ ಹುದ್ದೆಯಲ್ಲಿ ಇರುವ ಅಮಿತ್ ಶಾ ಅಂಬೇಡ್ಕರ್ ಕುರಿತು ಅವಹೇಳನಕಾರಿ ಮಾತಾಡಿದ್ದು ಖಂಡನೀಯ. ಇಂತಹವರಿಂದ ದೇಶದಲ್ಲಿ ಅಶಾಂತಿ ಮೂಡುತ್ತಿದೆ, ಅಮೀತ ಶಾ ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರು ತಿಳಿಸಿದರು. ರಾಷ್ಟ್ರಪತಿಗೆ ಬರೆದ ಮನವಿ ಪತ್ರವನ್ನು ಉಪ ತಹಸೀಲ್ದಾರ್ ಮೂಲಕ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸ್ವಾಭಿಮಾನಿ ಡಾ.ಬಿ.ಆರ್.ಅಂಬೇಡ್ಕರ್ ಹೋರಾಟ ಸಮಿತಿ ಅಧ್ಯಕ್ಷ ಶಿವಕುಮಾರ್ ಮಂಗಲಗಿಕರ್, ಶಿವಕುಮಾರ ಮುತ್ತಂಗಿಕರ್, ರಾಜಕುಮಾರ ಅಗಸಿ, ಗೌತಮ್ ಬಗದಲಕರ್, ಲಕ್ಷ್ಮಣ ಸಾತನೋರ, ಪ್ರಹ್ಲಾದ್ ಮಾಲೆಕರ, ಶಾಂತಕುಮಾರ ಪಟ್ನೆ, ಕುಪೇಂದ್ರ ಕಾಂಬ್ಳೆ, ಜೀವನ ಬುಡ್ತಾ, ದೇವಿಂದ್ರ ಬಸಲಾಪುರ, ಲೋಕೇಶ ಗುಪ್ತ, ಕಾಶೀನಾಥ ಬಗದಲ, ರಾಜು ಬೋರಾಳೆ, ದಿಲೀಪ ಬೋರಾಳ, ಭರತ್ ಜಾಬಾ, ಬಸವರಾಜ ಹೊಚಕನಳ್ಳಿ, ವಿಲನ ಕೊಳ್ಳುರ್, ನೀಲಕಂಠ, ತಿಪ್ಪಣ್ಣ ಮಾಲೆ, ಪ್ರಶಾಂತ ವಿದ್ಯಾಸಾಗರ, ಪ್ರಶಾಂತ, ಕರಬಸಪ್ಪ, ಯೂಸುಫ್ ಅಲಿ ಜಮಾದಾರ, ಮಾಸ್ತನ್ ನೂರೋದ್ದಿನ್, ಸೈಯದ್ ನೈಮತ್, ಪ್ರಶಾಂತ ಪ್ರೀಯ, ಗೌತಮ್ ಹೋಚಕನಳ್ಳಿ, ರಾಹುಲ ಸಿರಕಟನಳ್ಳಿ, ಸಂತೋಷ ಕಮಲಾಪುರ್, ಮಾರುತಿ ವಾಘೆ ಖುದ್ದುಸ್, ರಮೇಶ ರತನ ಪ್ರೇಮನಾಥ ಬೋರಾಳೆ, ದಿಲೀಪಕುಮಾರ ವರ್ಮಾ, ಮಹಾಂತೇಶ್ ರೇಕುಳಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಶಕ್ತಿ ಏನು ಎಂಬುದು ನಮಗಿಂತ ಚೆನ್ನಾಗಿ ಬಿಜೆಪಿಯವರಿಗೆ ಗೊತ್ತಿದೆ: ಡಿ.ಕೆ ಶಿವಕುಮಾರ್



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ: ಕಾಂಗ್ರೆಸ್ ಪಕ್ಷದ ಶಕ್ತಿ ಏನು ಎಂಬುದು ನಮಗೂ ಗೊತ್ತಿದೆ, ನಮಗಿಂತ ಚನ್ನಾಗಿ ಬಿಜೆಪಿಯವರಿಗೂ ಗೊತ್ತಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬೆಳಗಾವಿ ಸರ್ಕಿಟ್ ಹೌಸ್ ನಲ್ಲಿ ಮಾತನಾಡಿದ ಅವರು, ಬಿಜೆಪಿಯ ಬೆಳಗಾವಿ ಚಲೋ ಬಗ್ಗೆ ಪ್ರತಿಕ್ರಿಯಿಸಿದರು, ಈಗ ಆ ಮಾತು ಏಕೆ. ಯಾರಾದರೂ ಕೆಡಿಸುವ ಪ್ರಯತ್ನ ಮಾಡಲಿ. ಕಾಂಗ್ರೆಸ್ ಪಕ್ಷದ ಶಕ್ತಿ ಅವರಿಗೂ ಗೊತ್ತಿದೆ. ನಮಗೂ ಗೊತ್ತಿದೆ. ಮೊದಲು ಐತಿಹಾಸಿಕ ಕಾರ್ಯಕ್ರಮ ಮಾಡುವ ಮೂಲಕ ಇತಿಹಾಸದ ಪುಟ ಸೇರೋಣ ಎಂದು ತಿಳಿಸಿದರು. ಬೆಳಗಾವಿಯು ಐತಿಹಾಸಿಕ ಕಾರ್ಯಕ್ರಮಕ್ಕೆ ಸಾಕ್ಷಿಯಾಗುತ್ತಿದೆ. ಹೀಗಾಗಿ ಬೆಳಗಾವಿಯಲ್ಲಿ ದೀಪಾಲಂಕಾರ ಮಾಡಲಾಗಿದ್ದು, ಸಾರ್ವಜನಿಕರು ಈ ವೈಭವವನ್ನು ಕಣ್ತುಂಬಿಕೊಳ್ಳಬೇಕು ಎಂದು ತಿಳಿಸಿದರು.

ಮಹಾತ್ಮಾ ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಅಧಿವೇಶನದ ಬಗ್ಗೆಯೂ ಮಾಹಿತಿ ನೀಡಲಾಗಿದೆ. ಈ ಕಾರ್ಯಕ್ರಮವನ್ನು ಪಕ್ಷದ ದೃಷ್ಟಿಯಿಂದ ನೋಡಬೇಡಿ. ಕಾಂಗ್ರೆಸ್ ಪಕ್ಷ ಯಾವುದೇ ಕಾರ್ಯಕ್ರಮ ಮಾಡಿದರು, ಪಕ್ಷದ ಕಾರ್ಯಕ್ರಮವನ್ನಾಗಿ ಮಾಡುವುದಿಲ್ಲ. ದೇಶದ ಇತಿಹಾಸ ಹಾಗೂ ದೇಶವನ್ನು ಯಾವ ದಿಕ್ಕಿನಲ್ಲಿ ಮುನ್ನಡೆಸಬೇಕು ಎನ್ನುವುದನ್ನು ಗಮನದಲ್ಲಿಟ್ಟು ಕೊಂಡು ಕಾರ್ಯಕ್ರಮ ಮಾಡುತ್ತದೆ. ಹೀಗಾಗಿ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಕರೆನೀಡುತ್ತೇನೆ ಎಂದು ಹೇಳಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಯಕರು ಎಂದು ಎನಿಸಿಕೊಂಡವರು ಈ ಕಾರ್ಯಕ್ರಮಕ್ಕೆ ಆಗಮಿಸಬೇಕು. ರಾಜ್ಯದ ವಿವಿಧ ಮೂಲೆಗಳಿಂದ ಸಾವಿರಾರು ಜನರನ್ನು ಕರೆತನ್ನಿ ಎಂದು ಹೇಳುವುದಿಲ್ಲ. ನೂರು ಜನರನ್ನು ಕರೆದುಕೊಂಡು ಬಂದರೂ ಸಾಕು. ಕಾರ್ಯಕ್ರಮ ನಡೆಯುವ ಜಾಗಗಳಿಗೆ ಭೇಟಿ ನೀಡಿ ಪೂರ್ವ ಸಿದ್ಧತೆ ಪರಿಶೀಲನೆ ಮಾಡುತ್ತಿದ್ದೇನೆ. ಇಂದು ಎಲ್ಲಾ ಸಿದ್ಧತೆ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

26ರಿಂದ ಅಧಿಕೃತ ಕಾರ್ಯಕ್ರಮ ಆರಂಭವಾಗಲಿದೆ. 26ರಂದು ಬೆಳಗ್ಗೆ ಕೆಲವು ಸ್ಥಳಗಳಲ್ಲಿ ಉದ್ಘಾಟನಾ ಕಾರ್ಯಕ್ರಮಗಳಿವೆ. 1924ರಲ್ಲಿ ಮಹಾತ್ಮಾ ಗಾಂಧೀಜಿಯವರ ನೇತೃತ್ವದಲ್ಲಿ ಬೆಳಗಾವಿ ಅಧಿವೇಶನ ಡಿ. 26ರ ಮಧ್ಯಾಹ್ನ 3 ಗಂಟೆಗೆ ನಡೆದಿತ್ತು. 26ರಂದು ಅದೇ ಸಮಯಕ್ಕೆ ಪಕ್ಷದ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. 27ರಂದು ಬೆಳಗ್ಗೆ 10.30ಕ್ಕೆ ಸರ್ಕಾರದ ವತಿಯಿಂದ ಸುವರ್ಣಸೌಧ ಆವರಣದಲ್ಲಿ ಗಾಂಧಿ ಪ್ರತಿಮೆ ಅನಾವರಣ ಮಾಡಲಾಗುವುದು. ಅಂದು ಸುವರ್ಣ ಸೌಧದಲ್ಲಿ ಫೋಟೋ ಸೆಷನ್, ಭೋಜನ ಕೂಟವಿದೆ. 27ರಂದು ಮಧ್ಯಾಹ್ನ 12 ಗಂಟೆಗೆ ಸಾರ್ವಜನಿಕ ಸಭೆ ನಡೆಯಲಿದೆ" ಎಂದು ತಿಳಿಸಿದರು.

# ಸಂಯಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 24–ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ 2024–25ನೇ ಸಾಲಿನ "ಸಂಯಮ ಪ್ರಶಸ್ತಿ"ಗೆ ಅರ್ಜಿ ಆಹ್ವಾನಿಸಿದೆ.

ವ್ಯಸನ ಮುಕ್ತ ಸಮಾಜ ನಿರ್ಮಾಣ. ಮದ್ಯ ಮತ್ತು ಮಾದಕ ವಸ್ತುಗಳಿಂದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಹಾಗೂ ಮದ್ಯ ವ್ಯಸನಗಳನ್ನು ಗುರುತಿಸಿ ಅವರಗಳ ಜೀವನ ಪರಿವರ್ತನೆಗಾಗಿ ಮತ್ತು ಪುನಃ ವಸತಿಗಳಿಗಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ಆಸಕ್ತಿಯುಳ್ಳ ವ್ಯಕ್ತಿ ಹಾಗೂ ಸಂಘ ಸಂಸ್ಥೆಗಳಿಗೆ 2025ರ ಜನವರಿ 15 ರೊಳಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ.

**ನಗರಸಭೆ ಕಾರ್ಯಾಲಯ, ಬೀದರ**

ಸಂಖ್ಯೆ:ಬಿಎಂಸಿ/ಎನ್‌ಜಿ/ಸಿಆರ್–401/2024–25 ದಿನಾಂಕ:21–12–2024

**:: ಟೆಂಡರ್ ಪ್ರಕಟಣೆ ::**

1) ಕಾಮಗಾರಿ / ಸರಕು / ಸೇವೆಯ ವಿವರ: DMA/2024-25/EL/WORK_INDENT32301, DMA/2024-25/OW/WORK_INDENT33991, 2) ಕಾಮಗಾರಿಯ ಅಂದಾಜು ಮೊತ್ತ: e-portal ನಲ್ಲಿ ನಮೂದಿಸಿದಂತೆ, 3) ಗುತ್ತಿಗೆದಾರರ ಅರ್ಹತೆ ವಿವರ: e-portal ನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ: e-portal ನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು : **07-01-2025 upto 04.00 PM**, 6) ಟೆಂಡರ ತೆರೆಯುವ ದಿನಾಂಕ: **08-01-2025 at 04.30 PM**, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಪೌರಾಯುಕ್ತರು, ನಗರಸಭೆ ಬೀದರ. ಇ–ಮೇಲ್: itstaff_ulb_bidar@yahoo.com 08482-240432, 8) ಅಂತರಜಾಲ ತಾಣದ ವಿಳಾಸ: **https://kppp.karnataka.gov.in/**

ಸಹಿ/– ಪೌರಾಯುಕ್ತರು
ನಗರಸಭೆ ಬೀದರ

ವಾ.ಸಾ.ಸಂ.ಇ/ಬೀದರ/311/ಕೆ.ಎಸ್.ಎಂ.ಸಿ.&ಎ/2024–25

Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy. Office Ph. No: +91 9449732000.